ಸಂಪುಟ: 05 ಸಂಚಿಕೆ: 123 ಪುಟಗಳು: 08 ಬುಧವಾರ 16 ಜುಲೈ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನಾವೆಲ್ಲರೂ ಯಾವುದೇ ಕ್ಷಣದಲ್ಲಿ ವಿವಿಧ ಹಂತದ ಅನುಗ್ರಹದಿಂದ ಬೆಳಕಿನ ಕಡೆಗೆ ಎಡವಿ ಬೀಳುತ್ತಿದ್ದೇವೆ.

## ಕೋವಿಡ್ ಲಸಿಕೆಗೂ ಹೃದಯಾಘಾತ ಪ್ರಕರಣಗಳಿಗೂ ಯಾವುದೇ ಸಂಬಂಧವಿಲ್ಲ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಈಗ ಹೆಚ್ಚಾಗುತ್ತಿರುವ ಹೃದಯಾಘಾತ ಪ್ರಕರಣಗಳ ಕುರಿತು ಜನರು ಆತಂಕ ಪಡುವ ಅಗತ್ಯವಿಲ್ಲ. ಕೋವಿಡ್ ಲಸಿಕೆಗೂ ಹಾಸನದಲ್ಲಿ ಸಂಭವಿಸಿದ ಹೃದಯಾಘಾತ ಪ್ರಕರಣಗಳಿಗೂ ಯಾವುದೇ ಸಂಬಂಧವಿಲ್ಲ. ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಶರಣ್ ಪ್ರಕಾಶ್ ಆರ್. ಪಾಟೀಲ್ ತಿಳಿಸಿದರು.

ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರೊಂದಿಗೆ ವಿಕಾಸ ಸೌಧದಲ್ಲಿ ಜಂಟಿ ಮಾಧ್ಯಮಗೋಷ್ಠಿ ಉದ್ದೇಶಿಸಿ ಮಾತನಾಡಿದ ಸಚಿವರು, ಸರ್ಕಾರ ಈ ವಿಷಯದಲ್ಲಿ ಸೂಕ್ತ ಕ್ರಮಗಳನ್ನು ಕೈಗೊಳ್ಳುತ್ತಿದೆ. ಜನರು ಆತಂಕಪಡಬಾರದು ಎಂದು ತಿಳಿಸಿದರು. ಹಾಸನದಲ್ಲಿ ಹೃದಯಾಘಾತ ಪ್ರಕರಣ ಹೆಚ್ಚುತ್ತಿವೆ ಎನ್ನುವ ಸುದ್ದಿ ಕೇಳಿ ಜಯದೇವ ಆಸ್ಪತ್ರೆ ಸೇರಿದಂತೆ ಆನೇಕ ಆಸ್ಪತ್ರೆಗಳಲ್ಲಿ ರೋಗಿಗಳ ಸಂಖ್ಯೆ ಮತ್ತು ಮುಂಜಾಗ್ರತೆ ಕ್ರಮ ತೆಗೆದುಕೊಳ್ಳುವವರ ಸಂಖ್ಯೆಯೂ ಗಣನೀಯವಾಗಿ ಏರಿಕೆಯಾಗಿದೆ. ಇದರಿಂದ ವಿಚಿತ್ರ ಸನ್ನಿವೇಶ ಎದುರಾಗುತ್ತಿದೆ ಎಂದು ಸಚಿವರು ತಿಳಿಸಿದರು.



**ವರ್ಷಕ್ಕೊಮ್ಮೆ ಹೃದಯ ತಪಾಸಣೆ ಮಾಡಿಸಿ**

**ವ್ಯಾಕ್ಸಿನ್ ಬಗ್ಗೆ ಅನುಮಾನ ಬೇಡ:** ಕೋವಿಡ್ ಲಸಿಕೆಗೂ ಹಾಸನದಲ್ಲಿ ಸಂಭವಿಸಿದ ಹೃದಯಾಘಾತ ಪ್ರಕರಣಗಳಿಗೂ ಯಾವುದೇ ಸಂಬಂಧವಿಲ್ಲ. ವ್ಯಾಕ್ಸಿನ್ ಬಗ್ಗೆ ಅನುಮಾನ ಬೇಡ. ಹಾಸನ ಜಿಲ್ಲೆಯಲ್ಲಿ ಹೃದ್ರೋಗ ಪ್ರಕರಣ ಬೇರೆ ಆಗಿದೆ ಅನ್ನೋದು ತಪ್ಪು ಎಂದು ಡಾ. ಪಾಟೀಲ್ ವಿವರಿಸಿದರು.

ಹೃದಯಾಘಾತದ ಆತಂಕ ಕೈಬಿಟ್ಟು ಉತ್ತಮ ಜೀವನಶೈಲಿ, ಅಗತ್ಯ ನಿದ್ರೆ ಮತ್ತು ದೈಹಿಕ ವ್ಯಾಯಾಮ ಮಾಡುವುದು ಅಗತ್ಯ. ಹೃದಯಾಘಾತದ ರೋಗ ಲಕ್ಷಣಗಳು ಇದ್ದರೆ ಮಾತ್ರ ಆಸ್ಪತ್ರೆಗೆ ಹೋಗಿ ತಪಾಸಣೆ ಮಾಡಿಸಿಕೊಳ್ಳಿ. ಸುಖಾಸುಮ್ಮನೆ ಹೋಗಬೇಡಿ, ಎಂದು ಸಚಿವರು ಕಿವಿಮಾತು ಹೇಳಿದರು.

**ಯುವಕರಲ್ಲೇ ಹೃದಯಾಘಾತ ಹೆಚ್ಚು:** ಜಯದೇವ ಸಂಸ್ಥೆಯ ನಿರ್ದೇಶಕ ಡಾ.ರವೀಂದ್ರನಾಥ್ ಹೇಳೋದೇನು?

**ಹಾಸನ ಪ್ರಕರಣ ಕುರಿತು ಅಧ್ಯಯನ:** ಹಾಸನ ಪ್ರಕರಣದಲ್ಲಿ 24 ಮಂದಿ ಮೃತರ ಕುರಿತು ಅಧ್ಯಯನ ನಡೆಸಲಾಗುತ್ತಿದೆ. 20 ಪ್ರಕರಣಗಳಲ್ಲಿ 10 ಹಾರ್ಟ್ ಅಟ್ಯಾಕ್ ಆಗಿದೆ. ಇತರೆ ಕಾರಣಗಳಿಂದ ಸಾವು ಸಂಭವಿಸಿವೆ ಎನ್ನುವುದು ಪ್ರಾಥಮಿಕ ವರದಿಗಳಿಂದ ತಿಳಿದುಬಂದಿದೆ ಎಂದು ಪಾಟೀಲರು ಹೇಳಿದರು.

ಜಯದೇವ ಆಸ್ಪತ್ರೆಗಳಲ್ಲಿ ಹೃದ್ರೂಗ ತಜ್ಞ ಡಾ ಕೆ. ಎಸ್. ರವೀಂದ್ರನಾಥ್ ಅವರ ನೇತೃತ್ವದಲ್ಲಿ ಅನಾಲಿಸಿಸ್ ಆಗಿದ್ದು. ಹೃದಯಾಘಾತ ಸಂಬಂಧ ಸಾವು ಹೆಚ್ಚಾಗಿಲ್ಲ. ಈ ಹಿಂದೆ ಆಗ್ತಾ ಇತ್ತು. ಈಗಲೂ ಆಗ್ತಾ ಇದೆ ಎಂದು ವಿವರಿಸಿದರು. ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮಾತನಾಡಿ, ಮಕ್ಕಳಲ್ಲಿ ಸ್ಕ್ರೀನಿಂಗ್ ಮಾಡುವ ಅಗತ್ಯವಿಲ್ಲ. ಜನರಿಗೆ ಜಯದೇವ ಆಸ್ಪತ್ರೆಯಿಂದ ಅರಿವು ಮೂಡಿಸುವ ಕಾರ್ಯಕ್ರಮ ಆಯೋಜಿಸುತ್ತೇವೆ. ರಸ್ತೆ ಬದಿ ಆಹಾರ ಮತ್ತು ಆಹಾರ ತಯಾರಿಸುವ ವಿಧಾನದ ಬಗ್ಗೆ ಕಟ್ಟುನಿಟ್ಟಿನ ಕ್ರಮವಹಿಸುತ್ತಿದ್ದೇವೆ ಎಂದರು. ಈ ಹಿಂದಿನ ಆಹಾರ ಪದ್ಧತಿ ಮುಂದುವರಿಸಿ ಎಂದು ದಿನೇಶ್ ಗುಂಡೂರಾವ್ ಹೇಳಿದರು.

### ಕೋವಿಡ್ ನಂತರ ಜನರ ಜೀವನ ಶೈಲಿ ಬದಲು

**ಕೋವಿಡ್ ನಂತರದ ಜೀವನ ಶೈಲಿಯಿಂದ ಡಯಾಬಿಟಿಸ್ , ಬಿಪಿ ಹೆಚ್ಚಾಗಿದೆ. ಆಹಾರ ಪದ್ಧತಿ ಬದಲಾಗಿದೆ , ಒತ್ತಡ ಜಾಸ್ತಿ ಆಗಿದೆ. ಈ ಮಧ್ಯೆ ಯುವಕರಲ್ಲಿ ಯಾಕೆ ಸಾವು ಆಗ್ತಿದೆ ಅಂತ ಅಧ್ಯಯನ ಮಾಡುತ್ತಿದ್ದೇವೆ ಎಂದು ಡಾ. ಪಾಟೀಲ್ ತಿಳಿಸಿದರು. ಜನವರಿಯಲ್ಲಿ 178 ಜನರು ಅಡ್ಮಿಟ್ ಆಗಿದ್ದರು 11 ಜನ ಮೃತಪಟ್ಟಿದ್ದಾರೆ. ಫೆಬ್ರವರಿಯಲ್ಲಿ 181 ಜನರ ಪೈಕಿ 10 ಜನ, ಮಾರ್ಚ್‌ನಲ್ಲಿ 200 ಜನರಲ್ಲಿ 9 ಜನ ಹಾಗೂ ಬೆಂಗಳೂರಲ್ಲಿ 2165 ಜನ ದಾಖಲಾಗಿದ್ದು, ಈ ಪೈಕಿ 101 ಜನ ಮೃತಪಟ್ಟಿದ್ದಾರೆ ಎಂದು ಮಾಹಿತಿ ನೀಡಿದರು. ವರ್ಷಕ್ಕೆ ಒಂದು ಬಾರಿ ಹೃದಯ ತಪಾಸಣೆ ಮಾಡಿಸಿದರೆ ಸಾಕು. ಆತಂಕದಿಂದ ಆಸ್ಪತ್ರೆಗೆ ಹೋಗೋದು ಬೇಡ ಎಂದು ಸಚಿವ ಡಾ. ಪಾಟೀಲ್ ತಿಳಿಸಿದರು.**

## ಡಾ. ಚಂದ್ರಗುಪ್ತ, ಅನುಚೇತ್ ಸೇರಿ ಐಪಿಎಸ್ ಅಧಿಕಾರಿಗಳ ವರ್ಗಾವಣೆ

• ಉದಯವಾಹಿನಿ, ಬೆಂಗಳೂರು

ರಾಜ್ಯ 35 ಐಪಿಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಅದೇಶ ಹೊರಡಿಸಿದೆ.

ಡಾ. ಚಂದ್ರಗುಪ್ತ ಐಜಿಪಿ, ಈಶಾನ್ಯ ವಲಯ, ಕಲಬುರಗಿ: ಅಜಯ್ ಇರೋಳಿ– ಜಂಟಿ ಕಮಿಷನರ್, ಬೆಂಗಳೂರು ಅಪರಾಧ ವಿಭಾಗ: ಎಂ.ಎನ್.ಅನುಚೇತ್– ಡಿಐಜಿಪಿ, ನೇಮಕಾತಿ: ಯಡಾ ಮಾರ್ಟಿನ್ ಮಾರ್ಬನ್ಯಾಂಗ್ ಡಿಐಜಿಪಿ, ಆಡಳಿತ, ಬೆಂಗಳೂರು: ವರ್ತಿಕಾ ಕಟಿಯಾರ್–ಡಿಐಜಿಪಿ, ಬಳ್ಳಾರಿ ವಲಯ: ಕಾರ್ತಿಕ್ ರೆಡ್ಡಿ– ಜಂಟಿ ಕಮಿಷನರ್. ಬೆಂಗಳೂರು ಸಂಚಾರ: ಕೆ.ಎಂ. ಶಾಂತರಾಜು– ಎಸ್ಪಿ, ಗುಪ್ತಚರ: ಡಿ.ಆರ್. ಸಿರಿ ಗೌರಿ– ಎಸ್ಪಿ, ರಾಜ್ಯ ಅಪರಾಧ ದಾಖಲೆಗಳ ಬ್ಯುರೊ (ಎಸ್‌ಸಿಆರ್‌ಬಿ).

ಕೆ.ಪರಶುರಾಮ ಡಿಸಿಪಿ, ವೈಟ್ ಫೀಲ್ಡ್, ಬೆಂಗಳೂರು: ಡಾ. ಅನೂಪ್ ಎ. ಶೆಟ್ಟಿ– ಡಿಸಿಪಿ, ಸಂಚಾರ, ಪಶ್ಚಿಮ ಬೆಂಗಳೂರು: ಡಾ. ಸುಮನ್ ಡಿ. ಪೆನ್ನೆಕರ್– ಡಿಸಿಪಿ, ಗುಪ್ತಚರ; ಶಿವಪ್ರಕಾಶ್ ದೇವರಾಜು– ಎಸ್ಪಿ, ಲೋಕಾಯುಕ್ತ; ಜಯಪ್ರಕಾಶ್– ಡಿಸಿಪಿ, ಸಂಚಾರ, ಉತ್ತರ– ಬೆಂಗಳೂರು: ಎಂ. ನಾರಾಯಣ ಡಿಸಿಪಿ, ಎಲೆಕ್ಟ್ರಾನಿಕ್ ಸಿಟಿ, ಬೆಂಗಳೂರು: ಅನಿತಾ ಭೀಮಪ್ಪ ಹದ್ದಣ್ಣವರ ಡಿಸಿಪಿ, ನೈರುತ್ಯ; ಅಕ್ಷಯ್ ಮಚ್ಚೇಂದ್ರ– ಡಿಸಿಪಿ, ಸೆಂಟ್ರಲ್ ಬೆಂಗಳೂರು: ಡಿ.ಎಲ್. ನಾಗೇಶ್ – ಡಿಸಿಪಿ, ವಾಯವ್ಯ ಬೆಂಗಳೂರು: ಸಿಮಿ ಮರಿಯಂ ಜಾರ್ಜ್– ಡಿಸಿಪಿ, ಸಂಚಾರ, ದಕ್ಷಿಣ ಬೆಂಗಳೂರು.

## ದೇಗುಲ ಪ್ರಕರಣ: ಭಾಷಣ ಬೇಡ–ಕಾನೂನು ತೋರಿಸಿ

• ಉದಯವಾಹಿನಿ, ಬೆಂಗಳೂರು

'ನಾನು ಕಾನೂನು ತಳಹದಿಯ ಮೇಲೆ ಸರ್ಕಾರದ ಆದೇಶವನ್ನು ಆಕ್ಷೇಪಿಸಿದರೆ ನೀವು ಮುಜರಾಯಿ ವಿಚಾರಣೆಯ ಅನವಶ್ಯಕ ವಿವರಣೆಯನ್ನು ಓದುತ್ತಿದ್ದೀರಿ. ನಿಮಗೆ ಭಾಷಣ ಮಾಡಬೇಕು ಎನಿಸಿದ್ದರೆ ಕೋರ್ಟ್‌ನಿಂದ ಆಚೆ ಹೋಗಿ ಮಾಡಿ. ನಗರದ ಪ್ರಸಿದ್ಧ ಗಾಳಿ ಆಂಜನೇಯ ಸ್ವಾಮಿ ದೇವಾಲಯವನ್ನು ಮುಜರಾಯಿ ಇಲಾಖೆ ಸುಪರ್ದಿಗೆ ಒಪ್ಪಿಸಿರುವ ಸರ್ಕಾರದ ಕ್ರಮವನ್ನು ಪ್ರಶ್ನಿಸಲಾದ ಅರ್ಜಿ ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು ಸರ್ಕಾರದ ಪರ ಹಾಜರಿದ್ದ ಹೆಚ್ಚುವರಿ ಅಡ್ವಕೇಟ್ ಜನರಲ್ ಅವರ ಪ್ರತಿಪಾದನೆಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಪರಿ ಇದು. ಈ ಕುರಿತ ಅರ್ಜಿಯನ್ನು ನ್ಯಾಯಮೂರ್ತಿ ಎಸ್.ಸುನಿಲ್ ದತ್ ಯಾದವ್ ಅವರಿದ್ದ ಏಕಸದಸ್ಯ ನ್ಯಾಯಪೀಠ ಮಂಗಳವಾರ ವಿಚಾರಣೆ ನಡೆಸಿತು. ವಿಚಾರಣೆ ವೇಳೆ ಸರ್ಕಾರದ ಪರ ಹಾಜರಿದ್ದ ಹೆಚ್ಚುವರಿ ಅಡ್ವಕೇಟ್ ಜನರಲ್ ಎನ್.ದೇವದಾಸ್, 'ದೇಗುಲದಲ್ಲಿ ಹಣದ ಲೂಟಿಯಾಗುತ್ತಿದೆ. ಹಾಗಾಗಿಯೇ, ಸರ್ಕಾರ ವಿಚಾರಣೆ ನಡೆಸಿ ಮುಜರಾಯಿ ಸುಪರ್ದಿಗೆ ತೆಗೆದುಕೊಂಡಿದೆ' ಎಂದು ಸುದೀರ್ಘ ವಿಚಾರಣಾ ವರದಿಯನ್ನು ಓದಿದರು.

## ಲಂಚ ಪ್ರಕರಣದಲ್ಲಿ ಮಾಜಿ ಕಾರ್ಪೊರೇಟರ್‌ನ ಜೈಲು ಶಿಕ್ಷೆ ರದ್ದು

• ಉದಯವಾಹಿನಿ, ಬೆಂಗಳೂರು

ಕಟ್ಟಡ ನಿರ್ಮಾಣಕ್ಕೆ ಅನುಮತಿ ನೀಡಲು 2 ಲಕ್ಷ ರೂ. ಲಂಚ ಪಡೆದ ಆರೋಪದ ಮೇರೆಗೆ ಗಣೇಶ ಮಂದಿರ ವಾರ್ಡ್‌ನ ಮಾಜಿ ಪಾಲಿಕೆ ಸದಸ್ಯ ಎಲ್ ಗೋವಿಂದರಾಜುಗೆ ಲೋಕಾಯುಕ್ತ ವಿಶೇಷ ನ್ಯಾಯಾಲಯ ವಿಧಿಸಿದ್ದ ನಾಲ್ಕು ವರ್ಷಗಳ ಶಿಕ್ಷೆಯನ್ನು ಹೈಕೋರ್ಟ್ ರದ್ದುಪಡಿಸಿದೆ. ಶಿಕ್ಷೆ ರದ್ದು ಕೋರಿ ಗೋವಿಂದರಾಜು ಮತ್ತು ಶಿಕ್ಷೆಯ ಪ್ರಮಾಣ ಹೆಚ್ಚಳ ಮಾಡಬೇಕು ಎಂದು ಕೋರಿ ಲೋಕಾಯುಕ್ತ ಪೊಲೀಸರು ಸಲ್ಲಿಸಿದ್ದ ಎರಡೂ ಅರ್ಜಿಗಳ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ ಜಿ ಉಮಾ ಅವರಿದ್ದ ಏಕಸದಸ್ಯ ಪೀಠ, ಈ ಆದೇಶ ನೀಡಿದೆ. ಅಲ್ಲದೆ, ಪ್ರಕರಣ ಸಂಬಂಧ ನಡೆದ ತನಿಖಾ ಪ್ರಕ್ರಿಯೆಯಲ್ಲಿ ಕೆಲವು ಲೋಪದೋಷಗಳಿದ್ದು, ಆರೋಪ ಸಾಬೀತುಪಡಿಸುವಲ್ಲಿ ಹಾಗೂ ಪೂರಕವಾದ ಸಾಕ್ಷ್ಯಾಧಾರಗಳನ್ನು ಒದಗಿಸಲು ಲೋಕಾಯುಕ್ತ ಪೊಲೀಸರು ವಿಫಲರಾಗಿದ್ದಾರೆ ಎಂದು ನ್ಯಾಯಪೀಠ ತಿಳಿಸಿದೆ.

## ಗಗನ ಕುಸುಮ ಶುಭಾಂಶು ಶುಕ್ಲಾ

### ಭಾರತದ ಬಾಹ್ಯಾಕಾಶ ಭವಿಷ್ಯಕ್ಕೆ ಶುಭಾಂಶು ಕೊಡುಗೆ




• ಉದಯವಾಹಿನಿ, ಹೊಸದಿಲ್ಲಿ

ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ 18 ದಿನಗಳ ವಾಸ್ತವ್ಯದ ನಂತರ ಭಾರತೀಯ ಗಗನಯಾತ್ರಿ, ಐಎಎಫ್ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಸೇರಿ ನಾಲ್ವರು ಗಗನಯಾತ್ರಿಗಳ ಕ್ಯಾಲಿಫೋರ್ನಿಯಾದ ಸ್ಯಾನ್ ಡಿಯಾಗೋ ಕರಾವಳಿಯಲ್ಲಿ ಯಶಸ್ವಿಯಾಗಿ ಬಂದಿಳಿದಿದ್ದಾರೆ. ಜೂ.25ರಂದು ಆಕ್ಸಿಯಂ–4 ಮಿಷನ್ ಮೂಲಕ ಭಾರತದ ಗಗನಯಾತ್ರಿ ಶುಭಾಂಶು ಶುಕ್ಲಾ, ಅಮೆರಿಕ ಮಹಿಳಾ ಗಗನಯಾತ್ರಿ ಪೆಗ್ಗಿ ವಿಟ್ಸನ್, ಹಂಗೇರಿಯ ಟಿಬೋರ್ ಕಾಪು ಹಾಗೂ ಪೋಲೆಂಡ್‌ನ ಗಗನಯಾತ್ರಿ ಸ್ಲಾವೋಸ್ಟ್ ಉಜ್ನಾನ್ಸಿ ಅಂತರಿಕ್ಷ ಯಾನಕ್ಕೆ ತೆರಳಿದ್ದರು. ಬಾಹ್ಯಾಕಾಶದಲ್ಲಿ 18 ದಿನಗಳ ಕಾಲ ಉಳಿದು ಹಲವಾರು ವೈಜ್ಞಾನಿಕ ಪ್ರಯೋಗಗಳನ್ನು ಮಾಡಿದ್ದು, ಎಲ್ಲಾ ಪರೀಕ್ಷೆಗಳು ಯಶಸ್ವಿ ಆಗಿವೆ ಎಂದು ತಿಳಿದು ಬಂದಿದೆ. ಸೋಮವಾರ ಸಂಜೆ 4:45 ಕ್ಕೆ ಬಾಹ್ಯಾಕಾಶ ನಿಲ್ದಾಣದಿಂದ ಅನ್ ಡಾಕಿಂಗ್ ಪ್ರಕ್ರಿಯೆ ಯಶಸ್ವಿಯಾಗಿದೆ. ಒಟ್ಟು 22.5 ಗಂಟೆಗಳ ಕಾಲ ಪ್ರಯಾಣ ಬೆಳೆಸಿ ಡ್ರ್ಯಾಗನ್ ಬಾಹ್ಯಾಕಾಶ ನೌಕೆ ಮಧ್ಯಾಹ್ನ 3ಕ್ಕೆ ಪೆಸಿಫಿಕ್ ಮಹಾಸಾಗರದ ಕ್ಯಾಲಿಫೋರ್ನಿಯಾ ಕರಾವಳಿಯಲ್ಲಿ ಬಂದಿಳಿದಿದೆ.

**ಭಾರತದ ಬಾಹ್ಯಾಕಾಶ ಕನಸುಗಳಿಗೆ ಎಎಕ್ಸ್–4 ಮಹತ್ವ :** ಶುಭಾಂಶು ಶುಕ್ಲಾ ಬಾಹ್ಯಾಕಾಶದಿಂದ ಸುರಕ್ಷಿತವಾಗಿ ಭೂಮಿಗೆ ಮರಳಿರುವುದು ಕೇವಲ ಅವರ ವೈಯಕ್ತಿಕ ಸಾಧನೆ ಮಾತ್ರವಲ್ಲ. ಇದು ಸಮಸ್ತ ಭಾರತದ ಬಾಹ್ಯಾಕಾಶ ಯೋಜನೆಯ ಪಾಲಿಗೆ ಬಹುದೊಡ್ಡ ಹೆಜ್ಜೆಯಾಗಿದೆ.

**1** ಶುಭಾಂಶು ಶುಕ್ಲಾ ಅವರು ಐತಿಹಾಸಿಕ ಬಾಹ್ಯಾಕಾಶ ಯಾನದ ನಂತರ ಭೂಮಿಗೆ ವಾಪಸ್.

**2** ಶುಭಾಂಶು ಶುಕ್ಲಾ ISS ಪ್ರಯಾಣಿಸಿದ ಮೊದಲ ಭಾರತೀಯ ಗಗನಯಾತ್ರಿ.

**3** ಆಕ್ಸಿಯಮ್ ಸ್ಪೇಸ್‌ನ ಆಕ್ಸ್-4 ಕಾರ್ಯಾಚರಣೆಯು ಯಶಸ್ವಿಯಾಗಿ ಪೂರ್ಣ


**ಭಾರತದ ಬಾಹ್ಯಾಕಾಶ ಭವಿಷ್ಯ ನಿರ್ಮಾಣ**

**ಆಕ್ಸಿಯಮ್–4 ಯೋಜನೆಯ ಮೂಲಕ ಶುಭಾಂಶು ಶುಕ್ಲಾ ಗಳಿಸಿರುವ ಅನುಭವಗಳು ಭಾರತದ ಸ್ವಂತ ಮಾನವ ಸಹಿತ ಬಾಹ್ಯಾಕಾಶ ಯೋಜನೆಯಾದ 'ಗಗನಯಾನ' ಯೋಜನೆಗೆ ಬೆಲೆ ಕಟ್ಟಲಾದ ಕೊಡುಗೆ ನೀಡಲಿದೆ. ಅವರು ಕಲಿತಿರುವ ಪ್ರತಿಯೊಂದು ಕ್ರಮಗಳು, ಅವರು ನಡೆಸಿರುವ ಪ್ರತಿಯೊಂದು ಪ್ರಯೋಗಗಳು ಮತ್ತು ಬಾಹ್ಯಾಕಾಶದಲ್ಲಿ ಅವರು ಎದುರಿಸಿರುವ ಪ್ರತಿಯೊಂದು ಸವಾಲುಗಳು ಭಾರತೀಯ ರಾಕೆಟ್‌ಗಳ ಮೂಲಕ ಭಾರತೀಯ ಗಗನಯಾತ್ರಿಗಳನ್ನು ಬಾಹ್ಯಾಕಾಶಕ್ಕೆ ಕಳುಹಿಸುವ ಸಿದ್ಧತೆ ನಡೆಸಲು ಇಸ್ರೋಗೆ ನೆರವಾಗಲಿದೆ.**

ಅವರ ಯೋಜನೆ ಭಾರತೀಯ ಬಾಹ್ಯಾಕಾಶ ಪ್ರಯತ್ನಗಳಲ್ಲಿ ಹೊಸ ಯುಗವನ್ನು ಆರಂಭಿಸಿದ್ದು, ನಮ್ಮ ಗಗನಯಾತ್ರಿಗಳು ಬಾಹ್ಯಾಕಾಶದ ಕುರಿತು ಕನಸು ಕಾಣುವುದು ಅಷ್ಟು ಮಾತ್ರವಲ್ಲದೆ, ಅಂತಾರಾಷ್ಟ್ರೀಯ ಬಾಹ್ಯಾಕಾಶ ಚಟುವಟಿಕೆಗಳಲ್ಲಿ ಜಗತ್ತಿನ ಅತ್ಯುತ್ತಮ ತಂಡಗಳೊಡನೆ ಸಕ್ರಿಯವಾಗಿ ಪಾಲ್ಗೊಳ್ಳುತ್ತಿದ್ದಾರೆ. ದಶಕಗಳ ಕಾಲ, ಭಾರತ ಅತ್ಯಂತ ಕಡಿಮೆ ವೆಚ್ಚದ ಬಾಹ್ಯಾಕಾಶ ಯೋಜನೆಗಳು ಮತ್ತು ಅಸಾಧಾರಣ ಇಂಜಿನಿಯರಿಂಗ್ ಸಾಮರ್ಥ್ಯಕ್ಕೆ ಹೆಸರಾಗಿತ್ತು. ಚಂದ್ರಯಾನ ಯೋಜನೆಯಿಂದ, ಮಂಗಳಯಾನ ಯೋಜನೆಯ ತನಕ, ಇಸ್ರೋ ಕನಿಷ್ಠ ಸಂಪನ್ಮೂಲಗಳನ್ನು ಬಳಸಿಕೊಂಡು ತಾನು ಅಸಾಧಾರಣ ಬಾಹ್ಯಾಕಾಶ ಸಾಧನೆಗಳನ್ನು ತೋರಬಲ್ಲೆ ಎಂದು ಸಾಬೀತುಪಡಿಸಿತ್ತು. ಆದರೆ, ಮಾನವ ಸಹಿತ ಬಾಹ್ಯಾಕಾಶ ಯೋಜನೆ ಭಾರತದ ಪಾಲಿಗೆ ದೊಡ್ಡ ಸವಾಲಾಗಿತ್ತು. ಆಕ್ಸಿಯಮ್–4 ಯೋಜನೆಯಲ್ಲಿ ಶುಭಾಂಶು ಶುಕ್ಲಾ ಪಾಲ್ಗೊಂಡಿರುವುದು ಭಾರತೀಯ ಗಗನಯಾತ್ರಿಗಳು ಮುಂದಿನ ಮಹತ್ವದ ಯೋಜನೆಗಳಿಗೆ ಸಿದ್ಧವಾಗಿದ್ದಾರೆ ಎಂಬ ಸಂದೇಶ ರವಾನಿಸಿದೆ. ಭಾರತ ಈ ಯೋಜನೆಯ ಮೂಲಕ ತಾನು ಸ್ಪೇಸ್‌ಎಕ್ಸ್ ಮತ್ತು ಆಕ್ಸಿಯಮ್ ಸ್ಪೇಸ್ ನಂತಹ ಅಂತಾರಾಷ್ಟ್ರೀಯ ಸಹಯೋಗಿಗಳೊಡನೆ ಕಾರ್ಯಾಚರಿಸಬಲ್ಲೆ ಎಂದು ಸಾಬೀತುಪಡಿಸಿದೆ. ಇಂದಿನ ಜಗತ್ತಿನಲ್ಲಿ, ಬಾಹ್ಯಾಕಾಶ ಅನ್ವೇಷಣೆ ದಿನೇದಿನೇ ಹೆಚ್ಚಿನ ಸಹಕಾರ ಮತ್ತು ಅಂತಾರಾಷ್ಟ್ರೀಯ ಸಹಭಾಗಿತ್ವವನ್ನು ಸಾಧಿಸುತ್ತಿದೆ. ವಿವಿಧ ದೇಶಗಳು ಬಾಹ್ಯಾಕಾಶ ಕ್ಷೇತ್ರದಲ್ಲಿ ಜೊತೆಯಾಗಿ ಕಾರ್ಯಾಚರಿಸುತ್ತಿದ್ದು, ಪರಸ್ಪರ ಜ್ಞಾನಗಳನ್ನು ಹಂಚಿಕೊಳ್ಳುತ್ತಾ, ತಮ್ಮ ಶಕ್ತಿಗಳನ್ನು ಒಗ್ಗೂಡಿಸಿಕೊಳ್ಳುತ್ತಿವೆ.

**ಭೂಮಿಗಿಳಿದ ಶುಭಾಂಶು**

**ಆಕ್ಸಿಯಮ್–4 ಬಾಹ್ಯಾಕಾಶ ಕಾರ್ಯಾಚರಣೆ ಯಶಸ್ವಿಯಾಗಿದೆ. ಸ್ಪೇಸ್ ಎಕ್ಸ್‌ನ ಡ್ರ್ಯಾಗನ್ ಕ್ಯಾಪ್ಸೂಲ್‌ನಲ್ಲಿ ಅವರು ಅಮೆರಿಕದ ಕ್ಯಾಲಿಫೋರ್ನಿಯಾದ ಸ್ಯಾನ್ ಡಿಯಾಗೋ ಕರಾವಳಿಯಲ್ಲಿ ಇಳಿದರು. ಆಕ್ಸಿಯಮ್–4 ಸಿಬ್ಬಂದಿ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ತಮ್ಮ ವಾಸ್ತವ್ಯವನ್ನು ಪೂರ್ಣಗೊಳಿಸಿದರು. ಸ್ಪೇಸ್ ಎಕ್ಸ್‌ನ ಡ್ರ್ಯಾಗನ್ ಕ್ಯಾಪ್ಸೂಲ್ ಅವರನ್ನು ಯಶಸ್ವಿಯಾಗಿಅಮೆರಿಕದ ಕ್ಯಾಲಿಫೋರ್ನಿಯಾದ ಸ್ಯಾನ್ ಡಿಯಾಗೋ ಕರಾವಳಿಯಲ್ಲಿ ಇಳಿಯಿತು. ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಈ ತಂಡವನ್ನು ಮುನ್ನಡೆಸಿದರು**



**18 ದಿನಗಳ ನಂತರ ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ಭೂಮಿಗೆ ಮರಳಿರುವ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅವರ ಸಾಧನೆ ಶುಕ್ಲಾ ಅವರ ಸಮರ್ಪಣೆ, ಧೈರ್ಯ ಮತ್ತು ಸಾಧನೆ ಶತಕೋಟಿ ಕನಸುಗಳಿಗೆ ಸ್ಫೂರ್ತಿ.ಇದೇ ಜೂನ್ 25ರಂದು ಶುಕ್ಲಾ ಸೇರಿ ನಾಲ್ವರು ಗಗನಯಾತ್ರಿಗಳು ಅಂತರರಾಷ್ಟ್ರೀಯ ಬಾಹ್ಯಾಕಾಶ ಕೇಂದ್ರಕ್ಕೆ ಪಯಣ ಬೆಳೆಸಿದ್ದರು. ಅಲ್ಲಿ ಅನೇಕ ಪ್ರಯೋಗಗಳನ್ನು ಕೈಗೊಂಡ ನಂತರ ಭೂಮಿಗೆ ಮರಳಿದ್ದಾರೆ.**

**–ನರೇಂದ್ರ ಮೋದಿ, ಪ್ರಧಾನಿ**

### ಮುಂದಿನ ಹಾದಿ

**ಭಾರತ ತನ್ನದೇ ಆದ ಮಾನವ ಸಹಿತ ಬಾಹ್ಯಾಕಾಶ ಯೋಜನೆಯಾದ ಗಗನಯಾನಕ್ಕೆ ಸಿದ್ಧತೆ ನಡೆಸುತ್ತಿದ್ದು, ಶುಭಾಂಶು ಶುಕ್ಲಾರ ಅನುಭವ ಇನ್ನಷ್ಟು ಮೌಲ್ಯಯುತವಾಗಿದೆ. ಅವರು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣ ಹೇಗೆ ಕಾರ್ಯಾಚರಿಸುತ್ತದೆ, ವಿವಿಧ ದೇಶಗಳ ಗಗನಯಾತ್ರಿಗಳು ಹೇಗೆ ಸಹಯೋಗ ಹೊಂದುತ್ತಾರೆ, ಮತ್ತು ಸಂಕೀರ್ಣವಾದ ಬಾಹ್ಯಾಕಾಶ ಯೋಜನೆಗಳನ್ನು ಹೇಗೆ ನಿರ್ವಹಿಸಲಾಗುತ್ತದೆ ಎನ್ನುವುದರ ನೇರ ಅನುಭವ ಪಡೆದುಕೊಂಡಿದ್ದಾರೆ. ಈ ಜ್ಞಾನ ಭಾರತಕ್ಕೆ ಗಗನಯಾನ ಮತ್ತು ಇತರ ಯೋಜನೆಗಳನ್ನು ರೂಪಿಸುವಲ್ಲಿ ನೆರವಾಗಲಿದೆ. ಈ ಯೋಜನೆಯ ಯಶಸ್ಸು ಇನ್ನಷ್ಟು ಭಾರತೀಯ ಗಗನಯಾತ್ರಿಗಳು ಅಂತಾರಾಷ್ಟ್ರೀಯ ಬಾಹ್ಯಾಕಾಶ ಯೋಜನೆಗಳಲ್ಲಿ ಪಾಲ್ಗೊಳ್ಳಲು ಬಾಗಿಲು ತೆರೆದಿದೆ. ಇದು ಮಾನವ ಸಹಿತ ಬಾಹ್ಯಾಕಾಶ ಯೋಜನೆಗೆ ಅವಶ್ಯಕವಾದ ಪ್ರತಿಭೆಗಳು, ತರಬೇತಿ ಮತ್ತು ಬದ್ಧತೆಯನ್ನು ಭಾರತ ಹೊಂದಿದೆ ಎಂದು ಪ್ರದರ್ಶಿಸಿದೆ.**

## ಜನರ ಮಧ್ಯೆ ಇದ್ದರೆ ಮಾತ್ರ ಚುನಾವಣೆಯಲ್ಲಿ ಗೆಲುವು

**• ಪಕ್ಷ ಸಂಘಟನೆಗೆ ಒತ್ತು ನೀಡುವಂತೆ ಡಿಕೆಶಿ ಸೂಚನೆ • ಟಿಕೆಟ್ ಆಂಕಾಕ್ಷಿಗಳಿಗೆ ಡಿಸಿಎಂ ಟಾಸ್ಕ್**

• ಉದಯವಾಹಿನಿ, ಬೆಂಗಳೂರು

ಸರ್ಕಾರ ವಾರ್ಡ್, ಮೀಸಲಾತಿ ತೀರ್ಮಾನ ಮಾಡಲಿದೆ. ಯಾರು ಜನರ ಮಧ್ಯೆ ಇರುತ್ತಾರೆ ಅವರು ಮಾತ್ರ ಗೆಲ್ಲಲು ಸಾಧ್ಯ. ನೀವು ಬೂತ್ ಮಟ್ಟದಲ್ಲಿ ಜನ ಸಂಪರ್ಕ, ಪ್ರೀತಿ ಇಟ್ಟುಕೊಳ್ಳಬೇಕು. ಪಾಲಿಕೆ ಅಧಿಕಾರಿಗಳಿಗೆ ಹೇಳಿ ನಿಮಗೆ ಗ್ಯಾರಂಟಿ ಸಮಿತಿಯ ಗುರುತಿನ ಚೀಟಿ ಕೊಡಿಸುತ್ತೇನೆ. ಆಗ ನೀವು ಮನೆ ಮನೆಗೆ ಹೋಗಿ ಅವರನ್ನು ಸಂಪರ್ಕಿಸುವ ಅಧಿಕಾರ ಸಿಗುತ್ತದೆ. ಗ್ಯಾರಂಟಿ ಸಮಿತಿ ಅಧ್ಯಕ್ಷರುಗಳಿಗೆ ಕಚೇರಿ ಕೊಟ್ಟ ಇತಿಹಾಸ ಬೇರೆ ಎಲ್ಲಾದರೂ ಇದೆಯೇ, ಇಲ್ಲ. ನಾನು ಕಾರ್ಯಕರ್ತನಾಗಿ ಬಂದವನು. ಎನ್‌ಎಸ್ ಯುಐನಿಂದ ರಾಜ್ಯ ಕಾಂಗ್ರೆಸ್ ಅಧ್ಯಕ್ಷನಾಗಿದ್ದೇನೆ. ನನಗೆ ನಿಮ್ಮ ನೋವು ಅರಿವಾಗುತ್ತದೆ. ಅಧಿಕಾರ ಹಂಚಿಕೆ ಸಂದರ್ಭದಲ್ಲಿ ನಾವು ಎಲ್ಲರಿಗೂ ಸ್ಥಾನಮಾನ ನೀಡಲು ಆಗದೇ ಇರಬಹುದು. ಆದರೆ ಯಾವುದಾದರೂ ಒಂದು ಸಂದರ್ಭದಲ್ಲಿ ಅವಕಾಶ ಸಿಕ್ಕಾಗ ನಿಮಗೆ ಸೂಕ್ತ ಅಧಿಕಾರ ನೀಡುತ್ತೇವೆ ಎಂದು ಭರವಸೆ ನೀಡಿದರು. ಭಾರತ್ ಜೋಡೋ ಭವನದಲ್ಲಿ ಮಾತನಾಡಿ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯವರಿಗೆ ನಿಮ್ಮ ಬೆಲೆ ಏನು ಎಂಬುದು ಅರ್ಥವಾಗಿಲ್ಲ. ನೀವು ಸರ್ಕಾರದ ಪ್ರತಿನಿಧಿಗಳು. ಕರ್ನಾಟಕದ, ಸರ್ಕಾರದ ದನಿ. ನಿಮಗೆ ಸರ್ಕಾರದ ಚಿಹ್ನೆ ನೀಡಲಾಗಿದೆ, ಅಧ್ಯಕ್ಷರುಗಳಿಗೆ ಕಚೇರಿ ನೀಡಲಾಗಿದೆ. ವಿಪಕ್ಷಗಳು ಸದನದಲ್ಲಿ ಗ್ಯಾರಂಟಿ ಅನುಷ್ಠಾನ ಸಮಿತಿಗಳ ವಿರುದ್ಧ ಕೋಲಾಹಲ ಎಬ್ಬಿಸಿದರು. ಶಾಸಕರ ಕಾರ್ಯಪ್ರಗತಿ ಮಾಡಲು ನೀವುಗಳು ಯಾರು ಎಂದು ಪ್ರಶ್ನೆ ಮಾಡಿದರು. ಇವರುಗಳನ್ನು ನಮ್ಮ ಕೆಳಗೆ ಉಪಾಧ್ಯಕ್ಷರನ್ನಾಗಿ ಮಾಡಿ ಎಂದರು. ಶಾಸಕರ ಸ್ಥಾನಕ್ಕೆ ಕುತ್ತು ತಂದಿದ್ದೀರಿ ಎಂದರು. ನಮ್ಮ ಪಕ್ಕ ಕುರ್ಚಿ ಹಾಕಿದ್ದೀರಿ ಎಂದೆಲ್ಲ ಹೇಳಿದರು ಅವರ ಮಾತುಗಳಿಗೆ ನಾವು ಬಗ್ಗಲಿಲ್ಲ ಎಂದರು.

**ಗ್ಯಾರಂಟಿ ಅನುಷ್ಠಾನ ಸಮಿತಿಗಳ ವಿರುದ್ಧ ಕೋಲಾಹಲ**



ನಮ್ಮ ಕಾರ್ಯಕರ್ತರಿಗೆ ನಾವು ಶಕ್ತಿ ತುಂಬುವುದು ನಮ್ಮ ಕರ್ತವ್ಯ. ನಮ್ಮನ್ನು ಅಧಿಕಾರಕ್ಕೆ ತಂದ ನಿಮಗೆ ಅಧಿಕಾರ ನೀಡಿದ್ದೇವೆ. ಆಸ್ಪತ್ರೆ, ಬಗರ್ ಹುಕುಂ ಸೇರಿದಂತೆ ಅನೇಕ ಸಮಿತಿಗಳಲ್ಲಿ ನಿಮಗೆ ಅವಕಾಶ ನೀಡಿದ್ದೇವೆ. ನಾನು ಸಹಕಾರ ಮಂತ್ರಿಯಾಗಿದ್ದಾಗ, ವಿದ್ಯುತ್ಶಕ್ತಿ ಸಚಿವನಾಗಿದ್ದಾಗ ಸಮಿತಿಗಳಲ್ಲಿನ ಸದಸ್ಯರ ಸಂಖ್ಯೆ ಹೆಚ್ಚಳ ಮಾಡಿದ್ದೆ. ಪ್ರತಿ ಕ್ಷೇತ್ರದಲ್ಲಿ ಪಕ್ಷಕ್ಕಾಗಿ ದುಡಿದ ಎಲ್ಲಾ ವರ್ಗದ 15 ಜನರನ್ನು ಗುರುತಿಸಿ ನಿಮಗೆ ಅಧಿಕಾರ ನೀಡಲಾಗಿದೆ ಎಂದು ತಿಳಿಸಿದರು. ನಿಮ್ಮಲ್ಲಿ ಹಲವರು ಕ್ಷೇತ್ರ ಮಟ್ಟದಲ್ಲಿ ಅತ್ಯುತ್ತಮವಾಗಿ ಕೆಲಸ ಮಾಡುತ್ತಿದ್ದಾರೆ. ವಿರೋಧ ಪಕ್ಷದವರ ನೋವು, ದುಃಖ ನೋಡುತ್ತಿದ್ದರೆ ನೀವು ಎಷ್ಟು ಚೆನ್ನಾಗಿ ಕೆಲಸ ಮಾಡುತ್ತಿದ್ದೀರಿ ಎಂದು ಗೊತ್ತಾಗಿದೆ. ಮುಂದೆ ಎಲ್ಲಾ ಕ್ಷೇತ್ರಗಳ ಗ್ಯಾರಂಟಿ ಸಮತಿ ಸದಸ್ಯರನ್ನು ಕರೆಸಿ ಮಾತನಾಡುತ್ತೇನೆ. ಎಲ್ಲರಿಗೂ ನಾವು ಶಕ್ತಿ, ಮಾರ್ಗದರ್ಶನ ನೀಡಬೇಕು ಎಂದರು.

## ದೇವನಹಳ್ಳಿ ರೈತರ ಹೋರಾಟಕ್ಕೆ ಕೊನೆಗೂ ಸಂದ ವಿಜಯೋತ್ಸವ!


**● ಭೂಸ್ವಾಧೀನ ಕೈಬಿಟ್ಟ ಕರ್ನಾಟಕ ರಾಜ್ಯ ಸರ್ಕಾರ, ಸಿದ್ದರಾಮಯ್ಯ ನೇತೃತ್ವದ ಸಭೆಯಲ್ಲಿ ಘೋಷಣೆ**

• ಉದಯವಾಹಿನಿ, ಬೆಂಗಳೂರು

ಅತ್ಯಾಧುನಿಕ ರಕ್ಷಣಾ ಮತ್ತು ವೈಮಾಂತರಿಕ ಪಾರ್ಕ್ ನಿರ್ಮಾಣಕ್ಕಾಗಿ ದೇವನಹಳ್ಳಿಯಲ್ಲಿ 13 ಗ್ರಾಮಗಳ ವ್ಯಾಪ್ತಿಯ 1,777 ಎಕರೆ ರೈತರ ಜಮೀನನ್ನು ಭೂಸ್ವಾಧೀನ ಮಾಡುವ ನಿರ್ಧಾರದಿಂದ ರಾಜ್ಯ ಸರ್ಕಾರ ಹಿಂದೆ ಸರಿದಿದೆ. ಈ ಮೂಲಕ 1197 ದಿನಗಳಿಂದ ನಡೆಯುತ್ತಿರುವ ರೈತ ಹೋರಾಟಕ್ಕೆ ಮಹತ್ವದ ಜಯ ಸಿಕ್ಕಿದೆ. ವಿಧಾನಸೌಧದಲ್ಲಿ ರೈತ ಮುಖಂಡರ ಜೊತೆಗೆ ನಡೆಸಿದ ಸಭೆಯಲ್ಲಿ ಈ ತೀರ್ಮಾನಕ್ಕೆ ಬರಲಾಗಿದೆ. ರೈತ ಮುಖಂಡರ ಜೊತೆಗೆ ಸಭೆ ನಡೆಸಿದ ಬಳಿಕ ಮಾತನಾಡಿದ ಸಿದ್ದರಾಮಯ್ಯ, ಭೂಸ್ವಾಧೀನದಿಂದ ಹಿಂದೆ ಸರಿಯುವ ಬಗ್ಗೆ ಪತ್ರಿಕಾಗೋಷ್ಠಿಯಲ್ಲಿ ನಿರ್ಧಾರವನ್ನು ಪ್ರಕಟಿಸಿದರು. ಅಲ್ಲದೆ, ರೈತ ಹೋರಾಟವನ್ನು ಐತಿಹಾಸಿಕ ಎಂದು ಬಣ್ಣಿಸಿದರು.

ಇದೇ ವೇಳೆ ಮಾತನಾಡಿ ಏರ್‌ಪೋರ್ಟ್‌ಗೆ ಸಮೀಪ ಇರುವುದರಿಂದ, ಗ್ರೀನ ಬೆಲ್ಟ್‌ನಲ್ಲಿ ಇರುವುದರಿಂದ ಸ್ವಾಧೀನ ಪಡಿಸಿಕೊಳ್ಳುವುದು ಬೇಡ ಎಂಬುವುದು ರೈತರ ಬೇಡಿಕೆ ಆಗಿತ್ತು. ಸರ್ಕಾರ ಈಗಾಗಲೇ ರೈತರು ಮತ್ತು ಹೋರಾಟಗಾರರ ಜೊತೆ ಸಭೆ ನಡೆಸಿದೆ. ಅವರ ಆಹವಾಲುಗಳನ್ನು ಆಲಿಸಿದೆ. ಕೆ ಎಚ್ ಮುನಿಯಪ್ಪ ಅವರು ಕೂಡಾ ರೈತರ ಪರವಾಗಿ ವಾದಿಸಿದ್ದರು ಎಂದರು.





**ಹಿಂದೆ ಸರಿದ ರಾಜ್ಯ ಸರ್ಕಾರ**

ರೈತರ ಹೋರಾಟದಲ್ಲಿ ಪ್ರಗತಿಪರ ಸಂಘಟನೆಗಳು ಭಾಗಿಯಾಗಿದ್ದವು. ಪ್ರಗತಿಪರ ಹಾಗೂ ಎಡ ಸಂಘಟನೆಗಳು, ದಲಿತ ಸಂಘಟನೆಗಳು ಭಾಗಿಯಾಗಿದ್ದವು.

ಇದೊಂದು ವಿಶಿಷ್ಟವಾದ ಐತಿಹಾಸಿಕವಾದ ಹೋರಾಟವಾಗಿತ್ತು. ಸಾಧಕ ಬಾಧಕಗಳನ್ನು ಚರ್ಚೆ ಮಾಡಿ ಸರ್ಕಾರ ಈ ತೀರ್ಮಾನಕ್ಕೆ ಬಂದಿದೆ ಎಂದು ತಿಳಿಸಿದರು.

### ಜಮೀನನ್ನು ಸಂಪೂರ್ಣವಾಗಿ ಕೈಬಿಡಲು ತೀರ್ಮಾನ

**1777 ಎಕರೆ ಜಮೀನನ್ನು ಭೂಸ್ವಾಧೀನಕ್ಕೆ ಅಂತಿಮ ಅಧಿಸೂಚನೆ ಮಾಡಲಾಗಿತ್ತು. ಆದರೆ ಈ ಜಮೀನನ್ನು ಸಂಪೂರ್ಣವಾಗಿ ಕೈಬಿಡಲು ತೀರ್ಮಾನ ಮಾಡಲಾಗಿದೆ. ಆದರೆ, ರೈತರು ಸ್ವಯಂಪ್ರೇರಿತವಾಗಿ ಕೊಡಲು ಮುಂದೆ ಬಂದರೆ ಅಂತಹ ಜಮೀನುಗಳನ್ನು ಒಪ್ಪಂದದ ಮೇಲೆ ಸ್ವಾಧೀನ ಮಾಡಿಕೊಳ್ಳುತ್ತೇವೆ ಎಂದು ತಿಳಿಸಿದರು. ಅಲ್ಲದೆ, ರೈತರು ಸ್ವಯಂಪ್ರೇರಿತವಾಗಿ ಭೂಮಿ ಕೊಡಲು ಮುಂದಾದರೆ ಯಾರೂ ತಡೆಯಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದರು. ರಾಜ್ಯದಲ್ಲಿ ಕೈಗಾರಿಕೆ ಬೆಳೆಯುವುದು ಬಹುಮುಖ್ಯ. ಹಾಗಾಗಿ ಭೂಮಿ ಕೊಡುವ ರೈತರಿಗೆ ಸೂಕ್ತ ಪರಿಹಾರವನ್ನು ನೀಡುತ್ತೇವೆ ಎಂದು ತಿಳಿಸಿದರು. ಕರ್ನಾಟಕ ಕೈಗಾರಿಕಾಭಿವೃದ್ಧಿ ಮಂಡಳಿಯಿಂದ ದೇವನಹಳ್ಳಿ ತಾಲ್ಲೂಕಿನ ಚನ್ನರಾಯಪಟ್ಟಣದ 13 ಗ್ರಾಮಗಳ 1777 ಎಕರೆ ಜಮೀನನ್ನು ಸ್ವಾಧೀನಪಡಿಸಿಕೊಳ್ಳಲು ಸರ್ಕಾರ ಮುಂದಾಗಿತ್ತು. 2021 ರಲ್ಲಿ ಪ್ರಾಥಮಿಕ ಅಧಿಸೂಚನೆ ಹೊರಡಿಸಲಾಗಿತ್ತು. 2022 ರಲ್ಲಿ ಅಂತಿಮ ಅಧಿಸೂಚನೆಯನ್ನು ಹೊರಡಿಸಲಾಗಿತ್ತು.**

**ಸರ್ಕಾರದ ನಡೆಗೆ ಪ್ರಕಾಶ್ ರಾಜ್ ಮೆಚ್ಚುಗೆ:** ಭೂಸ್ವಾಧೀನ ನಿರ್ಧಾರದಿಂದ ಹಿಂದೆ ಸರಿದ ಸರ್ಕಾರದ ನಡೆಯನ್ನು ನಟ ಪ್ರಕಾಶ್ ರಾಜ್ ಪ್ರಶಂಸಿದ್ದಾರೆ. ಇದೇ ವೇಳೆ ಮಾತನಾಡಿ ''ಮುಖ್ಯಮಂತ್ರಿ ಅವರ ಸಾಮಾಜಿಕ ನ್ಯಾಯ ಕೇವಲ ನುಡಿಯಲ್ಲಿ ಮಾತ್ರವಲ್ಲ ನಡೆಯಲ್ಲೂ ಅದನ್ನು ಇಂದು ಅವರು ತೋರಿಸಿಕೊಟ್ಟಿದ್ದಾರೆ'' ಎಂದು ಪ್ರಕಾಶ್ ರಾಜ್ ಅವರು ಹೇಳಿದರು.

ಸಚಿವರಾದ ಎಂ.ಬಿ.ಪಾಟೀಲ್, ಕೆ.ಎಚ್.ಮುನಿಯಪ್ಪ, ಹೆಚ್. ಕೆ.ಪಾಟೀಲ್, ಕೃಷ್ಣ ಬೈರೇಗೌಡ, ಪ್ರಿಯಾಂಕ ಖರ್ಗೆ, ಭೈರತಿ ಸುರೇಶ್, ಮುಖ್ಯಮಂತ್ರಿ ಅವರ ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್, ಕಾನೂನು ಸಲಹೆಗಾರ ಪೊನ್ನಣ್ಣ, ಅಡ್ವಕೇಟ್ ಜನರಲ್ ಶಶಿಕಿರಣ ಶೆಟ್ಟಿ, ರೈತ ಪ್ರತಿನಿಧಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹9,977/Gram24ct ₹9,145/Gram22ct ಬೆಳ್ಳಿ: ₹115.00/Gram

# ತಹಶೀಲ್ದಾರ್ ಕಚೇರಿಗಳಲ್ಲಿ ಡಿಜಿಟಲ್ ದಾಖಲೆ ವಿತರಣೆ


## ಭೂ ಸುರಕ್ಷಾ ಯೋಜನೆಯಡಿ 100 ಕೋಟಿ ಪುಟ ಭೂದಾಖಲೆಗಳ ಸ್ಕ್ಯಾನಿಂಗ್ ಕಾರ್ಯ ಪ್ರಾರಂಭ

• ಉದಯವಾಹಿನಿ, ಬೆಂಗಳೂರು

ಕಂದಾಯ ಇಲಾಖೆಯು ಕೈಬರಹದಲ್ಲಿ ಭೂದಾಖಲೆ ನೀಡುವ ವ್ಯವಸ್ಥೆಗೆ ತಿಲಾಂಜಲಿ ಹಾಡಿದ್ದು, ಡಿಜಿಟಲ್ ರೂಪದಲ್ಲೇ ವಿತರಿಸುವುದನ್ನು ಕಡ್ಡಾಯಗೊಳಿಸಿದೆ. ಈಗಾಗಲೇ 'ಡಿಜಿಟಲ್ ಭೂದಾಖಲೆಗಳ ವಿತರಣೆಗೆ ಶುರುವಾಗಿದೆ. ಇನ್ನು ಮುಂದೆ 'ಎ' ಹಾಗೂ 'ಬಿ' ವರ್ಗದ ಭೂದಾಖಲೆಗಳನ್ನು ಸಾಂಪ್ರದಾಯಿಕ ದೃಢೀಕೃತ ನಕಲು ಪ್ರತಿ ಅಥವಾ ಕೈಬರಹದ ದಾಖಲೆ ನೀಡುವ ಬದಲಾಗಿ ಡಿಜಿಟಲ್ ರೂಪದಲ್ಲಿಯೇ ಸಿಗಲಿದೆ. ಸದ್ಯ ರಾಜ್ಯದ ಎಲ್ಲಾ 240 ತಹಶೀಲ್ದಾರ್ ಕಚೇರಿಗಳಲ್ಲಿ ಡಿಜಿಟಲ್ ದಾಖಲೆ ನೀಡಲಾಗುತ್ತಿದ್ದು, ಶೀಘ್ರವೇ ರಾಜ್ಯದಲ್ಲಿರುವ 700 ಅಟಲ್‌ಜಿ ಜನಸ್ನೇಹಿ ಕೇಂದ್ರಗಳಿಗೂ(ನಾಡಕಚೇರಿ) ವಿಸ್ತರಿಸಲು ಕಂದಾಯ ಇಲಾಖೆ ಮುಂದಾಗಿದೆ. ಅರ್ಜಿದಾರರು ಕೋರುವ ಭೂದಾಖಲೆ ಈಗಾಗಲೇ ಸ್ಕ್ಯಾನ್ ಆಗಿ ದೃಢೀಕರಣಗೊಂಡಿದ್ದರೆ ಒಂದೇ ದಿನದಲ್ಲಿ ಡಿಜಿಟಲ್ ದಾಖಲೆ ವಿತರಣೆಯಾಗಲಿದೆ.

ಒಂದೊಮ್ಮೆ ಸ್ಕ್ಯಾನಿಂಗ್ ಪ್ರಕ್ರಿಯೆ ಆಗಿರದಿದ್ದರೆ, ಏಳು ದಿನದೊಳಗೆ ಡಿಜಿಟಲ್ ದಾಖಲೆ ವಿತರಣೆಯಾಗಲಿದೆ. ಇದರಿಂದ ಭೂದಾಖಲೆಗಳನ್ನು ಯಾವುದೇ ಅಡಚಣೆ, ವಿಳಂಬವಿಲ್ಲದಂತೆ ಪಡೆಯಲು ಅನುಕೂಲವಾಗಲಿದೆ.

ರಾಜ್ಯದ ಜನರ ಭೂದಾಖಲೆಗಳನ್ನು ಡಿಜಿಟಲ್ ರೂಪದಲ್ಲಿ ಸಂರಕ್ಷಿಸುವ ಉದ್ದೇಶದಿಂದ ಕಂದಾಯ ಇಲಾಖೆ ಈಗಾಗಲೇ ಭೂ ಸುರಕ್ಷಾ' ಯೋಜನೆ ಜಾರಿಗೊಳಿಸಿದೆ. 'ಭೂ ಸುರಕ್ಷಾ' ಯೋಜನೆ ಪ್ರಾಯೋಗಿಕವಾಗಿ ಜಾರಿಯಾಗಿದ್ದ 31 ಜಿಲ್ಲೆ ಪೈಕಿ ಕೆಳಕಂಡ


ಉದಯವಾಹಿನಿ ಚಿತ್ರ

17 ತಾಲ್ಲೂಕುಗಳಲ್ಲಿ ಸ್ಕ್ಯಾನಿಂಗ್ ಪೂರ್ಣವಾಗಿದ್ದು, ಉಳಿದ 209 ತಾಲ್ಲೂಕುಗಳಲ್ಲಿ ಸ್ಕ್ಯಾನಿಂಗ್ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಕಾಯಂ ಆಗಿ ಸಂರಕ್ಷಿಸಬೇಕಾದ ಎ ವರ್ಗದ ಭೂದಾಖಲೆಗಳು 30 ವರ್ಷಗಳವರೆಗೆ ಸಂರಕ್ಷಿಸಬೇಕಾದ ಬಿ ವರ್ಗದ ಭೂದಾಖಲೆಗಳ ಸ್ಕ್ಯಾನಿಂಗ್ ಕಾರ್ಯವೂ ಶುರುವಾಗಿದೆ. 'ಎ' ಮತ್ತು 'ಬಿ' ವರ್ಗದ ಭೂದಾಖಲೆಗಳು ಸುಮಾರು 100 ಕೋಟಿ ಪುಟಕ್ಕಿಂತ ಹೆಚ್ಚು ಇರುವ ಅಂದಾಜು ಇದೆ. ಈವರೆಗೆ 32 ಕೋಟಿ ಪುಟಗಳಷ್ಟು ದಾಖಲೆಗಳ ಸ್ಕ್ಯಾನಿಂಗ್ ಪೂರ್ಣಗೊಂಡಿದ್ದು, ಬಾಕಿ 68 ಕೋಟಿ ಪುಟಗಳ ಸ್ಕ್ಯಾನಿಂಗ್ ಪೂರ್ಣಗೊಳಿಸಲು ಸಾಕಷ್ಟು ಸಮಯ ಬೇಕಾಗುತ್ತದೆ. ಹಾಗಾಗಿ ಡಿಜಿಟಲ್ ರೂಪದಲ್ಲೇ ಭೂದಾಖಲೆ ವಿತರಣೆ ಕಡ್ಡಾಯಗೊಳಿಸುವ ಮೂಲಕ ಬಾಕಿ ಭೂದಾಖಲೆ ಪುಟಗಳ ತ್ವರಿತ ಸ್ಕ್ಯಾನಿಂಗ್ ಪ್ರಕ್ರಿಯೆಗೆ ಚಾಲನೆ ನೀಡಿದೆ.

### ಡಿಜಿಟಲ್ ರೂಪದ ದಾಖಲೆ ವ್ಯವಸ್ಥೆ ಅನುಕೂಲ

- ದಾಖಲೆಗಳು ಶಿಥಿಲವಾಗಿ ಹಾಳಾಗುವುದನ್ನು ತಡೆಯಬಹುದು
- ಭೂದಾಖಲೆ ದೃಢೀಕೃತ ಪ್ರತಿಗಾಗಿ ಅನಗತ್ಯವಾಗಿ ಕಾಯಬೇಕಿಲ್ಲ
- ಭೂದಾಖಲೆಗಳನ್ನು ತಿರುಚಲು ಅವಕಾಶವಿಲ್ಲ
- ತಾವು ಇರುವಲ್ಲೇ ಭೂದಾಖಲೆ ಕೋರಿ ಅರ್ಜಿ ಸಲ್ಲಿಸಲು ಅವಕಾಶ
- ಅರ್ಧಕ್ಕೆ ನಿಂತ ಹಳೆಯ ಬಗರ್‌ಹುಕುಂ ಅರ್ಜಿ ವಿಲೇವಾರಿಗೂ ಅನುಕೂಲ
- ಪಾರದರ್ಶಕವಾಗಿ ಕಾಲಮಿತಿಯಲ್ಲಿ ಡಿಜಿಟಲ್ ಭೂದಾಖಲೆ ಲಭ್ಯ

**ಸದ್ಯ ದೃಢೀಕೃತ ನಕಲು ಪ್ರತಿ ವಿತರಣೆ:** ಈ ಹಿಂದೆ ಇಲಾಖೆಗಳಲ್ಲಿ ಭೂದಾಖಲೆಗಳನ್ನು 'ಕ್ಯಾಟಲಾಗಿಂಗ್' ಮತ್ತು 'ಇಂಡೆಕ್ಸಿಂಗ್' ವ್ಯವಸ್ಥೆಯಡಿ ಗಣಕೀಕರಿಸುವ ಪ್ರಕ್ರಿಯೆ ಶುರವಾಗಿತ್ತು.

ಅಂದರೆ ನಿರ್ದಿಷ್ಟ ರೆಕಾರ್ಡ್ ರೂಂನಲ್ಲಿ ಯಾವೆಲ್ಲಾ ಪ್ರದೇಶದ ಭೂದಾಖಲೆಗಳು ಯಾವ ಕಡತಗಳಲ್ಲಿ, ಯಾವ ಜಾಗದಲ್ಲಿ ಯೋಜಿತವಾಗಿವೆ ಎಂಬ ಮಾಹಿತಿಯನ್ನು ಕಂಪ್ಯೂಟರ್‌ನಲ್ಲೇ ಪತ್ತೆ ಹಚ್ಚುವ ವ್ಯವಸ್ಥೆ ರೂಪುಗೊಂಡಿತ್ತು.

ಆದರೆ ಇದು ಪರಿಣಾಮಕಾರಿಯಾಗಿ ನಡೆದಿಲ್ಲ. ಹಾಗಾಗಿ ಜನರು ಕೋರುವ ಭೂದಾಖಲೆಯನ್ನು ಪತ್ತೆ ಹಚ್ಚಿ ನಕಲು ಪ್ರತಿ ದೃಢೀಕರಿಸಿ ನಿಗದಿತ ಶುಲ್ಕ ಪಡೆದು ನೀಡಲಾಗುತ್ತಿತ್ತು. ಇದಕ್ಕೆ ಸಾಕಷ್ಟು ಸಮಯ ಹಿಡಿಯುತ್ತಿತ್ತು. ಕ್ಯಾಟಲಾಗಿಂಗ್ ಹಾಗೂ ಇಂಡೆಕ್ಸಿಂಗ್‌ನಲ್ಲಿ ದಾಖಲಿಸಲಾಗಿದ್ದ ಅಷ್ಟೂ ದಾಖಲೆಗಳನ್ನು ಸ್ಕ್ಯಾನಿಂಗ್ ಮಾಡಿ ಅಪ್‌ಲೋಡ್ ಮಾಡಲಾಗಿದೆ. ಹಾಗಾಗಿ ಯಾವುದೇ ಭೂದಾಖಲೆಯನ್ನು ತಕ್ಷಣ ಪತ್ತೆ ಹಚ್ಚಿ ವಿತರಿಸಲು ಅವಕಾಶವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

> ಜನ ಬಯಸುವ ಭೂದಾಖಲೆಗಳನ್ನು ಡಿಜಿಟಲ್ ರೂಪದಲ್ಲಿ ವಿತರಿಸುವುದನ್ನು ಕಡ್ಡಾಯಗೊಳಿಸಲಾಗಿದೆ. ಇದರಿಂದ ಸುರಕ್ಷಿತವಾಗಿ ಸಂರಕ್ಷಿಸಿದ ಭೂದಾಖಲೆಗಳನ್ನು ಖಾಸಗಿ ಆಸ್ತಿದಾರರು ಪಾರದರ್ಶಕ ವಿಧಾನದಡಿ ಪಡೆಯಬಹುದು. ಹಾಗೆಯೇ ದೀರ್ಘಕಾಲದಿಂದ ಬಾಕಿ ಇರುವ ಬಗರ್ ಹುಕುಂ, ದರ್ಖಾಸ್ತು ಪೋಡಿ ಇತರೆ ವ್ಯಾಜ್ಯಗಳ ತ್ವರಿತ ಇತ್ಯರ್ಥಕ್ಕೂ ನೆರವಾಗಲಿದೆ.
>
> ಸುನೀಲ್‌ಕುಮಾರ್ ಪೊಮ್ಮಲ ಕಂದಾಯ ಇಲಾಖೆ ಆಯುಕ್ತ


# ನವೆಂಬರ್‌ನಲ್ಲಿ ಸಚಿವ ಸಂಪುಟಕ್ಕೆ ಮೇಜರ್ ಸರ್ಜರಿ..?

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿ, ಕರ್ನಾಟಕ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಸರಣಿ ಸಭೆಗಳನ್ನು ನಡೆಸುತ್ತಿದ್ದು, ಶಾಸಕರ ದೂರುಗಳನ್ನು ಆಲಿಸಿದ ಬಳಿಕ ಇದೀಗ ಸಚಿವರೊಂದಿಗೆ ಸಭೆಗಳನ್ನು ನಡೆಸುತ್ತಿದ್ದಾರೆ.

ಈ ಸಭೆಗಳು ನವೆಂಬರ್ ನಂತರ ನಡೆಯಲಿರುವ ಸಂಭಾವ್ಯ ಸಚಿವ ಸಂಪುಟ ಪುನರಾಚನೆಗೆ ಮುಂಚಿತವಾಗಿ ನಡೆಸಲಾಗುತ್ತಿರುವ ಸಚಿವರ ಕಾರ್ಯಕ್ಷಮತೆಗಳ ಮೌಲ್ಯಮಾಪನ ಎಂದು ಹೇಳಲಾಗುತ್ತಿದೆ.

ಸುರ್ಜೇವಾಲಾ ಅವರು ಸಿದ್ದರಾಮಯ್ಯ ಅವರ ಆಪ್ತರು ಎಂದು ಪರಿಗಣಿಸಲಾದ ವಸತಿ ಸಚಿವ ಜಮೀರ್ ಅಹ್ಮದ್ ಖಾನ್, ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್, ಪೌರಾಡಳಿತ ಸಚಿವ ರಹೀಮ್ ಖಾನ್ ಮತ್ತು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರನ್ನು ಭೇಟಿ ಮಾಡಿ, ಮಾತುಕತೆ ನಡೆಸಿದರು. ಸುರ್ಜೇವಾಲಾ ಅವರು ಮೊದಲು ಶಾಸಕರೊಂದಿಗೆ ಸಭೆ


ಉದಯವಾಹಿನಿ ಚಿತ್ರ

ನಡೆಸಿದ್ದು, ಸಿದ್ದು ಆಪ್ತರಲ್ಲಿ ಅಸಮಾಧಾನ ತರಿಸಿತ್ತು. ಏಕೆಂದರೆ ಡಿ.ಕೆ.ಶಿವಕುಮಾರ್ ಪರವಿದ್ದ ಶಾಸಕರು ಮುಖ್ಯಮಂತ್ರಿ ಬದಲಾವಣೆಯನ್ನು ಬಯಸಿದ್ದರು. ಹೀಗಾಗಿಯೇ ಸಿದ್ದರಾಮಯ್ಯ ಅವರು ದೆಹಲಿಗೆ ತೆರಳಿ 5 ವರ್ಷವೂ ನಾನೇ ಸಿಎಂ ಎಂದು ಪ್ರತಿಪಾದಿಸಿದ್ದರು ಎಂದು ತಜ್ಞರು ವಿಶ್ಲೇಷಿಸಿದ್ದಾರೆ. ಸಚಿವ ಜಮೀರ್ ಅಹ್ಮದ್ ಖಾನ್ ಅವರು ಮಾತನಾಡಿ, ಸುರ್ಜೇವಾಲ ಅವರು ನನ್ನ ಕೆಲಸದಿಂದ ಪ್ರಭಾವಿತರಾಗಿದ್ದು, ನಾನು ಪ್ರತಿಫಲಕ್ಕೆ ಅರ್ಹನಾಗಿದ್ದೇನೆಂದು ಹೇಳಿದ್ದಾರೆಂದು ತಿಳಿಸಿದರು.

ವಸತಿ ಮಂಜೂರಾತಿಯಲ್ಲಿ ಲಂಚದ ಆರೋಪ ಕುರಿತು ಸುರ್ಜೇವಾಲಾ ಅವರಿಗೆ ವಿವರಿಸಲಾಗಿದೆ.

ಈ ಆರೋಪ ಗ್ರಾಮ ಪಂಚಾಯತ್ ಅಧ್ಯಕ್ಷರ ವಿರುದ್ಧವೇ ಹೊರತು ನನ್ನ ವಿರುದ್ಧವಲ್ಲ ಎಂದು ಸ್ಪಷ್ಟಪಡಿಸಿದ್ದೇನೆಂದು ಹೇಳಿದರು.

> ಸುರ್ಜೇವಾಲಾ ಅವರನ್ನು ಭೇಟಿಯಾದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಭೈರತಿ ಸುರೇಶ್ ಅವರು, ರಾಜ್ಯ ಉಸ್ತುವಾರಿ ಸಚಿವರು ನಮ್ಮ ಕಾರ್ಯಕ್ಷಮತೆಯನ್ನು ಮೌಲ್ಯಮಾಪನ ಮಾಡಲು ಇಲ್ಲಿಗೆ ಬಂದಿಲ್ಲ, ನಾವು ಜಾರಿಗೆ ತಂದ ಅಭಿವೃದ್ಧಿ ಕಾರ್ಯಗಳನ್ನು ಗಮನಿಸಲು ಮತ್ತು ನಮ್ಮನ್ನು ಪ್ರಶಂಸಿಸಲು ಬಂದಿದ್ದಾರೆ. ಶಾಸಕರು ನನ್ನ ವಿರುದ್ಧ ಒಂದೇ ಒಂದು ದೂರನ್ನೂ ನೀಡಿಲ್ಲ ಎಂದು ಹೇಳಿದರು.

# ಸಿಎಂ ವಿರುದ್ಧ ಪ್ರಹ್ಲಾದ್ ಜೋಶಿ ವಾಗ್ದಾಳಿ

• ಉದಯವಾಹಿನಿ, ಬೆಂಗಳೂರು



ಸಿಎಂ ಕುರ್ಚಿ ಗಲಾಟೆ ಮರೆಮಾಚಲು ರಾಜಕಾರಣದ ದಾಳ ಉರುಳಿಸಿರುವುದು ರಾಜ್ಯದ ದುರಂತ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿಯವರು ಸೋಮವಾರ ವಾಗ್ದಾಳಿ ನಡೆಸಿದ್ದಾರೆ. ಶಿವಮೊಗ್ಗ ಜಿಲ್ಲೆಯ ಸಾಗರದ ಸಿಗಂದೂರು ಸೇತುವೆ ಉದ್ಘಾಟನೆ ಸಮಾರಂಭಕ್ಕೆ ತಡವಾಗಿ ಆಹ್ವಾನ ನೀಡಿರುವ ಹಿನ್ನೆಲೆಯಲ್ಲಿ ಸಮಾರಂಭದಲ್ಲಿ ಭಾಗವಹಿಸಲು ಸಾಧ್ಯವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿರುವ ಹಿನ್ನೆಲೆಯಲ್ಲಿ ಪ್ರಹ್ಲಾದ್ ಜೋಶಿಯವರು ಕಿಡಿಕಾರಿದ್ದಾರೆ.

ಶಿವಮೊಗ್ಗ ಕ್ಷೇತ್ರದ ಲೋಕಸಭಾ ಸದಸ್ಯರಾದ ಬಿವೈ ರಾಘವೇಂದ್ರರವರು ಜುಲೈ 9 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಸಿಗಂದೂರು ಸೇತುವೆ ಉದ್ಘಾಟನೆ ಕಾರ್ಯಕ್ರಮಕ್ಕೆ ಆಹ್ವಾನದ ಜೊತೆ ಪತ್ರವನ್ನು ಬರೆದಿದ್ದಾರೆ. ಅಲ್ಲದೆ, ಸಿಗಂದೂರು ಸೇತುವೆ ಕರ್ನಾಟಕದ ಹೆಮ್ಮೆ, ಜನರಿಗೆ ಅನುಕೂಲ ಹಾಗೂ ಪ್ರವಾಸಿ ಕ್ಷೇತ್ರವಾಗುವ ಕುರಿತು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಸಚಿವ ನಿತಿನ್ ಗಡ್ಕರಿಯವರು ಕೂಡ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಜುಲೈ 11 ರಂದು ಪತ್ರ ಬರೆದು ಆಹ್ವಾನಿಸಿದ್ದಾರೆ

> ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಶರಾವತಿ ನದಿಯ ಹಿನ್ನೀರಿನಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಅಂಬಾರಗೋಡ್ಲು- ಕಳಸವಳ್ಳಿ- ಸಿಗಂದೂರು ಸೇತುವೆಯ ಲೋಕಾರ್ಪಣೆಯನ್ನು ಶಿವಮೊಗ್ಗದ ಜನ ನಿಜಕ್ಕೂ ಹಬ್ಬದ ಸಂದರ್ಭ ಎಂದೇ ಭಾವಿಸುತ್ತಿದ್ದಾರೆ. ಆದರೆ, ಈ ಸಂದರ್ಭವನ್ನು ರಾಜಕೀಯ ದಾಳವಾಗಿ ಉರುಳಿಸಲು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಿದ್ದರಾಮಯ್ಯ ಮುಂದಾಗಿರುವುದು ನಿಜಕ್ಕೂ ಬೇಸರದ ಸಂಗತಿ ಎಂದು ಹೇಳಿದ್ದಾರೆ.

# 5 ಪಾಲಿಕೆಗಳ ಕರಡು ರಚನೆ -ಯಾವ ಅಸೆಂಬ್ಲಿ ಕ್ಷೇತ್ರ ಯಾವ ಪಾಲಿಕೆ ವ್ಯಾಪ್ತಿಗೆ, ಇಲ್ಲಿದೆ ಮಾಹಿತಿ

• ಉದಯವಾಹಿನಿ, ಬೆಂಗಳೂರು

ವಿಪಕ್ಷಗಳ ತೀವ್ರ ವಿರೋಧದ ನಡುವೆಯೂ, ಗ್ರೇಟರ್ ಬೆಂಗಳೂರು ಕಾಯ್ದೆ ಅಡಿಯಲಿ ರಚನೆಯಾಗಲಿರುವ ಐದು ಹೊಸ ಪಾಲಿಕೆಗಳಿಗೆ ಬೆಂಗಳೂರು ಹೆಸರನ್ನೇ ಮುಂದುವರಿಸಲು ಸರ್ಕಾರ ನಿರ್ಧರಿಸುವ ಸಾಧ್ಯತೆಯಿದೆ. ಆ ಮೂಲಕ ಬೆಂಗಳೂರನ್ನು ವಿಭಜಿಸಲಾಗುತ್ತಿದೆ ಎನ್ನುವ ವಿರೋಧ ಪಕ್ಷಗಳ ಆಪಾದನೆಗೆ ತಿರುಗೇಟು ನೀಡಲು ನಿರ್ಧರಿಸಲಾಗಿದೆ. ಐದು ನೂತನ ಪಾಲಿಕೆಗಳಿಗೆ ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ, ಬೆಂಗಳೂರು ಪೂರ್ವ, ಬೆಂಗಳೂರು ಪಶ್ಚಿಮ ಮತ್ತು ಬೆಂಗಳೂರು ಕೇಂದ್ರ ಮಹಾನಗರಪಾಲಿಕೆ ಎಂದು ನಾಮಕರಣ ಮಾಡುವ ಸಾಧ್ಯತೆಯಿದೆ.

ಆಗಸ್ಟ್ 15 ಸ್ವಾತಂತ್ರ್ಯೋತ್ಸವಕ್ಕೆ ಕೊಡುಗೆಯಾಗಿ ಅಧಿಕೃತ ಘೋಷಣೆಯಾಗುವ ಸಾಧ್ಯತೆಯಿದೆ ಎಂದು ಹೇಳಲಾಗುತ್ತಿದೆ. ಹೊಸ ಪಾಲಿಕೆ ರಚನೆಯ ನಂತರ, ಕೆಲವೊಂದು ವಿಧಾನಸಭಾ ಕ್ಷೇತ್ರಗಳು ಹೊಸ ಪಾಲಿಕೆ ವ್ಯಾಪ್ತಿಗೆ ಬರಲಿದೆ. ಹೊಸ ಪಾಲಿಕೆಗಳ ರಚನೆಯ ಕರಡು ಸಿದ್ದಗೊಳ್ಳಲು ಒಂದು ತಿಂಗಳು ಹಿಡಿಯಲಿದೆ. ಈ ಗ್ಯಾಪ್‌ನಲ್ಲಿ ಬೆಂಗಳೂರು ಮಹಾನಗರಕ್ಕೆ ಹೆಚ್ಚಿನ ಮೂಲಸೌಕರ್ಯ ಒದಗಿಸಲು ಕೆಲವೊಂದು ಯೋಜನೆಗಳನ್ನು ಡಿಸಿಎಂ ಡಿಕೆ ಶಿವಕುಮಾರ್ ಘೋಷಿಸುವ ಸಾಧ್ಯತೆಯಿದೆ. ಹೊಸ ಪಾಲಿಕೆಗಳ ರಚನೆಯ ನಂತರ ಈಗಿರುವ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯು ಹೊಸ ಪಾಲಿಕೆಯಡಿಯಲಿ



ಬರಲಿದೆ. ಆದಾಗ್ಯೂ, ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಯಾವುದೇ ಬದಲಾವಣೆ ಸದ್ಯಕ್ಕಿಲ್ಲ.

ಆ ಬಗ್ಗೆ ಕೇಂದ್ರ ಸರ್ಕಾರ ನಿರ್ಧಾರ ತೆಗೆದುಕೊಳ್ಳಬೇಕಾಗಿರುವುದರಿಂದ, ಅದರಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ಆಡಳಿತದ ದೃಷ್ಟಿಯಿಂದ ಐದು ನೂತನ ಪಾಲಿಕೆಗಳಿಗೆ ಯಾವುದೇ ತಾರತಮ್ಯವಿಲ್ಲದೇ, ಸಮಾನ ಆದಾಯ ಮತ್ತು ಅನುದಾನ ಹಂಚಿಕೆ, ಸಂಪನ್ಮೂಲ ಕ್ರೋಡೀಕರಣದ ಜವಾಬ್ದಾರಿಯನ್ನು ಹೊಸ ಉನ್ನತಾಧಿಕಾರಿಗಳ ಸಮಿತಿಗೆ ರೂಪುರೇಷೆ ಸಿದ್ದಪಡಿಸಲು ಸೂಚಲಾಗಿದೆ.

> ಕರಡು ಪ್ರತಿಗೆ ಸಾರ್ವಜನಿಕರಿಂದ ಆಕ್ಷೇಪಣೆ/ಅಭಿಪ್ರಾಯವನ್ನು ಆಹ್ವಾನಿಸಲಾಗುತ್ತದೆ. ಅದರಲ್ಲಿ ಬರುವ ಮತ್ತು ಪ್ರಾಕ್ಟಿಕಲ್ ಆಗಿ ಅನುಷ್ಠಾನಕ್ಕೆ ಯೋಗ್ಯವಾಗಿರುವ ಸಲಹೆಗಳನ್ನು ಸೇರ್ಪಡೆಗೊಳಿಸಿ ಅಂತಿಮ ಅಧಿಸೂಚನೆ ಹೊರಡಿಸಲಾಗುತ್ತದೆ. ಇದಕ್ಕೂ ಮುನ್ನ, ಸಮಿತಿಯ ವರದಿಯನ್ನು ಆಧರಿಸಿ ಐದು ಪಾಲಿಕೆಗಳನ್ನು ಅಸ್ತಿತ್ವಕ್ಕೆ ತರಲು ಸಚಿವ ಸಂಪುಟ ಸಭೆಯ ಅನುಮತಿಯನ್ನು ಪಡೆಯಬೇಕಾಗುತ್ತದೆ.

# ಕರ್ನಾಟಕ ರಾಜ್ಯ ಕಾರ್ಮಿಕ ಪರಿಷತ್ ಎಚ್ಚರಿಕೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

**ಬೃಹತ್ ಪ್ರತಿಭಟನಾ ಸಮಾವೇಶ**

ವಾರ್ಷಿಕ 40 ಲಕ್ಷ ವಹಿವಾಟು ನಡೆಸಿರುವ ಸಣ್ಣ ಉದ್ದಿಮೆದಾರರಿಗೆ ಏಕಾಏಕಿ ನೋಟೀಸ್ ಜಾರಿಗೊಳಿಸಿರುವ ವಾಣಿಜ್ಯ ತೆರಿಗೆ ಇಲಾಖೆ ಕ್ರಮವನ್ನು ವಿರೋಧಿಸಿ ಇದೇ 23 ರಿಂದ ಎರಡು ದಿನಗಳ ಕಾಲ ಬಂದ್ ಆಚರಿಸಲು ಕರ್ನಾಟಕ ರಾಜ್ಯ ಕಾರ್ಮಿಕ ಪರಿಷತ್ತು ನಿರ್ಧರಿಸಿದೆ. ಹಾಲು, ಬೇಕರಿ ಉತ್ಪನ್ನಗಳು, ಬೀಡಿ, ಸಿಗರೇಟು ಮಾರಾಟವನ್ನು ಬಂದ್ ಮಾಡುವುದಾಗಿ ಎಚ್ಚರಿಕೆ ನೀಡಿದೆ.

ಸಭೆಯಲ್ಲಿ ಮಾತನಾಡಿದ ಕರ್ನಾಟಕ ರಾಜ್ಯ ಕಾರ್ಮಿಕ ಪರಿಷತ್ ಅಧ್ಯಕ್ಷ ರವಿ ಶೆಟ್ಟಿ ಬೈಂದೂರು ಮಾತನಾಡಿ, ಜು. 23, 24 ರಂದು ಬೇಕರಿ, ಬೀಡ ಅಂಗಡಿಗಳು, ಕೇಂದ್ರದ ವಿರುದ್ಧ ಇಡೀ ರಾಜ್ಯದಲ್ಲಿ ದೊಡ್ಡ ಮಟ್ಟದ ಹೋರಾಟ ನಡೆಸುತ್ತೇವೆ. ನಂತರ 25 ರಂದು ಬೆಂಗಳೂರಿನಲ್ಲಿ ಬೃಹತ್ ಪ್ರತಿಭಟನಾ ಸಮಾವೇಶ ನಡೆಸುತ್ತೇವೆ. ನಮ್ಮ ತಾತ, ಮುತ್ತಾತನ ಕಾಲದಿಂದ ಅಂಗಡಿ, ಮುಂಗಟ್ಟುಗಳನ್ನು ನಡೆಸಿಕೊಂಡು ಬರುತ್ತಿದ್ದೇವೆ. ಆದರೆ ಯಾವುದೇ ಮುನ್ಸೂಚನೆ ನೀಡದೇ ನೋಟೀಸ್ ನೀಡಿರುವುದು ಸರಿಯಲ್ಲ. ನಮ್ಮ ಅಂಗಡಿ ಎರಡರಿಂದ ಹತ್ತು ಲಕ್ಷ ರೂಪಾಯಿ ಬೆಲೆ ಬಾಳುತ್ತದೆ. ಆದರೆ ಕೋಟ್ಯಂತರ ತೆರಿಗೆ ಪಾವತಿಸುವಂತೆ ಸೂಚಿಸಿರುವುದು ಸರಿಯಲ್ಲ ಎಂದರು. ಚಾಲಕರ ಸಂಘದ ಅಧ್ಯಕ್ಷ ಗಂಡಸಿ ಸದಾನಂದ ಸ್ವಾಮಿ ಮಾತನಾಡಿ, ಜಿ.ಎಸ್.ಟಿ ಮಂಡಳಿ ಅಧ್ಯಕ್ಷರೂ ಆಗಿರುವ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಕೂಡಲೇ ಮಧ್ಯಪ್ರವೇಶಿಸಿ ನೋಟಿಸ್ ಹಿಂಪಡೆಯಬೇಕು. ಜಿ.ಎಸ್.ಟಿ ಮಂಡಳಿ ಸಭೆಯಲ್ಲಿ ಈ ಕುರಿತು ಚರ್ಚೆ ನಡೆಸಿ ತಕ್ಷಣವೇ ಸಣ್ಣ ಉದ್ದಿಮದಾರರ ಪರವಾದ ತೀರ್ಮಾನ ತೆಗೆದುಕೊಳ್ಳಬೇಕು. ಕರ್ನಾಟಕವನ್ನು ಪ್ರತಿನಿಧಿಸುತ್ತಿರುವ ನಿರ್ಮಲಾ ಸೀತಾರಾಮನ್ ಉದ್ದಿಮೆದಾರರ ಪರವಾಗಿರಬೇಕು. ಇದು ಕರ್ನಾಟಕಕ್ಕೆ ಮಾತ್ರ ಸೀಮಿತವಾಗಿಲ್ಲ, ಇಡೀ ದೇಶಕ್ಕೆ ಅನ್ವಯಿಸುತ್ತದೆ. ನಮ್ಮ ಹಿತಾಸಕ್ತಿಗೆ ವಿರುದ್ಧವಾಗಿ ಕ್ರಮ ಕೈಗೊಂಡರೆ ಹೋರಾಟವನ್ನು ತೀವ್ರಗೊಳಿಸುತ್ತೇವೆ ಎಂದರು.

ಸಭೆಯಲ್ಲಿ ಕನ್ನಡ ಒಕ್ಕೂಟದ ಅಧ್ಯಕ್ಷ ನಟರಾಜ್ ಬೊಮ್ಮಸಂದ್ರ, ಕನ್ನಡ ಭೂಷಣ, ತೆರಿಗೆ ಮಾಹಿತಿದಾರ ಸುಬ್ರಮಣ್ಯ, ಗೋವಿಂದ ಬಾಬು ಪೂಜಾರಿ, ಪೂಜಾಶೆಟ್ಟಿ, ಮುರುಳಿ, ಕೃಷ್ಣ, ಪ್ರಕಾಶ್ ಶೆಟ್ಟಿ, ಶಶಿಧರ್ ಗೌಡ, ನವೀನ್ ಕುಮಾರ್ ಹೆಗಡೆ, ರಾಜ್ಯ ಹೋಟೆಲ್ ಸಂಘದ ಅಧ್ಯಕ್ಷ ಜಿ ಕೆ ಶೆಟ್ಟಿ, ಶೋಭಾ ಗೌಡ, ನಾಗರಾಜ್, ಅನೂಪ್, ಪ್ರದೀಪ್, ಸುರೇಂದ್ರ ಶೆಟ್ಟಿ, ಶೈಲೇಶ್ ಪೂಜಾರಿ, ಮಣಿಕಂಠ ಮತ್ತಿತರರು ಉಪಸ್ಥಿತರಿದ್ದರು.

> ವಾಣಿಜ್ಯ ತೆರಿಗೆ ಇಲಾಖೆಯಿಂದ ಸಣ್ಣ ಉದ್ಯಮಿದಾರರಿಗೆ ಕೋಟ್ಯಾಂತರ ರೂಪಾಯಿ ತೆರಿಗೆ ಪಾವತಿಸುವಂತೆ ಶೋಕಾಸ್ ನೋಟಿಸ್ ಕೊಟ್ಟಿರುವುದು ಕಾನೂನು ಬಾಹಿರ. ಕೇಂದ್ರ ಸರ್ಕಾರ ಸಣ್ಣ ಉದ್ದಿಮೆದಾರರ ವಿರೋಧಿ ನೀತಿ ಅನುಸರಿಸುತ್ತಿದ್ದು, ನಮಗೆ ನ್ಯಾಯ ಸಿಗುವ ತನಕ ಹೋರಾಟ ನಡೆಸುತ್ತೇವೆ ಎಂದು ರವಿ ಶೆಟ್ಟಿ ಬೈಂದೂರು ಹೇಳಿದರು.

# ಪಾಲಿಕೆ ನೌಕರರೊಂದಿಗೆ ಸಂಧಾನ ಸಭೆ ಯಶಸ್ವಿ: ಮುಷ್ಕರ ವಾಪಸ್

## ಸಚಿವ ಭೈರತಿ ಸುರೇಶ್ ರವರಿಗೆ ಮಹಾನಗರ ಪಾಲಿಕೆ ನೌಕರರ ಪರಿಷತ್ತು ವತಿಯಿಂದ ಅಭಿನಂದನೆ ಕಾರ್ಯಕ್ರಮ

• ಉದಯವಾಹಿನಿ, ಬೆಂಗಳೂರು

ನಗರಾಭಿವೃದ್ಧಿ, ನಗರ ಯೋಜನೆ ಸಚಿವ ಬಿ.ಎಸ್.ಸುರೇಶ ಅವರು ಮಹಾನಗರ ಪಾಲಿಕೆಗಳ ನೌಕರರ ಸಂಘದ ಪದಾಧಿಕಾರಿಗಳೊಂದಿಗೆ ನಡೆಸಿದ ಸಂಧಾನ ಸಭೆ ಫಲಪ್ರದವಾಗಿದ್ದು, ಮುಷ್ಕರ ಕೈಬಿಡುವುದಾಗಿ ನೌಕರರು ಪ್ರಕಟಿಸಿದ್ದಾರೆ. ವಿಕಾಸಸೌಧದಲ್ಲಿ ಮಂಗಳವಾರ ರಾಜ್ಯದ ಮಹಾನಗರ ಪಾಲಿಕೆ ನೌಕರರ ಸಂಘದ ಅಧ್ಯಕ್ಷ ಅಮೃತರಾಜ್ ಮತ್ತು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಷಡಕ್ಷರಿ ನೇತೃತ್ವದ ಪದಾಧಿಕಾರಿಗಳೊಂದಿಗೆ ಸಚಿವರು ಸಭೆ ನಡೆಸಿದರು.

ಮಹಾನಗರ ಪಾಲಿಕೆಗಳ ಸಾಮಾನ್ಯ ನೇಮಕಾತಿ ನಿಯಮಗಳು 2011 ಕ್ಕೆ ಸಮಗ್ರ ತಿದ್ದುಪಡಿ ಮಾಡುವುದು, ಮಹಾನಗರ ಪಾಲಿಕೆ ನೌಕರರನ್ನು ಪೂರ್ಣ ಪ್ರಮಾಣದಲ್ಲಿ ಸರ್ಕಾರಿ ನೌಕರರೆಂದು ಪರಿಗಣಿಸುವುದು, ಸರ್ಕಾರಿ ನೌಕರರ ರೀತಿಯಲ್ಲಿ ಮಹಾನಗರ ಪಾಲಿಕೆಗಳ ಅಧಿಕಾರಿಗಳು/ನೌಕರರಿಗೂ ಕೆಜಿಐಡಿ, ಜಿಐಎಸ್ ಮತ್ತು ಜಿಪಿಎಫ್ ಸೌಲಭ್ಯಗಳನ್ನು ನೀಡುವುದು ಸೇರಿದಂತೆ ಹಲವು ಬೇಡಿಕೆಗಳನ್ನು ನೌಕರರ ಸಂಘಗಳು ಸರ್ಕಾರ ಮುಂದಿಟ್ಟಿದ್ದವು.

ಈ ಬಗ್ಗೆ ಸಭೆ ನಡೆಸಿದ ಬಳಿಕ ಸಭೆಯ ಬಗ್ಗೆ ಮಾಹಿತಿ ನೀಡಿದ ಸಚಿವ ಬೈರತಿ ಸುರೇಶ ಅವರು, ಪಾಲಿಕೆ ನೌಕರರಿಗೆ ಸಕಾಲಕ್ಕೆ ವೇತನ ನೀಡುವುದು, ಸಿ ಆರ್ ನಿಯಮಗಳಿಗೆ ತಿದ್ದುಪಡಿ ತರುವ ಕುರಿತು ಆರ್ಥಿಕ ಇಲಾಖೆ ಅನುಮೋದನೆ ಪಡೆಯುವಂತೆ ಇಲಾಖೆ


ಉದಯವಾಹಿನಿ ಚಿತ್ರ

ಅಧಿಕಾರಿಗಳಿಗೆ ಸೂಚನೆ ನೀಡಿರುವುದಾಗಿ ತಿಳಿಸಿದರು. ಪೌರಾಡಳಿತ ಆಯುಕ್ತರ ಹುದ್ದೆಗಳನ್ನು ಸೃಜಿಸುವಂತೆ ನೌಕರರು ಬೇಡಿಕೆ ಇಟ್ಟಿದ್ದರು. ಆದರೆ, ಕಾನೂನು ಪರಿಮಿತಿಯೊಳಗೆ ವಲಯ ಆಯುಕ್ತರ ಹುದ್ದೆ ಸೃಜಿಸುವ ಬಗ್ಗೆ ಅಂತಿಮ ನಿರ್ಧಾರ ಕೈಗೊಳ್ಳಲಾಗುತ್ತದೆ. ಈ ಬಗ್ಗೆ ಆರ್ಥಿಕ ಇಲಾಖೆ ಅಭಿಪ್ರಾಯ ಬಂದ ತಕ್ಷಣ ಕ್ರಮ ವಹಿಸುವುದಾಗಿ ಭರವಸೆ ನೀಡಿರುವುದಾಗಿ ಹೇಳಿದರು.

**ಪರಿಸರ ಇಂಜಿನಿಯರ್ ನೇಮಕಕ್ಕೆ ಸೂಚನೆ:** ಮಹಾನಗರ ಪಾಲಿಕೆಗಳಲ್ಲಿ ಸಾಕಷ್ಟು ಪರಿಸರ ಇಂಜಿನಿಯರ್ ಗಳ ಹುದ್ದೆಗಳು ಸಾಕಷ್ಟು ಖಾಲಿ ಇವೆ. ಇದರಿಂದ ದೈನಂದಿನ ಕರ್ತವ್ಯಕ್ಕೆ ಅಡ್ಡಿ ಯಾಗುತ್ತಿದೆ ಎಂಬ ವಿಚಾರವನ್ನು ಗಂಭೀರವಾಗಿ ಪರಿಗಣಿಸಿದ ಸಚಿವರು, ಮಂಜೂರಾಗಿರುವ ಪರಿಸರ ಇಂಜಿನಿಯರ್‌ಗಳ ಹುದ್ದೆಗಳ ಭರ್ತಿಗೆ ಅನುಮೋದನೆ ನೀಡುವಂತೆ ಆರ್ಥಿಕ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

### ಪಾಲಿಕೆಗಳಿಗೂ ಜ್ಯೋತಿ ಸಂಜೀವಿನಿ

ಸರ್ಕಾರಿ ನೌಕರರಿಗೆ ಜಾರಿಗೆ ತಂದಿರುವ ಜ್ಯೋತಿ ಸಂಜೀವಿನಿ ಆರೋಗ್ಯ ವಿಮೆಯನ್ನು ಪಾಲಿಕೆ ನೌಕರರಿಗೂ ವಿಸ್ತರಣೆ ಮಾಡುವ ಬಗ್ಗೆ ಸಹಮತ ವ್ಯಕ್ತಪಡಿಸಲಾಗಿದೆ. ಈ ಯೋಜನೆಯಡಿ ನೌಕರರು ತಮ್ಮ ಪಾಲಿನ ವಿಮಾ ಮೊತ್ತ ಮತ್ತು ಅದಕ್ಕೆ ಸಮಾನವಾದ ಮೊತ್ತವನ್ನು ಪಾಲಿಕೆಗಳು ಭರಿಸುವ ಸಾಧಕ-ಭಾದಕಗಳ ಬಗ್ಗೆ ಪರಿಶೀಲಿಸಲಾಗುತ್ತದೆ. ಇದಲ್ಲದೇ, ನೌಕರರ ಚಿಕಿತ್ಸಾ ವೆಚ್ಚವನ್ನು ಮಂಜೂರು ಮಾಡುವ ಅಧಿಕಾರವನ್ನು ಆಯಾ ಪಾಲಿಕೆಗಳ ಆಯುಕ್ತರಿಗೆ ನೀಡುವ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಅವರು ಪ್ರಕಟಿಸಿದರು.

**ಪಾಲಿಕೆ ನೌಕರರಿಗೆ ಗುಂಪು ವಿಮೆ:** ಸರ್ಕಾರಿ ನೌಕರರ ಮಾದರಿಯಲ್ಲಿ ಪಾಲಿಕೆ ನೌಕರರಿಗೂ ಗುಂಪು ವಿಮೆ ಯೋಜನೆ (ಜಿಐಎಸ್) ಜಾರಿಗೆ ತರುವ ಬಗ್ಗೆ ಸರ್ಕಾರ ಮುಕ್ತ ಮನಸು ಹೊಂದಿದೆ. ವಿಮಾ ಕಂತಿನ ಮೊತ್ತದಲ್ಲಿ ನೌಕರರು ತಮ್ಮ ಪಾಲಿನ ಮೊತ್ತವನ್ನು ಪಾವತಿಸಲು ಸಿದ್ಧವಿರುವುದಾಗಿ ತಿಳಿಸಿದ್ದಾರೆ ಎಂದು ಹೇಳಿದ ಸಚಿವರು, ಈ ಹಿನ್ನೆಲೆಯಲ್ಲಿ ಪಾಲಿಕೆಗಳು ನೌಕರರ ಗುಂಪು ವಿಮೆ ಯೋಜನೆಗೆ ಉಳಿದ ಮೊತ್ತವನ್ನು ಭರಿಸುವುದಾದರೆ ಆಗಬಹುದಾದ ಆರ್ಥಿಕ ಹೊರೆಯನ್ನು ಗಮನಿಸಿ ಅಂತಿಮ ನಿರ್ಧಾರ ಕೈಗೊಳ್ಳುವಂತೆ ಉನ್ನತಾಧಿಕಾರಿಗಳಿಗೆ ಆದೇಶ ನೀಡಿದರು.

**ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗೆ ಪ್ರೋತ್ಸಾಹ:** ಪ್ರತಿ ವರ್ಷ ಪಾಲಿಕೆಗಳ ನೌಕರರಿಗೆ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲು ಆರ್ಥಿಕ ಹೊರೆಯಾಗದ ರೀತಿಯಲ್ಲಿ ಪಾಲಿಕೆಗಳಿಂದಲೇ ವೆಚ್ಚ ಭರಿಸಲು ಸೂಚನೆ ನೀಡಲಾಗಿದ್ದು, ಆರ್ಥಿಕ ಪರಿಸ್ಥಿತಿಯನ್ನು ಗಮನಿಸಿ ನೌಕರರ ಇನ್ನಿತರ ಬೇಡಿಕೆಗಳನ್ನು ಹಂತ-ಹಂತವಾಗಿ ಈಡೇರಿಸುವ ಭರವಸೆ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

**ಮುಷ್ಕರ ವಾಪಸ್:** ಬಹುತೇಕ ಬೇಡಿಕೆಗಳನ್ನು ಈಡೇರಿಸುವ ಬಗ್ಗೆ ಸಚಿವರು ಭರವಸೆ ನೀಡಿದ ಹಿನ್ನೆಲೆಯಲ್ಲಿ ಷಡಾಕ್ಷರಿ ಮತ್ತು ಅಮೃತರಾಜ್ ಅವರು ಮುಷ್ಕರವನ್ನು ವಾಪಸ್ ಪಡೆದಿರುವುದಾಗಿ ಘೋಷಿಸಿದರಲ್ಲದೇ, ಸಚಿವರನ್ನು ಸನ್ಮಾನಿಸಿ ಅಭಿನಂದನೆ ಸಲ್ಲಿಸಿದರು. ಈ ಸಭೆಯಲ್ಲಿ ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿ ದೀಪಾ ಚೋಳನ್ ಮತ್ತು ಪೌರಾಡಳಿತ ನಿರ್ದೇಶಕರಾದ ಪ್ರಭುಲಿಂಗ ಕವಳಿಕಟ್ಟಿ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಇದ್ದರು.

# ರಸ್ತೆಗೆ ಸರೋಜಾದೇವಿ ಹೆಸರಿಡುವ ಬಗ್ಗೆ ಜಿಬಿಎ ಜೊತೆ ಚರ್ಚೆ: ಸಿಎಂ

• ಉದಯವಾಹಿನಿ, ಬೆಂಗಳೂರು

ಬಹುಭಾಷಾ ನಟಿ ಬಿ. ಸರೋಜಾದೇವಿ ಅವರ ಹೆಸರನ್ನು ಅವರು ವಾಸಿಸುತ್ತಿದ್ದ ರಸ್ತೆಗೆ ಇಡುವ ಬಗ್ಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ಜೊತೆ ಚರ್ಚಿಸುತ್ತೇನೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಈ ಬಗ್ಗೆ ಎಕ್ಸ್‌ನಲ್ಲಿ ಅವರು ಮಾಹಿತಿ ನೀಡಿದ್ದಾರೆ. ಬಿ.ಸರೋಜಾದೇವಿ ಒಬ್ಬ ಮೇರು ನಟಿ. ಕನ್ನಡ, ತಮಿಳು, ತೆಲುಗು, ಹಿಂದಿ ಭಾಷೆಗಳಲ್ಲಿ ಪಾತ್ರಗಳನ್ನು ಮಾಡಿ ಸೈ ಎನಿಸಿಕೊಂಡಿದ್ದ ಅದ್ಭುತ ನಟಿ. ಅನೇಕ ಬಾರಿ ಸರೋಜಾದೇವಿ ಅವರನ್ನು ಭೇಟಿ ಮಾಡಿದ್ದೇನೆ. ಎಲ್ಲರೊಂದಿಗೆ ಆತ್ಮೀಯವಾಗಿ, ಪ್ರೀತಿಯಿಂದ ಮಾತನಾಡುತ್ತಿದ್ದರು. ಅವರ ನಿಧನ ಇಡೀ ಚಿತ್ರರಂಗಕ್ಕೆ ದೊಡ್ಡ ಆಘಾತವನ್ನುಂಟು ಮಾಡಿದೆ' ಎಂದು ಸಿದ್ದರಾಮಯ್ಯ ಹೇಳಿದ್ದಾರೆ. ಚಿಕ್ಕವಯಸ್ಸಿನಲ್ಲಿಯೇ ಸಿನಿಮಾರಂಗವನ್ನು ಪ್ರವೇಶಿಸಿ ಏಳು ದಶಕಗಳ ಕಾಲ ಕಲಾವಿದೆಯಾಗಿದ್ದವರು. ಅಭಿನವ ಸರಸ್ವತಿ' ಎಂಬ ಬಿರುದು ಚಿಕ್ಕವಯಸ್ಸಿಗೆ ದೊರೆತಿತ್ತು. ಸರೋಜಾದೇವಿ ಅವರು ಯಾವುದೇ ಪಾತ್ರಕ್ಕೂ ಜೀವ ತುಂಬುತ್ತಿದ್ದರು. ಖಾಸಗಿ ಜೀವನದಲ್ಲಿಯೂ ಶಿಸ್ತುಬದ್ಧ ಜೀವನವನ್ನು ನಡೆಸಿದವರು' ಎಂದಿದ್ದಾರೆ. ಕನ್ನಡ ಚಿತ್ರರಂಗ ಬೆಳೆಯಲು ಅಪಾರ ಕೊಡುಗೆಯನ್ನು ಕೊಟ್ಟಿದ್ದಾರೆ. ಅವರ ಸಾವಿನಿಂದ ಚಿತ್ರರಂಗಕ್ಕೆ ಅಪಾರವಾದ ನಷ್ಟವಾಗಿದೆ. ಸರೋಜಾದೇವಿ ಅವರ ಹೆಸರನ್ನು ಅವರು ವಾಸಿಸುತ್ತಿದ್ದ ರಸ್ತೆಗೆ ಇಡುವ ಬಗ್ಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಜೊತೆ ಚರ್ಚಿಸುತ್ತೇನೆ' ಎಂದು ತಿಳಿಸಿದ್ದಾರೆ.

# ಆಟೊ ಪ್ರಯಾಣ ದರ ಪ್ರತಿ ಕಿ.ಮೀ.ಗೆ ರೂ.3 ಹೆಚ್ಚಳ

• ಉದಯವಾಹಿನಿ, ಬೆಂಗಳೂರು

ಬಿಬಿಎಂಪಿ ವ್ಯಾಪ್ತಿಯಲ್ಲಿ ಆಟೊ ಪ್ರಯಾಣ ದರವನ್ನು ಹೆಚ್ಚಿಸಿ ನಗರ ಜಿಲ್ಲಾಧಿಕಾರಿ ಆದೇಶ ಹೊರಡಿಸಿದ್ದು, ಪರಿಷ್ಕೃತ ದರ ಆಗಸ್ಟ್ 1ರಿಂದ ಜಾರಿಗೆ ಬರಲಿದೆ. ಮೊದಲ ಎರಡು ಕಿ.ಮೀ.ಗೆ ಕನಿಷ್ಠ ರೂ.30 ಇದ್ದ ದರವನ್ನು ರೂ.36ಕ್ಕೆ ಏರಿಸಲಾಗಿದೆ. ಬಳಿಕ ಪ್ರತಿ ಕಿಲೋ ಮೀಟರ್‌ಗೆ ರೂ. 15 ಇದ್ದಿದ್ದು ರೂ.18ಕ್ಕೆ ಏರಿದೆ. ಆಟೊದಲ್ಲಿ ಮೂವರು ಅಷ್ಟೇ ಪ್ರಯಾಣಿಸಬಹುದು ಎಂದು ಆದೇಶದಲ್ಲಿ ತಿಳಿಸಲಾಗಿದೆ. ರಾತ್ರಿ 10ರಿಂದ ಬೆಳಿಗ್ಗೆ 5ವರೆಗೆ ಒಂದೂವರೆ ಪಟ್ಟು ಅಧಿಕ ದರ ವಿಧಿಸಲು ಅವಕಾಶವಿದೆ. ಮೊದಲ ಐದು ನಿಮಿಷ ಕಾಯುವಿಕೆ ಉಚಿತವಾಗಿದ್ದು, ಬಳಿಕ ಪ್ರತಿ 15 ನಿಮಿಷಕ್ಕೆ ರೂ.10 ನೀಡಬೇಕಾಗುತ್ತದೆ.

ಲಗೇಜು 20 ಕೆ.ಜಿ.ವರೆಗೆ ಉಚಿತವಾಗಿದ್ದು, ಅದಕ್ಕಿಂತ ಹೆಚ್ಚಿಗೆ ಇದ್ದರೆ 10 ದರ ವಿಧಿಬಹುದಾಗಿದೆ. 50 ಕೆ.ಜಿ.ವರೆಗೆ ಮಾತ್ರ ಪ್ರಯಾಣಿಕರು ಆಟೊದಲ್ಲಿ ಲಗೇಜು ಸಾಗಿಸಬಹುದು ಎಂದು ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ನಗರ ಜಿಲ್ಲಾಧಿಕಾರಿ ತಿಳಿಸಿದ್ದಾರೆ. 2021ರ ಡಿಸೆಂಬರ್‌ನಲ್ಲಿ ಈ ಹಿಂದೆ ಆಟೊ ದರ ಪರಿಷ್ಕರಣೆಯಾಗಿತ್ತು. ಮೊದಲ ಎರಡು ಕಿಲೋಮೀಟರ್‌ಗೆ ಕನಿಷ್ಠ ದರವನ್ನು ರೂ.40ಕ್ಕೆ ಏರಿಸಬೇಕು. ಆ ನಂತರದ ಪ್ರತಿ ಕಿಲೋ ಮೀಟರ್‌ಗೆ 20ಕ್ಕೆ ಏರಿಸಬೇಕು ಎಂದು ವಿವಿಧ ಆಟೊ ಸಂಘಟನೆಗಳು ಈಚೆಗೆ ಒತ್ತಾಯಿಸಿದ್ದವು. ದರ ಏರಿಕೆ ಬೇಡ. ಬೈಕ್ ಟ್ಯಾಕ್ಸಿಗಳನ್ನು ನಿಷೇಧಿಸಿ ಪ್ರಯಾಣಿಕರು ಆಟೊದಲ್ಲಿ ಬರುವಂತೆ ಮಾಡಿದರೆ ಸಾಕು ಎಂದು ಕೆಲವು ಸಂಘಟನೆಗಳು ಆಗ್ರಹಿಸಿದ್ದವು. ಇದರ ನಡುವೆ ದರ ನಿಗದಿಗಾಗಿ ಜಿಲ್ಲಾಧಿಕಾರಿ ನೇತೃತ್ವದಲ್ಲಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಆಟೊ ಸಂಘಟನೆಗಳೊಂದಿಗೆ ಸಭೆಗಳು ನಡೆದಿದ್ದವು.

# ಮೂಡುಬಿದಿರೆ ಕಾಲೇಜಿನ ಇಬ್ಬರು ಉಪನ್ಯಾಸಕರು, ಸ್ನೇಹಿತ ಅರೆಸ್ಟ್

• ಉದಯವಾಹಿನಿ, ಬೆಂಗಳೂರು

ವಿದ್ಯಾರ್ಥಿನಿ ಮೇಲೆ ಅತ್ಯಾಚಾರ ಎಸಗಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂಡಬಿದಿರೆಯ ಪ್ರತಿಷ್ಠಿತ ಕಾಲೇಜಿನ ಇಬ್ಬರು ಉಪನ್ಯಾಸಕರು ಮತ್ತು ಅವರ ಸ್ನೇಹಿತನನ್ನು ಮಾರತಹಳ್ಳಿ ಪೊಲೀಸರು ಬಂಧಿಸಿದ್ದಾರೆ. ಕಾಲೇಜಿನ ಹಳೆ ವಿದ್ಯಾರ್ಥಿನಿ ಮಹಿಳಾ ಆಯೋಗಕ್ಕೆ ದೂರು ನೀಡಿದ್ದಳು. ದೂರಿನ ಆಧಾರದಲ್ಲಿ ಎಫ್‌ಐಆರ್ ದಾಖಲಿಸಿದ ಪೊಲೀಸರು ಉಪನ್ಯಾಸಕರಾದ ನರೇಂದ್ರ, ಸಂದೀಪ್ ಮತ್ತು ಸ್ನೇಹಿತ ಅನೂಪ್‌ನನ್ನು ಬಂಧಿಸಿದ್ದಾರೆ. ಏನಿದು ಕೇಸ್?: ಮೊದಲು ವಿದ್ಯಾರ್ಥಿನಿಗೆ ನೋಟ್ಸ್ ನೀಡುವ ವಿಚಾರದಲ್ಲಿ ಭೌತಶಾಸ್ತ್ರ ಉಪನ್ಯಾಸಕ ನರೇಂದ್ರ ಪರಿಚಯವಾಗಿದ್ದ. ಹಂತ ಹಂತವಾಗಿ ಚಾಟ್ ಮಾಡಿ ನೋಟ್ಸ್ ನೀಡುವುದಾಗಿ ಮತ್ತು ಸಹಾಯ ಮಾಡುವುದಾಗಿ ಹೇಳಿದ್ದ. ವಿದ್ಯಾರ್ಥಿನಿ ಬೆಂಗಳೂರಿಗೆ ಬಂದ ನಂತರವೂ ಸಲುಗೆ ಬೆಳೆಸಿದ್ದ. ಇದೆ ನೆಪದಲ್ಲಿ ವಿದ್ಯಾರ್ಥಿನಿಯನ್ನು ಬೆಂಗಳೂರಿನ ಮಾರತ್‌ಹಳ್ಳಿಯಲ್ಲಿರುವ ಗೆಳೆಯನ ರೂಮ್‌ಗೆ ಕರೆದುಕೊಂಡು ಹೋಗಿ ಅತ್ಯಾಚಾರ ಎಸಗಿದ್ದ. ರೇಪ್ ಮಾಡಿದ ಬಳಿಕ ಈ ವಿಚಾರವನ್ನು ಯಾರಿಗೂ ತಿಳಿಸದಂತೆ ಬೆದರಿಕೆ ಹಾಕಿದ್ದ.

# ಉಗ್ರರ ನಂಟು: ಪೊಲೀಸ್ ಸಮವಸ್ತ್ರ ಖರೀದಿಸಿದ್ದ ಶಂಕಿತರು


• ಉದಯವಾಹಿನಿ, ಬೆಂಗಳೂರು

ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿರುವ ಲಷ್ಕರ್ ಎ ತಯಬಾ (ಎಲ್‌ಇಟಿ) ಸಂಘಟನೆಯ ಮುಖಂಡ ಟಿ.ನಾಸಿರ್‌ಗೆ ನೆರವು ನೀಡಿದ್ದ ಆರೋಪದಡಿ ಬಂಧನಕ್ಕೆ ಒಳಗಾಗಿರುವ ಮೂವರು ಶಂಕಿತರನ್ನು ರಾಷ್ಟ್ರೀಯ ತನಿಖಾ ದಳದ ವಿಶೇಷ ನ್ಯಾಯಾಲಯವು 14 ದಿನ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿ ಸೋಮವಾರ ಆದೇಶಿಸಿತು.ಕಾರಾಗೃಹದ ಮನೋವೈದ್ಯ ನಾಗರಾಜ್, ಶಂಕಿತ ಉಗ್ರ ಜುನೈದ್ ಅಹಮದ್ ತಾಯಿ ಅನೀಸ್ ಫಾತಿಮಾ, ಎಎಸ್‌ಐ ಚಾಂದ್ ಪಾಷಾ ಅವರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದು, ಬಿಗಿ ಭದ್ರತೆ ನಡುವೆ ಮೂವರನ್ನೂ ಕಾರಾಗೃಹಕ್ಕೆ ಕಳುಹಿಸಲಾಗಿದೆ. ಉಗ್ರರ ಜತೆಗೆ ನಂಟು ಹೊಂದಿದ್ದ ಆರೋಪದ ಮೇರೆಗೆ ಮೂವರನ್ನು ಜುಲೈ 8ರಂದು ಎನ್‌ಐಎ ಬಂಧಿಸಿ, ಹೆಚ್ಚಿನ ವಿಚಾರಣೆಗೆ ಆರು ದಿನ ಕಸ್ಟಡಿಗೆ ಪಡೆದುಕೊಂಡಿತ್ತು. ಕಸ್ಟಡಿ ಅವಧಿ ಮುಕ್ತಾಯವಾದ ಮೇರೆಗೆ ಎನ್‌ಐಎ ವಿಶೇಷ ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು.

**ಬಾಂಗ್ಲಾದೇಶಕ್ಕೆ ಕಳುಹಿಸಲು ಯತ್ನ:** 'ಮೂವರನ್ನು ಆರು ದಿನ ವಿಚಾರಣೆ ನಡೆಸಿದಾಗ ಕೆಲವೊಂದು ಸ್ಫೋಟಕ ಮಾಹಿತಿಗಳು ಬಹಿರಂಗವಾಗಿವೆ' ಎಂದು ಎನ್‌ಐಎ ಮೂಲಗಳು ತಿಳಿಸಿವೆ. 'ಮೂವರ ಮೊಬೈಲ್ ಜಪ್ತಿ ಮಾಡಿಕೊಂಡು ಕರೆಗಳ ವಿವರ ಪರಿಶೀಲನೆ ನಡೆಸಲಾಗಿದೆ. ಪರಪ್ಪನ ಅಗ್ರಹಾರ ಜೈಲಿನಲ್ಲಿರುವ ಉಗ್ರ ಟಿ.ನಾಸಿರ್‌ನನ್ನು ನ್ಯಾಯಾಲಯಕ್ಕೆ ಕರೆದೊಯ್ಯುವಾಗ ಗ್ರೆನೇಡ್ ಸ್ಫೋಟಿಸಿ ಪೊಲೀಸರ ಕೈಯಿಂದ ತಪ್ಪಿಸಿಕೊಂಡು ಹೋಗುವಂತೆ ಯೋಜನೆ ರೂಪಿಸಲಾಗಿತ್ತು' ಎಂದು ಎನ್‌ಐಎ ಮೂಲಗಳು ತಿಳಿಸಿವೆ.'ನಾಸಿರ್‌ಗೆ ಪೊಲೀಸ್ ಸಮವಸ್ತ್ರ ಧರಿಸಿ ಬಾಂಗ್ಲಾದೇಶಕ್ಕೆ ಕಳುಹಿಸಲು ಸಂಚು ರೂಪಿಸಲಾಗಿತ್ತು. ಅದಕ್ಕಾಗಿ ಆರೋಪಿಗಳು 10 ಜೊತೆ ಪೊಲೀಸ್ ಸಮವಸ್ತ್ರ ಖರೀದಿಸಿದ್ದರು. ಸಮವಸ್ತ್ರಗಳನ್ನು ಜಪ್ತಿ ಮಾಡಲಾಗಿದೆ' ಎಂದು ಮೂಲಗಳು ಹೇಳಿವೆ.

# ಭರತನಾಟ್ಯ ಪ್ರದರ್ಶನ ಕಾರ್ಯಕ್ರಮ

• ಉದಯವಾಹಿನಿ, ಬೆಂಗಳೂರು



ಜಯನಗರದ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮ ಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥರ ಆದೇಶದಂತೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್ ಕೆ ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಜುಲೈ 17, ಗುರುವಾರ ಸಂಜೆ 5-15ಕ್ಕೆ ವಿದುಷಿ ಶ್ರೀಮತಿ ಸಮನಾ ಆಚಾರ್ ಅವರ ನಿರ್ದೇಶನದಲ್ಲಿ ನಾಟ್ಯ ವೇದ ನೃತ್ಯ ಶಾಲೆಯ ವಿದ್ಯಾರ್ಥಿಗಳಿಂದ ಭರತನಾಟ್ಯ ಪ್ರದರ್ಶನ ಕಾರ್ಯಕ್ರಮ ಏರ್ಪಡಿಸಿದೆ ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದ್ದಾರೆ.

# 200 ಸಾರಿಗೆ ಬಸ್‌ಗಳಿಗೆ ಧ್ವನಿ ಸ್ಪಂದನ; ರಾಜ್ಯಾದ್ಯಂತ ಶೀಘ್ರ ವಿಸ್ತರಣೆ

• ಉದಯವಾಹಿನಿ, ಮೈಸೂರು



ದೃಷ್ಟಿ ವಿಶೇಷಚೇತನರ ಅನುಕೂಲಕ್ಕಾಗಿ ಮೈಸೂರು, ಬೆಂಗಳೂರಿನಲ್ಲಿ ಜಾರಿಗೆ ತಂದಿರುವ ಸಾರಿಗೆ ಬಸ್‌ಗಳಲ್ಲಿನ ಧ್ವನಿ ಸ್ಪಂದನ ಯೋಜನೆಯನ್ನು ರಾಜ್ಯಾದ್ಯಂತ ವಿಸ್ತರಿಸಲು ಸರಕಾರ ನಿರ್ಧರಿಸಿದೆ. ನಗರ ಬಸ್ ನಿಲ್ದಾಣದಲ್ಲಿ ನಡೆದ ಕಾರ್ಯಕ್ರಮದಲ್ಲಿ 200 ಬಸ್‌ಗಳಿಗೆ ಧ್ವನಿ ಸ್ಪಂದನ ಉಪಕರಣವುಳ್ಳ ಬಸ್‌ಗಳಿಗೆ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಚಾಲನೆ ನೀಡಿ ಮಾತನಾಡಿ ಈ ವಿಷಯ ತಿಳಿಸಿದರು.

ದೃಷ್ಟಿ ವಿಶೇಷಚೇತನರು ಈ ವಿಶೇಷ ಸಾಧನದ ಮೂಲಕ ಯಾರ ನೆರವೂ ಇಲ್ಲದೆ ಬಸ್ ಹತ್ತಬಹುದು. ಬೆಂಗಳೂರಿನ 125 ಬಸ್‌ಗಳಲ್ಲಿ ಈಗಾಗಲೇ ಈ ವಿಶೇಷ ಸಾಧನವನ್ನು ಅಳವಡಿಸಿ ಬಳಸುತ್ತಿದ್ದು, ಈಗ ಮೈಸೂರಿನ 200 ಬಸ್‌ಗಳಲ್ಲಿ ಅಳವಡಿಸಿ ಚಾಲನೆ ನೀಡಲಾಗಿದೆ. ಮುಂದಿನ ದಿನಗಳಲ್ಲಿ ರಾಜ್ಯದಲ್ಲಿನ 7 ಸಾವಿರ ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲೂ ಹಂತ ಹಂತವಾಗಿ ಈ ಸಾಧನ ಅಳವಡಿಸಲಾಗುವುದು, ಎಂದರು. ದೃಷ್ಟಿ ವಿಶೇಷಚೇತನರಿಗೆ ಡಿವೈಸ್‌ಗಳನ್ನು ವಿತರಿಸಿದರು.

**ದೃಷ್ಟಿ ವಿಶೇಷಚೇತನರಿಗೆ ನೆರವು:** ಮತ್ತೊಬ್ಬರ ಸಹಾಯವಿಲ್ಲದೆ ದೃಷ್ಟಿ ವಿಶೇಷಚೇತನರು ಈ ಧ್ವನಿ ಸ್ಪಂದನ ಸಾಧನವನ್ನು ಬಳಸಿಕೊಂಡು ಸುಲಭವಾಗಿ ಬಸ್ ಹತ್ತುವುದು, ಇಳಿಯುವುದನ್ನು ಮಾಡಬಹುದಾಗಿದೆ. ಕೆಎಸ್‌ಆರ್‌ಟಿಸಿಯು ಮೈಸೂರು ನಗರ ಮತ್ತು ತಾಲ್ಲೂಕು ವ್ಯಾಪ್ತಿಯಲ್ಲಿ ಸಂಚರಿಸುವ 200 ಬಸ್‌ಗಳಲ್ಲಿ ಧ್ವನಿ ಸ್ಪಂದನ ಸಾಧನವನ್ನು ಅಳವಡಿಸಿದೆ. ನಗರ ವ್ಯಾಪ್ತಿಯ ಬಸ್ ನಿಲ್ದಾಣದಿಂದ ಬನ್ನಿಮಂಟಪ, ಕೃಷ್ಣರಾಜಸಾಗರ, ನಾಯ್ಡು ನಗರ, ಮಾವಿನಹಳ್ಳಿ, ಗೊರೂರು ಅಲ್ಲದೆ ಇನ್ನಿತರ ಮಾರ್ಗಗಳಲ್ಲಿ ಈ ಉಪಕರಣವನ್ನು ಅಳವಡಿಸಲಾಗಿದ್ದು, ದೃಷ್ಟಿವಿಶೇಷಚೇತನರು ಇದರ ಸೌಲಭ್ಯವನ್ನು ಪಡೆಯಬಹುದು.

**ಉಪಕರಣದ ಪ್ರಯೋಜನ** ಧ್ವನಿ ಸ್ಪಂದನ ಉಪಕರಣವು ದೃಷ್ಟಿ ವಿಶೇಷಚೇತನರು ಬಸ್‌ನ ಮಾರ್ಗಸಂಖ್ಯೆಯನ್ನು ಗುರುತಿಸಲು ನೆರವಾಗುತ್ತದೆ. ಬಸ್ ಯೂನಿಟ್ ರಿಮೋಟ್ ಮತ್ತು ಸ್ಪೀಕರ್ ಹೊಂದಿರುತ್ತದೆ. ನಿಲ್ದಾಣದ ಹತ್ತಿರ ಬಸ್ ಬಂದಾಗ ದೃಷ್ಟಿ ವಿಶೇಷಚೇತನ ಪ್ರಯಾಣಿಕರು ಬಟನ್ ಒತ್ತಿದರೆ, ಸ್ಪೀಕರ್‌ನಿಂದ ಬಸ್ ಮಾರ್ಗ ಸಂಖ್ಯೆ ಘೋಷಣೆಯಾಗುತ್ತದೆ. ಬೇಕಾದ ಬಸ್ ಆಗಿದ್ದರೆ ಸೆಲೆಕ್ಟ್ ಮಾಡಿ ಬಟನ್ ಒತ್ತಿದಾಗ ಬಸ್‌ನಲ್ಲಿ ಅಳವಡಿಸಿರುವ ಯೂನಿಟ್‌ಗೆ ಸಿಗ್ನಲ್ ತೆರಳುತ್ತದೆ. ಚಾಲಕ ಮತ್ತು ನಿರ್ವಾಹಕರಿಗೆ ದೃಷ್ಟಿ ವಿಶೇಷಚೇತನ ಪ್ರಯಾಣಿಕ ಬಸ್ ಹತ್ತಲು ಬರುತ್ತಿರುವ ಮಾಹಿತಿ ದೊರೆಯುತ್ತದೆ. ಈ ವೇಳೆ ಬಸ್ ಹೆಚ್ಚಿನ ಕಾಲ ನಿಲ್ಲಿಸಿ ಕಾಯಲಾಗುತ್ತದೆ.

**ಶಾಸಕ ಫೋಟೋ ಇಲ್ಲದ್ದಕ್ಕೆ ಆಕ್ಷೇಪ:** ಕಾರ್ಯಕ್ರಮದ ಉದ್ಘಾಟನಾ ಸಮಾರಂಭಕ್ಕೆ ಅಳವಡಿಸಲಾಗಿದ್ದ ಫ್ಲೆಕ್ಸ್‌ನಲ್ಲಿ ಕ್ಷೇತ್ರದ ಶಾಸಕ ಕೆ. ಹರೀಶ್ ಗೌಡ, ಎನ್.ಆರ್.ಕ್ಷೇತ್ರದ ಶಾಸಕ ತನ್ವೀರ್ ಸೇಠ್ ಅವರ ಭಾವಚಿತ್ರ ಅಳವಡಿಸದಿರುವುದಕ್ಕೆ ಕಾಂಗ್ರೆಸ್ ಕಾರ್ಯಕರ್ತರು ಆಕ್ಷೇಪ ವ್ಯಕ್ತಪಡಿಸಿ ಕೆಎಸ್‌ಆರ್‌ಟಿಸಿ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಅಧಿಕಾರಿಗಳು ಎಚ್ಚೆತ್ತು ತಕ್ಷಣ ಫ್ಲೆಕ್ಸ್ ತೆರವುಗೊಳಿಸಿದರು. ಕರ್ನಾಟಕ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಕಾರದ ಉಪಾಧ್ಯಕ್ಷೆ ಡಾ.ಪುಷ್ಪ ಅಮರನಾಥ್ ಅವರು, ಅಕಾರಿಗಳ ಕಣ್ತಪ್ಪಿನಿಂದ ಲೋಪವಾಗಿದೆ ಎಂದು ನೆರೆದಿದ್ದ ಕಾರ್ಯಕರ್ತರ ಕ್ಷಮೆ ಕೋರಿದರಲ್ಲದೇ ತಮ್ಮ ಭಾವಚಿತ್ರ ಕೂಡ ಹಾಕಿಲ್ಲವೆಂದು ಬೇಸರ ವ್ಯಕ್ತಪಡಿಸಿದರು.

# ಲಿಂಕ್ ಕೆನಾಲ್ ನಿಲ್ಲದು: ಸಚಿವ



ಉದಯವಾಹಿನಿ ಚಿತ್ರ

• ಉದಯವಾಹಿನಿ, ತುಮಕೂರು

ಹೇಮಾವತಿ ಎಕ್ಸ್‌ಪ್ರೆಸ್ ಲಿಂಕ್ ಕೆನಾಲ್ ಕಾಮಗಾರಿ ನಿಲ್ಲಿಸುವುದಿಲ್ಲ. ಮತ್ತೆ ಮುಂದುವರಿಯಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಜಿ.ಪರಮೇಶ್ವರ ಪುನರುಚ್ಚರಿಸಿದರು. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಬೆಂಗಳೂರಿನಲ್ಲಿ ಜಿಲ್ಲೆಯ ಶಾಸಕರ ಜತೆಗೆ ಸಭೆ ನಡೆಸಲಾಗಿದೆ. ಡಿಸಿಎಂ ಡಿ.ಕೆ.ಶಿವಕುಮಾರ್ ಜತೆಗೆ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಲಾಗುವುದು. ಐಐಟಿ ತಜ್ಞರ ಅಭಿಪ್ರಾಯವನ್ನು ತೆಗೆದುಕೊಳ್ಳಲಾಗುವುದು. ನಂತರ ಕೆಲಸ ಆರಂಭಿಸಲಾಗುವುದು ಎಂದರು.

ವಿಶ್ವಾಸಕ್ಕೆ ತೆಗೆದುಕೊಂಡು ಕಾಮಗಾರಿ ಮುಂದುವರಿಸಲಾಗುವುದು. ಈಗಾಗಲೇ ಸರ್ಕಾರ ಹಣ ಬಿಡುಗಡೆ ಮಾಡಿದ್ದು, ಅರ್ಧದಷ್ಟು ಕೆಲಸ ಮುಗಿದಿದೆ. ಇಂತಹ ಯೋಜನೆ ಜಾರಿ ಮಾಡುವ ಸಮಯದಲ್ಲಿ ಸಣ್ಣಪುಟ್ಟ ಸಮಸ್ಯೆಗಳು ಬರುತ್ತವೆ. ಅದನ್ನು ನಿವಾರಿಸಿಕೊಂಡು ಮತ್ತೆ ಕೆಲಸ ಆರಂಭಿಸಲಾಗುವುದು ಎಂದು ಹೇಳಿದರು. ಕಾಂಗ್ರೆಸ್ ಶಾಸಕರು ಹೈಜಾಕ್ ಆಗಿದ್ದಾರೆ ಎಂದು ಶಾಸಕ ವಿಜಯಾನಂದ ಕಾಶಪ್ಪನವರ್ ಹೇಳಿಕೆ ಹಾಗೂ ಆಪರೇಷನ್ ಕಮಲದ ಬಗ್ಗೆ ಪ್ರತಿಕ್ರಿಯಿಸಿ, ಈ ಬಗ್ಗೆ ನನಗೇನೂ ಗೊತ್ತಿಲ್ಲ ಎಂದರು.

# ಕನ್ನಂಬಾಡಿ ಕಟ್ಟೆ ಉಳಿಸಿ ವಿಚಾರ ಸಂಕಿರಣ

## ಅಮ್ಯೂಸ್‌ಮೆಂಟ್ ಪಾರ್ಕ್ ನಿರ್ಮಾಣದ ಅಗತ್ಯವೇ? ರೈತರು ಇದರ ಬಗ್ಗೆ ಹೇಳೋದೇನು?

• ಉದಯವಾಹಿನಿ, ಮಂಡ್ಯ



ನದಿ ಮಾಲಿನ್ಯ , ಅರಣ್ಯ ನಾಶ, ಪ್ಲಾಸ್ಟಿಕ್ ಬಿಕ್ಕಟ್ಟು, ಅಂತರ್ಜಲ ಕುಸಿತ ಇವುಗಳಿಗೆ ಪರಿಹಾರ ಕಂಡು ಹಿಡಿಯಬೇಕಾದ ಸರಕಾರ ಅದನ್ನೆಲ್ಲ ಬಿಟ್ಟು ಯಾರ ಹಿತಕ್ಕಾಗಿ ಅಮ್ಯೂಸ್‌ಮೆಂಟ್ ಪಾರ್ಕ್ ಸ್ಥಾಪನೆಗೆ ಮುಂದಾಗಿದೆ ಎಂದು ನಾವು ಸಂಘಟನೆಯ ರಾಜ್ಯಾಧ್ಯಕ್ಷ ಎ.ಟಿ.ರಾಮಸ್ವಾಮಿ ಪ್ರಶ್ನಿಸಿದರು. ನಗರದ ಗಾಂಧಿಭವನದಲ್ಲಿ ಜಿಲ್ಲಾ ರೈತ ಹಿತರಕ್ಷಣಾ ಸಮಿತಿ ಹಾಗೂ ಪ್ರಗತಿಪರ ಸಂಘಟನೆಗಳ ಸಹಯೋಗದಲ್ಲಿ ನಡೆದ ಕನ್ನಂಬಾಡಿ ಕಟ್ಟೆ ಉಳಿಸಿ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದ ಅವರು, 2662 ಕೋಟಿ ರೂ. ವೆಚ್ಚದಲ್ಲಿ ಅಮ್ಯೂಸ್‌ಮೆಂಟ್ ಪಾರ್ಕ್ ನಿರ್ಮಾಣಕ್ಕೆ ಯೋಜನೆಗೆ ರೂಪಿಸಲಾಗಿದೆ.

ಇದರ ಅಗತ್ಯವಿದೆಯೇ?, ಎಂದು ಮರು ಪ್ರಶ್ನಿಸಿದರು. ಈ ಯೋಜನೆ ಅಣೆಕಟ್ಟೆಗೆ ಅಪಾಯಕಾರಿಯಲ್ಲವೇ? ಅಣೆಕಟ್ಟೆಗೆ ಅಪಾಯವಾದರೆ ಅದರಿಂದಾಗುವ ದುರಂತದ ಅರಿವು ಆಳುವವರಿಗೆ ಇದೆಯೇ? ಅಮ್ಯೂಸ್‌ಮೆಂಟ್ ಪಾರ್ಕ್, ಕಾವೇರಿ ಆರತಿ ಈ ಎರಡು ಯೋಜನೆಗಳು ಕಾವೇರಿಯನ್ನು ಕಲುಷಿತಗೊಳಿಸುವುದಲ್ಲದೆ ಇಲ್ಲಿನ ಜನರ ಸಹಜ ಬದುಕನ್ನು ಕಲುಷಿತಗೊಳಿಸುತ್ತದೆ. ಜನರಿಗೆ ಅನ್ನ ಸಿಗಲೆಂದು ಅರಮನೆಯ ಚಿನ್ನಾಭರಣ ನೀಡಿದ ಮಹಾರಾಣಿ ಅವರೆಲ್ಲಿ? ಇಂದು ಅದೇ ಅಣೆಕಟ್ಟೆಗೆ ಅಪಾಯ ತರುತ್ತಿರುವ ಇಂದಿನ ಆಡಳಿತಗಾರರೆಲ್ಲಿ? ಎಂದು ವಿಷಾದಿಸಿದರು. ಅಮ್ಯೂಸ್‌ಮೆಂಟ್ ಪಾರ್ಕ್ ನಿರ್ಮಾಣದಿಂದ ಸ್ಥಳೀಯವಾಗಿ ಉದ್ಯೋಗ ಸಿಗುತ್ತದೆ ಎಂಬುದು ಕೇವಲ ಭ್ರಮೆ. ಕೆಲವರು ಅಧಿಕಾರದ ಹಮ್ಮಿನಿಂದ ಮಾಡೇ ಮಾಡುತ್ತೇವೆಂದು ಗರ್ವದಿಂದ ಮಾತನಾಡುತ್ತಿದ್ದಾರೆ. ಇದನ್ನು ಈ ಮಣ್ಣಿನ ರೈತರು ಸಹಿಸುವುದಿಲ್ಲ, ಎಂದು ಎಚ್ಚರಿಸಿದರು. ಪರಿಸರ ತಜ್ಞ ಡಾ.ಎ.ಎನ್. ಯಲ್ಲಪ್ಪ ರೆಡ್ಡಿ ಅಧ್ಯಕ್ಷತೆ ವಹಿಸಿದ್ದರು. ವಿಚಾರ ಸಂಕಿರಣದಲ್ಲಿ ಮಾಜಿ ಶಾಸಕ ಜಿ.ಬಿ.ಶಿವಕುಮಾರ್, ಜಿಲ್ಲಾ ರೈತ ಹಿತರಕ್ಷಣಾ ಸಮಿತಿ ಕಾರ್ಯದರ್ಶಿ ಸುನಂದಾ ಜಯರಾಮ್, ನಿವೃತ್ತ ಪ್ರಾಧ್ಯಾಪಕ ಡಾ.ಎನ್.ಎಸ್.ರಂಗರಾಜು, ನಿವೃತ್ತ ಹಿರಿಯ ಭೂ ವಿಜ್ಞಾನಿ ಪ್ರೊ.ಎಚ್.ಬಿ.ಬಸವರಾಜಪ್ಪ ಭಾಗವಹಿಸಿದ್ದರು.



ಉದಯವಾಹಿನಿ ಚಿತ್ರ

**ಖಾಸಗಿ ಲಾಭಿಗೆ ಮಣೆ** ಇತಿಹಾಸ ಅರಿಯದವರು, ಇತಿಹಾಸ ಓದದವರು ಮೋಜು ಮಸ್ತಿ ಮಾಡಲು ಅಮ್ಯೂಸ್‌ಮೆಂಟ್ ಪಾರ್ಕ್ ಮಾಡಲು ಮುಂದಾಗುತ್ತಾರೆ. ಯಾರು ಕೇಳದಿದ್ದರೂ ಆರತಿ ಮಾಡಬೇಕೆಂದು ನಿಂತಿದ್ದಾರೆ. ಖಾಸಗಿ ಲಾಬಿಗೆ ಮಣಿದು ಅವರಿಗೆ ಅನುಕೂಲ ಮಾಡಿಕೊಡಲು ಬಾರ್ ಅಂಡ್ ರೆಸ್ಟೋರೆಂಟ್‌ನಂತಹ ಮೋಜು ಮಸ್ತಿಗೆ ಅವಕಾಶ ಮಾಡಿಕೊಡುವಂತಹ ಯೋಜನೆಗೆ ಕೈ ಹಾಕಿದ್ದಾರೆ. ಇದು ಜನೋಪಯೋಗಿ ಯೋಜನೆಯೇ? ಎಂದು ಹೈಕೋರ್ಟ್ ಹಿರಿಯ ನ್ಯಾಯವಾದಿ ಎಂ.ಶಿವ ಪ್ರಕಾಶ್ ಪ್ರಶ್ನಿಸಿದ್ದಾರೆ.

- ರಾಜ್ಯಾಧ್ಯಕ್ಷ ಎ.ಟಿ. ರಾಮಸ್ವಾಮಿ, ಅಮ್ಯೂಸ್‌ಮೆಂಟ್ ಪಾರ್ಕ್ ಸ್ಥಾಪನೆಗೆ ಪ್ರಶ್ನೆ ಕೇಳಿದರು, ಇದರಿಂದ ನದಿ ಮಾಲಿನ್ಯ ಮತ್ತು ಅರಣ್ಯ ನಾಶಕ್ಕೆ ಪರಿಹಾರ ದೊರಕುತ್ತದೆಯೇ ಎಂಬುದನ್ನು ಕೇಳಿದರು.
- ಅಮ್ಯೂಸ್‌ಮೆಂಟ್ ಪಾರ್ಕ್ ನಿರ್ಮಾಣದಿಂದ ಸ್ಥಳೀಯ ಉದ್ಯೋಗ ಸಿಗುವುದು ಕೇವಲ ಭ್ರಮೆ ಎಂದೆಲ್ಲ, ಈ ಯೋಜನೆ ರೈತರು ಸಹಿಸುವುದಿಲ್ಲ ಎಂದು ಎಚ್ಚರಿಸಿದರು.
- ಹೈಕೋರ್ಟ್ ಹಿರಿಯ ನ್ಯಾಯವಾದಿ ಎಂ. ಶಿವಪ್ರಕಾಶ್, ಖಾಸಗಿ ಲಾಭಕ್ಕಾಗಿ ಮೋಜು ಮಸ್ತಿಗೆ ಅವಕಾಶ ನೀಡುವ ಈ ಯೋಜನೆ ಜನೋಪಯೋಗಿ ಯೋಜನೆಯೇ ಎಂದು ಪ್ರಶ್ನಿಸಿದರು.

# ಆಸ್ಪತ್ರೆಯಲ್ಲಿ ವಿದ್ಯುತ್ ಸ್ಥಗಿತ: ರೋಗಿಗಳ ಪರದಾಟ

• ಉದಯವಾಹಿನಿ, ಕುಣಿಗಲ್



ಉದಯವಾಹಿನಿ ಚಿತ್ರ

ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ವಿದ್ಯುತ್ ಪರಿವರ್ತಕದ ದೋಷದಿಂದ ವಿದ್ಯುತ್ ಸರಬರಾಜು ಸ್ಥಗಿತಗೊಂಡು ರೋಗಿಗಳು, ವೈದ್ಯರು, ಸಿಬ್ಬಂದಿ ಪರದಾಡುವಂತಾಯಿತು. ರಾತ್ರಿಯೇ ವಿದ್ಯುತ್ ಪರಿವರ್ತಕ ದೋಷದಿಂದ ವಿದ್ಯುತ್ ಸರಬರಾಜು ಸ್ಥಗಿತಗೊಂಡಿದ್ದು, ಜನರೇಟರ್ ಮೂಲಕ ವಿದ್ಯುತ್ ಸರಬರಾಜಿಗೆ ವ್ಯವಸ್ಥೆ ಮಾಡಲಾಗಿತ್ತು. ಬೆಳಗ್ಗೆ ಆಸ್ಪತ್ರೆಯ ಮೊದಲ ಮಹಡಿಯಲ್ಲಿರುವ ಉಚಿತ ಡಯಾಲಿಸೀಸ್ ಘಟಕದಲ್ಲಿ ವಿದ್ಯುತ್ ಸಂಪರ್ಕವಿಲ್ಲದೆ ಡಯಾಲಿಸೀಸ್ ಬೆಳಗ್ಗೆ ಬಂದವರು ಪರದಾಡುವಂತಾಯಿತು.

ತುರುವೇಕೆರೆ ತಾಲ್ಲೂಕು ಗಡಿ ಭಾಗದವರೂ ಸೇರಿದಂತೆ ಗ್ರಾಮಾಂತರ ಪ್ರದೇಶದಿಂದ ಬಂದವರು ಸಕಾಲದಲ್ಲಿ ಡಯಾಲಿಸೀಸ್ ಮಾಡಿಸಿಕೊಳ್ಳಲಾಗದೆ ಉಸಿರಾಟದ ಸಮಸ್ಯೆಯಿಂದ ಬಳಲಿದರೆ, ಕೆಲವರು ಜಿಲ್ಲಾ ಕೇಂದ್ರಕ್ಕೆ ತೆರಳಿದರು. ರೋಗಿಗಳ ಕಡೆಯವರು ಅಸಮಾಧಾನ ವ್ಯಕ್ತಪಡಿಸಿದರು.


**ವಿದ್ಯುತ್ ಸರಬರಾಜಿಗೆ ವ್ಯವಸ್ಥೆ**

ಬಿಜೆಪಿ ಮುಖಂಡ ಕೆ.ಎಸ್ ಬಲರಾಂ, ಆಸ್ಪತ್ರೆಯಲ್ಲಿ ವಿದ್ಯುತ್ ಸಮಸ್ಯೆಯಾಗಿದ್ದರೂ ಅಧಿಕಾರಿಗಳು ಗಮನ ಹರಿಸದಿರುವ ಬಗ್ಗೆ ತರಾಟೆಗೆ ತೆಗೆದುಕೊಂಡರು. ಜನರೇಟರ್ ನಿರಂತರವಾಗಿ ಬಳಕೆಯಾದ ಕಾರಣ ಮತ್ತೆ ಮಧ್ಯಾಹ್ನ ಜನರೇಟರ್ ಕೆಟ್ಟು ಸಂಪೂರ್ಣ ವಿದ್ಯುತ್ ವ್ಯವಸ್ಥೆಯೇ ಸ್ಥಗಿತಗೊಂಡಿತು. ನೂರಾರು ರೋಗಿಗಳು, ವೈದ್ಯರು, ಸಿಬ್ಬಂದಿ ಪರದಾಡಿದರು. ರೋಗಿಗಳ ಸಂಬಂಧಿಗಳು ವೈದ್ಯರು ಮತ್ತು ಸಿಬ್ಬಂದಿ ವಿರುದ್ಧ ತಿರುಗಿ ಬಿದ್ದು ವಾಗ್ವಾದ ನಡೆಯಿತು. ಆಡಳಿತ ವೈದ್ಯಾಧಿಕಾರಿ ಗಣೇಶಬಾಬು ಬೆಸ್ಕಾಂ ಅಧಿಕಾರಿಗಳ ಮೊರೆಹೋದರು. ಸಹಾಯಕ ಎಂಜಿನಿಯರ್ ಸುಧನ್ವಾ ತಂಡ ವಿದ್ಯುತ್ ಪರಿವರ್ತಕ ವ್ಯವಸ್ಥೆ ಮಾಡಿ, ವಿದ್ಯುತ್ ಸರಬರಾಜಿಗೆ ವ್ಯವಸ್ಥೆ ಮಾಡಿದರು.

> ಜನರೇಟರ್ ಬಳಕೆ ಆಸ್ಪತ್ರೆ ಆಡಳಿತ ವೈದ್ಯಾಧಿಕಾರಿ ಡಾ.ಗಣೇಶ್ ಬಾಬು ಆಸ್ಪತ್ರೆಯ ಆವರಣದಲ್ಲಿರುವ ವಿದ್ಯುತ್ ಪರಿವರ್ತಕ ಸುಟ್ಟುಹೋಗಿರುವುದರಿಂದ ಸಮಸ್ಯೆಯಾಗಿದೆ. ಜನರೇಟರ್ ಬಳಸಿ ವಿದ್ಯುತ್ ಸರಬರಾಜಿಗೆ ವ್ಯವಸ್ಥೆ ಮಾಡಲಾಗಿದ್ದರೂ ಮೊದಲ ಮಹಡಿಯಲ್ಲಿರುವ ಡಯಾಲಿಸೀಸ್ ಕೇಂದ್ರಕ್ಕೆ ವಿದ್ಯುತ್ ಸರಬರಾಜಿಗೆ ವ್ಯವಸ್ಥೆಯಾಗದ ಕಾರಣ ಅವ್ಯವಸ್ಥೆಯಾಗಿದೆ. ವಿದ್ಯುತ್ ಸಂಪರ್ಕದ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದರು.

# ಶೆಟ್ಟಿಹಳ್ಳಿ ಕೆರೆ ಸ್ವಚ್ಛತೆಗೆ ಚಾಲನೆ

• ಉದಯವಾಹಿನಿ, ಚನ್ನಪಟ್ಟಣ



ಉದಯವಾಹಿನಿ ಚಿತ್ರ

ನಗರದ ಶೆಟ್ಟಿಹಳ್ಳಿ ಕೆರೆಯ ಹೂಳು ತೆಗೆಯುವ ಅಭಿವೃದ್ಧಿ ಕಾಮಗಾರಿಗೆ ಸೋಮವಾರ ಜಿಲ್ಲಾಧಿಕಾರಿ ಯಶವಂತ್ ವಿ.ಗುರುಕರ್ ಚಾಲನೆ ನೀಡಿದರು. ಒತ್ತುವರಿ, ಕಲುಷಿತದಿಂದ ನಲುಗಿರುವ ಶೆಟ್ಟಿಹಳ್ಳಿ ಕೆರೆಗೆ ಮರುಜೀವ ನೀಡುವ ಉದ್ದೇಶದಿಂದ ಸುಮಾರು 1.30 ಕೋಟಿ ಅಂದಾಜು ವೆಚ್ಚದಲ್ಲಿ ಕೈಗೊಂಡಿರುವ ಕಾಮಗಾರಿಗೆ ಶಾಸಕ ಸಿ.ಪಿ.ಯೋಗೇಶ್ವರ್ ಸಮ್ಮುಖದಲ್ಲಿ ಚಾಲನೆ ನೀಡಲಾಯಿತು. ರಾಜ್ಯ ಉಪ ಲೋಕಾಯುಕ್ತ ಫಣೀಂದ್ರ ಅವರು ಈಚೆಗೆ ತಾಲ್ಲೂಕಿನ ಕೆರೆಗಳ ಒತ್ತುವರಿ ವೀಕ್ಷಣೆಗೆ ಆಗಮಿಸಿದ್ದ ವೇಳೆ ಶೆಟ್ಟಿಹಳ್ಳಿ ಕೆರೆಯನ್ನು ವೀಕ್ಷಿಸಿ ಕೆರೆಯಲ್ಲಿ ತುಂಬಿರುವ ಜೊಂಡು, ಹೂಳನ್ನು ನೋಡಿ ಅಧಿಕಾರಿಗೆ ತರಾಟೆಗೆ ತೆಗೆದುಕೊಂಡು, ಎರಡು ತಿಂಗಳೊಳಗೆ ಕೆರೆ ಸ್ವಚ್ಛತೆಗೆ ಗಡುವು ನೀಡಿದ್ದರು.

ಅದರಂತೆ ಎಚ್ಚೆತ್ತ ಜಿಲ್ಲಾಡಳಿತ, ತಾಲ್ಲೂಕು ಆಡಳಿತ, ಸ್ಥಳೀಯ ನಗರಸಭೆ ಈಗ ಕೆರೆ ಸ್ವಚ್ಛತೆಗೆ ಮುಂದಾಗಿವೆ. ಬೆಂಗಳೂರು ಸೇರಿದಂತೆ ರಾಜ್ಯದೆಲ್ಲೆಡೆ 117 ಕೆರೆಗಳನ್ನು ಸ್ವಚ್ಛಮಾಡಿ ಲೇಕ್‌ಮ್ಯಾನ್ ಎಂದು ಪ್ರಸಿದ್ಧಿ ಗಳಿಸಿರುವ ಡಾ.ಆನಂದ್ ಮಲ್ಲಿಗವಾಡ್ ಅವರ ನೇತೃತ್ವದಲ್ಲಿ ಆರಂಭವಾಗಿರುವ ಶೆಟ್ಟಿಹಳ್ಳಿ ಕೆರೆ ಸ್ವಚ್ಛತೆ ಮುಂದಿನ ಒಂದೂವರೆ ತಿಂಗಳಲ್ಲಿ ಪೂರ್ಣವಾಗಲಿದೆ. ಕೆರೆ ಸ್ವಚ್ಛತೆಗೆ ಸಿಎಸ್‌ಆರ್ ಅನುದಾನ ಹಾಗೂ ಸ್ಥಳೀಯ ನಗರಸಭೆ ಅನುದಾನವನ್ನು ಬಳಸಿಕೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ತಿಳಿಸಿದರು.

ಶಾಸಕ ಸಿ.ಪಿ.ಯೋಗೇಶ್ವರ್ ಮಾತನಾಡಿ, ಶೆಟ್ಟಿಹಳ್ಳಿ ಕೆರೆ ಸ್ವಚ್ಛತೆಗೆ ಚಾಲನೆ ನೀಡಲಾಗಿದೆ. ಆದರೆ, ಈಗ ಇರುವ ಅನುದಾನ ಬಳಸಿಕೊಂಡು ಕೆರೆ ಸ್ವಚ್ಛಗೊಳಿಸಲಾಗುವುದು. ಮುಂದಿನ ದಿನಗಳಲ್ಲಿ ಅನುದಾನ ಸಂಗ್ರಹಿಸಿ ಉಳಿದ ಕಾಮಗಾರಿ ಪೂರೈಸಲಾಗುವುದು ಎಂದು ಭರವಸೆ ನೀಡಿದರು.

# ನಿಖಿಲ್ ಹೇಳಿಕೆಗೆ ಬಿಜೆಪಿ ಆಕ್ಷೇಪ

• ಉದಯವಾಹಿನಿ, ಶಿಡ್ಲಘಟ್ಟ



ಉದಯವಾಹಿನಿ ಚಿತ್ರ

ದೇಶಕ್ಕೆ ಮೋದಿ, ರಾಜ್ಯಕ್ಕೆ ಕುಮಾರಸ್ವಾಮಿ, ಶಿಡ್ಲಘಟ್ಟಕ್ಕೆ ಮತ್ತೆ ರವಿಕುಮಾರ್ ಎಂಬ ಜೆಡಿಎಸ್ ಯುವ ಘಟಕ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹೇಳಿಕೆಗೆ ಮಿತ್ರ ಪಕ್ಷ ಬಿಜೆಪಿ ಆಕ್ಷೇಪ ಎತ್ತಿದೆ. ಇದು ಅವರ ಪಕ್ಷದ ಅಭಿಪ್ರಾಯವೇ ಹೊರತು ಬಿಜೆಪಿ, ಜೆಡಿಎಸ್ ಮೈತ್ರಿ ನಾಯಕರ ಒಪ್ಪಿತ ತೀರ್ಮಾನವಲ್ಲ. ವಿಧಾನಸಭೆ ಚುನಾವಣೆ ಬಂದಾಗ ಮುಖ್ಯಮಂತ್ರಿ ಅಭ್ಯರ್ಥಿ ಯಾರೆಂದು ಬಿಜೆಪಿ, ಜೆಡಿಎಸ್ ಮೈತ್ರಿ ನಾಯಕರು ನಿರ್ಧರಿಸುತ್ತಾರೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಸೀಕಲ್ ರಾಮಚಂದ್ರಗೌಡ ಸುದ್ದಿಗೋಷ್ಠಿಯಲ್ಲಿ ಸ್ಪಷ್ಟಪಡಿಸಿದರು. ಪಕ್ಷ ಸಂಘಟನೆಗಾಗಿ ಜೆಡಿಎಸ್‌ನವರು ಕುಮಾರಸ್ವಾಮಿ, ಯಾರನ್ನೇ ಆಗಲಿ ಸಿಎಂ ಅಭ್ಯರ್ಥಿ ಎಂದು ಬಿಂಬಿಸಿಕೊಂಡರೆ ನಮ್ಮದೇನು ತಕರಾರು ಇಲ್ಲ ಎಂದರು. ಮಾಜಿ ಶಾಸಕ ಎಂ.ರಾಜಣ್ಣ ಅವರಿಗೂ ನನಗೂ ಯಾವುದೆ ಬಿನ್ನಾಭಿಪ್ರಾಯವಿಲ್ಲ. ಮುನಿಸೂ ಇಲ್ಲ. ಸಹಜವಾಗಿ ಅಭಿಪ್ರಾಯ ಭೇದಗಳಿರುತ್ತವೆ. ಕೆಲವೊಂದು ಪದಾಧಿಕಾರಿಗಳ ನೇಮಕ ಇನ್ನಿತರ ವಿಷಯಗಳ ವಿಚಾರವಾಗಿ ಅವರ ಬೆಂಬಲಿಗರು, ನಮ್ಮ ಬೆಂಬಲಿಗರು ಮುನಿಸಿಕೊಳ್ಳುವುದುಂಟು. ನಮ್ಮಿಬ್ಬರಿಗೂ ಪಕ್ಷ ಸಂಘಟನೆ ಮುಖ್ಯ. ಈ ನಿಟ್ಟಿನಲ್ಲಿ ಇಬ್ಬರೂ ಜತೆಯಾಗಿ ನಡೆಯಲಿದ್ದೇವೆ ಎಂದು ಹೇಳಿದರು.

> ಕ್ಷೇತ್ರದ ಶಾಸಕರು ರೈತರ ಹಿತದೃಷ್ಟಿಯಿಂದ ಕೆಐಎಡಿಬಿಯಿಂದ ಜಮೀನು ಸ್ವಾಧೀನ ವಿಚಾರವಾಗಿ ಯಾವುದಾದರೂ ಒಂದು ಸ್ಪಷ್ಟ ತೀರ್ಮಾನಕ್ಕೆ ಬರಬೇಕಾಗುತ್ತದೆ. ನಿರ್ಲಿಪ್ತತೆ ಬಿಟ್ಟು ರೈತ ಪರ ನಿಲ್ಲಬೇಕು
> –ಸೀಕಲ್ ರಾಮಚಂದ್ರಗೌಡ
> ಜಿಲ್ಲಾಧ್ಯಕ್ಷ ಬಿಜೆಪಿ

# ಅಧಿಕಾರಿಗಳ ವಿರುದ್ಧ ಶಾಸಕ ಸಮೃದ್ಧಿ ಮಂಜುನಾಥ್ ಗರಂ

• ಉದಯವಾಹಿನಿ, ಮುಳಬಾಗಿಲು




ಉದಯವಾಹಿನಿ ಚಿತ್ರ

ನಗರದ ಕೋಮುಲ್ ಶಿಬಿರ ಕಚೇರಿಯಲ್ಲಿ ಸಮೃದ್ಧಿ ಮಂಜುನಾಥ್ ನೇತೃತ್ವದಲ್ಲಿ ತಾಲ್ಲೂಕು ಪ್ರಗತಿ ಪರಿಶೀಲನಾ ಸಭೆ ನಡೆಯಿತು. ಶಾಸಕ ಸಮೃದ್ಧಿ ಮಂಜುನಾಥ್ ಮಾತನಾಡಿ ಕೆಲವು ಅಧಿಕಾರಿಗಳು ಭ್ರಷ್ಟಾಚಾರದಲ್ಲಿ ತೊಡಗಿದ್ದು, ನನಗೆ ಪರ್ಸೆಂಟೇಜ್ ಕೊಡಬೇಕು ಎಂಬುದಾಗಿ ಹೇಳಿಕೊಂಡು ತಿರುಗುತ್ತಿದ್ದಾರೆ. ಈ ಮೂಲಕ ನನ್ನ ವಿರುದ್ಧ ಅಪಪ್ರಚಾರ ಮಾಡುತ್ತಿದ್ದಾರೆ.

ಇದು ಸರಿಯಲ್ಲ, ನಾನು ಯಾರ ಬಳಿಯಾದರೂ, ಪರ್ಸೆಂಟೇಜ್ ಪಡೆದಿದ್ದರೆ, ನನ್ನ ವಿರುದ್ಧ ಪತ್ರಿಕಾಗೋಷ್ಠಿ ನಡೆಸಿ, ಜನರ ಎದುರು ಸತ್ಯಾಸತ್ಯತೆ ಬಿಚ್ಚಿಡಲಿ ಎಂದು ಸವಾಲು ಹಾಕಿದರು. ತಾಲ್ಲೂಕು ಮಟ್ಟದ ಅಧಿಕಾರಿಗಳು ಬಿಟ್ಟರೆ ಉಳಿದಂತೆ ಬಹುತೇಕ ಇಲಾಖೆಗಳ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡು, ಅವರ ಕಾರ್ಯವೈಖರಿ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿ ತಾಲ್ಲೂಕು ಆಡಳಿತಕ್ಕೆ ಕೆಲವು ಅಧಿಕಾರಿಗಳು ಕಪ್ಪುಚುಕ್ಕೆ ತರುತ್ತಿದ್ದಾರೆ ಎಂದು ಆರೋಪಿಸಿದರು. ತಾಲ್ಲೂಕಿನ ನಾಲ್ಕು ಹೋಬಳಿಗಳ ರಾಜಸ್ವ ನಿರೀಕ್ಷಕರು ಸುಮಾರು 7 ವರ್ಷಗಳಿಂದ ಒಂದೇ ಕಡೆ ಇದ್ದಾರೆ. ಅಂಥವರು ಕೂಡಲೇ ತಾವೇ ವರ್ಗಾವಣೆ ಮಾಡಿಸಿಕೊಂಡು ಹೋಗಬೇಕು. ಇಲ್ಲದಿದ್ದರೆ, ಅಂಥವರ ವಿರುದ್ಧ ನಾನು ಸದನದಲ್ಲಿ ಧ್ವನಿ ಎತ್ತುತ್ತೇನೆ ಎಂದು ಹೇಳಿದರು. ಶಾಲಾ ಶಿಕ್ಷಕರು 4, 4.15ಕ್ಕೆ ಶಾಲೆಗಳಿಗೆ ಬೀಗ ಹಾಕಿಕೊಂಡು ಬಾಲಾಜಿ ಭವನದ ಸಭೆಗಳಲ್ಲಿ ಕುಳಿತುಕೊಳ್ಳುತ್ತಿದ್ದಾರೆ ಎಂಬ ದೂರುಗಳಿವೆ.

ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳು ಬಾಲಾಜಿ ಭವನದಲ್ಲಿ ಟೀ ಕುಡಿದುಕೊಂಡು ಪಾರ್ಟಿ ಮಾಡಿಕೊಳ್ಳುತ್ತಿದ್ದಾರೆ ಎಂದು ತರಾಟೆಗೆ ತೆಗೆದುಕೊಂಡರು. ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕರು ತಮಗೆ ಹಿಂಸೆ ನೀಡುತ್ತಿದ್ದಾರೆ ಎಂದು 10 ಚಾಲಕರು ದೂರು ಸಲ್ಲಿಸಿದ್ದಾರೆ. ಇಂಥ ನಡವಳಿಕೆ ಸರಿಪಡಿಸಿಕೊಳ್ಳದಿದ್ದಲ್ಲಿ, ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಸಭೆಯಲ್ಲಿ ಎಲ್ಲಾ ಇಲಾಖೆಗಳ ಅನುದಾನ, ಕ್ರಿಯಾ ಯೋಜನೆ, ಅನುದಾನಗಳ ಹಂಚಿಕೆ, ಕಾಮಗಾರಿ ಸೇರಿದಂತೆ ಇನ್ನಿತರ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

> ತೋಟಗಾರಿಕೆ ಇಲಾಖೆ ಅಧಿಕಾರಿಗಳು ರೈತರಿಗೆ ನಿಗದಿತ ಸಮಯಕ್ಕೆ ರೈತರಿಗೆ ಬೆಂಬಲ ಬೆಲೆ ನೀಡುತ್ತಿಲ್ಲ. ತಾಲ್ಲೂಕು ಆರೋಗ್ಯ ಇಲಾಖೆ ಅಧಿಕಾರಿಗಳು 27 ನಕಲಿ ಕ್ಲಿನಿಕ್‌ಗಳನ್ನು ಮುಚ್ಚಿದ್ದಾರೆ. ಇನ್ನೂ 17 ನಕಲಿ ಕ್ಲಿನಿಕ್‌ಗಳು ತಾಲ್ಲೂಕಿನಲ್ಲಿವೆ. ಅಬಕಾರಿ ಅಧಿಕಾರಿಗಳು ಸರಿಯಾಗಿ ಕರ್ತವ್ಯ ನಿರ್ವಹಿಸುತ್ತಿಲ್ಲ. ವಸತಿ ನಿಲಯಗಳಿಗೆ ಅಧಿಕಾರಿಗಳು ಒಂದು ತಿಂಗಳಿನಿಂದ ಅಕ್ಕಿ ಸರಬರಾಜು ಮಾಡುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

# ಕೃಷಿ ಭೂಮಿ ಪರಿವರ್ತನೆ ಬೇಡ: ಸಿ.ಮಹೇಶ್ ನಾಚಯ್ಯ

## ಮುತ್ತಾರ್ಮುಡಿ ಗದ್ದೆಯಲ್ಲಿ ಬೇಲ್‌ರ ಕೋಯಿಮೆ ಕಾರ್ಯಕ್ರಮದಲ್ಲಿ ಅಜ್ಜಿನಿಕಂಡ ಸಿ.ಮಹೇಶ್ ನಾಚಯ್ಯ ಪ್ರತಿಪಾದನೆ

• ಉದಯವಾಹಿನಿ, ಮಡಿಕೇರಿ

ಕೃಷಿ ಭೂಮಿಯನ್ನು ಉಳಿಸಿಕೊಳ್ಳಲೇಬೇಕು. ಯಾವುದೇ ಕಾರಣಕ್ಕೂ ಕೃಷಿ ಭೂಮಿಯನ್ನು ಪರಿವರ್ತಿಸಬಾರದು ಎಂದು ಕರ್ನಾಟಕ ಕೊಡವ ಸಾಹಿತ್ಯ ಅಕಾಡೆಮಿಯ ಅಧ್ಯಕ್ಷ ಅಜ್ಜಿನಿಕಂಡ ಸಿ.ಮಹೇಶ್ ನಾಚಯ್ಯ ಸಲಹೆ ನೀಡಿದರು. ಕರ್ನಾಟಕ ಕೊಡವ ಸಾಹಿತ್ಯ ಅಕಾಡೆಮಿ ಹಾಗೂ ಕನೆಕ್ಟಿಂಗ್ ಕೊಡವಾಸ್ ವತಿಯಿಂದ ಮುತ್ತಾರ್ಮುಡಿ ಗದ್ದೆಯಲ್ಲಿ ನಡೆದ ಬೇಲ್‌ರ ಕೋಯಿಮೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕೊಡಗು ಕೃಷಿ ಪ್ರಧಾನವಾದ ಜಿಲ್ಲೆಯಾಗಿದ್ದು, ಕೃಷಿಯನ್ನೇ ನಂಬಿ ಬದುಕು ನಡೆಸುತ್ತಿದ್ದೇವೆ. ಕೃಷಿ ಭೂಮಿಯನ್ನು ಎಲ್ಲರೂ ಉಳಿಸಬೇಕು. ಭತ್ತ ಕೃಷಿಗೆ ಹೆಚ್ಚಿನ ಒತ್ತು ನೀಡಬೇಕು. ಇದು ಎಲ್ಲರಿಗೂ ಅನ್ನ ನೀಡುತ್ತದೆ ಎನ್ನುವುದನ್ನು ಯಾವುದೇ ಕಾರಣಕ್ಕೂ ಮರೆಯಬಾರದು ಎಂದು ಹೇಳಿದರು.



ಉದಯವಾಹಿನಿ ಚಿತ್ರ



ಉದಯವಾಹಿನಿ ಚಿತ್ರ

ಇಡೀ ಭರತ ಖಂಡದಲ್ಲಿ ಕೊಡಗಿನ ಭೂಮಿ ಸ್ವರ್ಗದಂತಿದೆ. ಇಲ್ಲಿನ ರೈತರು ಭತ್ತ, ಕಾಫಿ ಸೇರಿದಂತೆ ವಿವಿಧ ಬೆಳೆಗಳನ್ನು ಬೆಳೆಯುತ್ತಿದ್ದಾರೆ. ಮುಂದಿನ ತಲೆಮಾರಿಗೆ ಭತ್ತ ಕೃಷಿಯನ್ನು ಪರಿಚಯಿಸುವುದು ಈ ಕಾರ್ಯಕ್ರಮದ ಪ್ರಮುಖ ಉದ್ದೇಶ ಎಂದು ತಿಳಿಸಿದರು. ವಿದ್ಯಾರ್ಥಿಗಳಿಗೆ ಭತ್ತ ಕೃಷಿ ಮಾಹಿತಿ ನೀಡುವ ಮೂಲಕ ಕೃಷಿಯಲ್ಲಿ ತೊಡಗಿಸಿಕೊಳ್ಳಲು ಈ ಕಾರ್ಯಕ್ರಮ ಸಹಕಾರಿಯಾಗಿದೆ ಎಂದರು. ನಿವೃತ್ತ ಕೃಷಿ ಅಧಿಕಾರಿ ಅಜ್ಜಿಕುಟ್ಟಿರ ಸಿ.ಗಿರೀಶ್ ಮಾತನಾಡಿ, ಹಿಂದೆ ಎತ್ತು ಬಳಸಿ ಕೃಷಿ ಮಾಡುತ್ತಿದ್ದರು. ಈಗ ತಾಂತ್ರಿಕತೆಯಿಂದಾಗಿ ಟ್ರ್ಯಾಕ್ಟರ್, ಟಿಲ್ಲರ್ ಬಳಸಿಕೊಂಡು ಕೃಷಿ ಮಾಡುತ್ತಿದ್ದೇವೆ. ಹೊಸ ಯಂತ್ರೋಪಕರಣಗಳನ್ನು ಬಳಸಿಕೊಂಡು ಕೃಷಿ ಕ್ಷೇತ್ರದಲ್ಲಿ ತೊಡಗಿಸಿಕೊಳ್ಳಬೇಕು ಎಂದು ಹೇಳಿದರು. ಕೇಚಮಡ ಧ್ರುವ್ ದೇವಯ್ಯ ಅವರು ಭತ್ತದ ಗದ್ದೆ ಹದ ಮಾಡುವ ವಿಧಾನ, ಭತ್ತದ ಬೆಳೆ ನಾಟಿ ಮಾಡಿ ಉತ್ತಮ ಬೆಳೆ ಪಡೆಯುವ ಬಗ್ಗೆ ಮಾಹಿತಿ ನೀಡಿದರು.

**ಮೊಳಕೆ ಒಡೆದ ಭತ್ತ ಬಿತ್ತುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ**

ಕದ್ದನಿಯಂಡ ಶ್ರೀ ಗಣೇಶ್ ಅವರು ಕೊಡಗು ಜಿಲ್ಲೆಗೆ ಏರಿ ಕಟ್ಟುವ ಯಂತ್ರವನ್ನು ಪ್ರಥಮ ಬಾರಿಗೆ ಪರಿಚಯಿಸಿದರು. 1 ಗಂಟೆಗೆ 4 ಎಕರೆ ಭೂಮಿಯಲ್ಲಿ ಏರಿ ಕಟ್ಟಬಹುದಾಗಿದೆ. ಇದು ಜಿಲ್ಲೆಯಲ್ಲಿ ಬಹು ಬೇಡಿಕೆಯ ಯಂತ್ರವಾಗಿರುವುದು ವಿಶೇಷ. ಈ ಯಂತ್ರದ ಕುರಿತು ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಪರಿಚಯಿಸಲಾಯಿತು. ಇದಕ್ಕೂ ಮುನ್ನ ಮುತ್ತಾರ್ಮುಡಿ ಗದ್ದೆಯಲ್ಲಿ ಮೊಳಕೆ ಒಡೆದ ಭತ್ತ ಬಿತ್ತುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.



ಉದಯವಾಹಿನಿ ಚಿತ್ರ

> ಭತ್ತ ಕೃಷಿ ಬಿಡದಿರಲು ಸಲಹೆ ಉತ್ತಮ ಇಳುವರಿ ಪಡೆಯುವ ವಿಧಾನದ ಮಾಹಿತಿ ವಿದ್ಯಾರ್ಥಿಗಳಿಗೆ ಭತ್ತ ಕೃಷಿಯ ಪರಿಚಯ 45 ವರ್ಷದಿಂದ ಭತ್ತದ ಕೃಷಿಯಲ್ಲಿ ತೊಡಗಿಸಿಕೊಳ್ಳಲಾಗಿದೆ. ಕೃಷಿಯು ಬದುಕಿನ ಅವಿಭಾಜ್ಯ ಅಂಗವಾಗಿದೆ
> –ಸೋಮಂಗಡ ಗಣೇಶ್ ತಿಮ್ಮಯ್ಯ ಕೃಷಿಕ

ಕೃಷಿಕ ಪುದಿಯೊಕ್ಕಡ ಸೂರಜ್ ಬೋಜಣ್ಣ ಅವರು ಆಧುನಿಕ ಕಾಲಕ್ಕೆ ತಕ್ಕಂತೆ ಕೃಷಿ ಚಟುವಟಿಕೆ ಕೈಗೊಂಡು ಉತ್ತಮ ಭತ್ತ ಇಳುವರಿ ಪಡೆಯುವ ಬಗ್ಗೆ ಮಾಹಿತಿ ನೀಡಿದರು. ಕನೆಕ್ಟಿಂಗ್ ಕೊಡವಾಸ್ ಅಧ್ಯಕ್ಷ ಶಾಂತೆಯಂಡ ನಿರನ್ ನಾಚಪ್ಪ ಮಾತನಾಡಿದರು.

ಸೋಮೆಂಗಡ ಗಣೇಶ್ ತಿಮ್ಮಯ್ಯ ಮತ್ತು ಅತಿಥಿಗಳನ್ನು ಸನ್ಮಾನಿಸಲಾಯಿತು. ನೂರಾರು ವಿದ್ಯಾರ್ಥಿಗಳು ಭಾಗಿ ಅಪರೂಪದ ಈ ಕಾರ್ಯಕ್ರಮದಲ್ಲಿ ಕೇವಲ ಹಿರಿಯರಷ್ಟೇ ಅಲ್ಲ ಅವರಿಗಿಂತ ಹೆಚ್ಚಾಗಿ ವಿದ್ಯಾರ್ಥಿಗಳು ನೂರಾರು ಸಂಖ್ಯೆಯಲ್ಲಿ ಪಾಲ್ಗೊಂಡಿದ್ದು ವಿಶೇಷವಾಗಿತ್ತು. ಮುತ್ತಾರ್ಮುಡಿ ಗದ್ದೆಯಲ್ಲಿ ಮೊಳಕೆ ಒಡೆದ ಭತ್ತ ಬಿತ್ತುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದು ಗಮನ ಸೆಳೆಯಿತು. ಬೀಳುತ್ತಿದ್ದ ಚಿಟಪಟ ಮಳೆಯ ಹನಿಯ ನಡುವೆಯೂ ವಿದ್ಯಾರ್ಥಿಗಳು ಗದ್ದೆಯ ಕೆಸರಿನಲ್ಲಿ ಮಿಂದೆದ್ದರು. ಮೂರ್ನಾಡು ಪಿಯು ಕಾಲೇಜು ಜ್ಞಾನಜ್ಯೋತಿ ಕಾಲೇಜು ಕೊಡಗು ವಿದ್ಯಾಲಯ ಮಾರುತಿ ಶಾಲೆಯ ನೂರಾರು ವಿದ್ಯಾರ್ಥಿಗಳು ಬೇಲ್‌ರ ಕೋಯಿಮೆ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಮಿನಿ ನ್ಯೂಸ್

## ಹೃದಯಾಘಾತದಿಂದ ಕೆಎಸ್‌ಆರ್‌ಟಿಸಿ ನೌಕರ ಸಾವು

• ಉದಯವಾಹಿನಿ, ಕೋಲಾರ

ಜಿಲ್ಲೆಯ ಶ್ರೀನಿವಾಸಪುರದ ಕೆಎಸ್‌ಆರ್‌ಟಿಸಿ ಘಟಕದಲ್ಲಿ ಕಾರ್ಯನಿರ್ವಹಿಸುತ್ತಿದ್ದ ನೌಕರ ಬಾಬಾಜಾನ್ (53) ಹೃದಯಾಘಾತದಿಂದ ನಿಧನರಾದರು. ಅವರಿಗೆ ಪತ್ನಿ, ಪುತ್ರ, ಪುತ್ರಿ ಇದ್ದಾರೆ. ಅನಾರೋಗ್ಯದಿಂದ ಬಳಲುತ್ತಿದ್ದ ಮುತ್ತಕಪಲ್ಲಿ ಗ್ರಾಮದ ಅವರು ಸದ್ಯ ಡಿಪೋದಲ್ಲಿ ಮೆಕ್ಯಾನಿಕ್ ಆಗಿ ಕೆಲಸ ಮಾಡುತ್ತಿದ್ದರು. ಚಾಲಕರಾಗಿ ಕೆಲಸಕ್ಕೆ ಸೇರಿದ್ದ ಅವರು ಅಪಘಾತದಲ್ಲಿ ಕಾಲಿಗೆ ಪೆಟ್ಟಾದ ಕಾರಣ ಘಟಕದಲ್ಲಿ ಕೆಲಸ ಮಾಡುತ್ತಿದ್ದರು. ಬಸ್ಸುಗಳಿಗೆ ಡೀಸೆಲ್ ಭರ್ತಿ ಮಾಡುವ ಕೆಲಸದಲ್ಲಿ ತೊಡಗಿದ್ದರು ಕೂಡ ಕರ್ತವ್ಯ ನಿಭಾಯಿಸಿ ಮನೆಗೆ ತೆರಳಿದ್ದರು.

ಅವರ ನಿವಾಸಕ್ಕೆ ಕೆಎಸ್‌ಆರ್‌ಟಿಎಸ್ ಕಾರ್ಮಿಕ ಕಲ್ಯಾಣಾಧಿಕಾರಿ ನಾಗರಾಜ್, ಘಟಕ ವ್ಯವಸ್ಥಾಪಕ ವೆಂಕಟೇಶ್ ಭೇಟಿ ನೀಡಿ ಕುಟುಂಬದವರಿಗೆ ಸಾಂತ್ವನ ನೀಡಿದರು. ಕಾರ್ಮಿಕ ಕಲ್ಯಾಣ ನಿಧಿಯನ್ನು ಹಸ್ತಾಂತರಿಸಿದರು. ಕುಟುಂಬದವರಿಗೆ ಅನುಕಂಪ ಆಧಾರದ ನೌಕರಿ ನೀಡುವ ಸಂಬಂಧ ಪರಿಶೀಲಿಸಿ, ಮೇಲಧಿಕಾರಿಗಳ ಜೊತೆ ಚರ್ಚಿಸುವುದಾಗಿ ಕೆಎಸ್‌ಆರ್‌ಟಿಸಿ ಕೋಲಾರ ವಿಭಾಗೀಯ ನಿಯಂತ್ರಣಾಧಿಕಾರಿ ಶ್ರೀನಾಥ್ ತಿಳಿಸಿದರು.

## ಕಂದಾಯ ಇಲಾಖೆ ಮಸೂದೆಗಳಿಗೆ ತಿದ್ದುಪಡಿ: ಸಚಿವರಿಗೆ ಪೊನ್ನಣ್ಣ ಮನವಿ

• ಉದಯವಾಹಿನಿ, ಮಡಿಕೇರಿ

ಕಂದಾಯ ಇಲಾಖೆಯ ಕೆಲವು ಮಸೂದೆಗಳಿಗೆ ತಿದ್ದುಪಡಿ ತರುವಂತೆ ಶಾಸಕ ಎ.ಎಸ್.ಪೊನ್ನಣ್ಣ ಅವರು ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರಲ್ಲಿ ಮನವಿ ಮಾಡಿದರು. ಬೆಂಗಳೂರಿನ ವಿಕಾಸಸೌಧದ ಸಚಿವರ ಕೊಠಡಿಯಲ್ಲಿ ಸಚಿವರನ್ನು ಭೇಟಿ ಮಾಡಿದ ಅವರು ಮನವಿ ಸಲ್ಲಿಸಿದರು. ಕೊಡಗಿನವರ ಜಮ್ಮಬಾಣೆಗೆ ಕಂದಾಯ ನಿಗದಿ, ಪಟ್ಟೇದಾರರ ಸಮಸ್ಯೆ ಮತ್ತು ಪಹಣಿ ಪತ್ರದಲ್ಲಿ ಪಿ ನಂಬರ್‌ಗಳ ಸಮಸ್ಯೆಯನ್ನು ನಿವಾರಣೆ ಮಾಡಲು ಸೂಕ್ತ ತಿದ್ದುಪಡಿಯನ್ನು ಕರ್ನಾಟಕ ಕಂದಾಯ ಕಾಯ್ದೆ 1964ಕ್ಕೆ ತರಬೇಕೆಂದು ಅವರು ಮನವಿ ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಮನವಿ ಸ್ವೀಕರಿಸಿದ ಸಚಿವ ಕೃಷ್ಣ ಬೈರೇಗೌಡ, ಮುಂಬರುವ ಮುಂಗಾರು ಅಧಿವೇಶನದಲ್ಲಿ ಅಗತ್ಯ ತಿದ್ದುಪಡಿಯನ್ನು ತರಲಾಗುವುದು ಎಂಬ ಭರವಸೆಯನ್ನು ನೀಡಿದರು ಎಂದು ಪ್ರಕಟಣೆ ತಿಳಿಸಿದೆ.

## ಮೈಸೂರು-ಕೊಡಗು ಅಭಿವೃದ್ಧಿ ಅಮಿತ್ ಶಾ ಜತೆ ಯದುವೀರ್ ಚರ್ಚೆ

• ಉದಯವಾಹಿನಿ, ಮಡಿಕೇರಿ

ಅಕ್ರಮ ಬಾಂಗ್ಲಾ ವಲಸಿಗರ ಸಂಖ್ಯೆ ಕೊಡಗು ಜಿಲ್ಲೆಯಲ್ಲಿ ಇತ್ತೀಚೆಗೆ ಹೆಚ್ಚಾಗುತ್ತಿದೆ ಎಂಬ ಆತಂಕದ ಕುರಿತು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಲ್ಲಿ ಪ್ರಸ್ತಾಪಿಸಿದರು. ನವದೆಹಲಿಯಲ್ಲಿ ಅಮಿತ್ ಶಾ ಅವರನ್ನು ಭೇಟಿಯಾದ ಸಂಸದ ಯದುವೀರ್ ಈ ವಿಷಯದ ಕುರಿತು ಗೃಹ ಸಚಿವಾಲಯದಿಂದ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಮನವಿ ಸಲ್ಲಿಸಿದರು. ಇದರೊಂದಿಗೆ ಅವರು, ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಸಮಗ್ರ ಅಭಿವೃದ್ಧಿ ಹಾಗೂ ಇತರೆ ಪ್ರಮುಖ ವಿಷಯಗಳ ಬಗ್ಗೆ ಸಮಾಲೋಚನೆ ನಡೆಸಿದರು.

ಈ ವೇಳೆ ಅವರು, ಕೊಡಗಿನಲ್ಲಿ ಇತ್ತೀಚೆಗೆ ಸುರಿದ ಮಳೆಯಿಂದಾಗಿ ಆಸ್ತಿಪಾಸ್ತಿ ನಷ್ಟವಾಗಿದೆ. ಇವುಗಳಿಗೆ ಎನ್‌ಡಿಆರ್‌ಎಫ್ ಮೂಲಕ ಪರಿಹಾರ ಒದಗಿಸಲು ಅವಕಾಶ ಮಾಡಿಕೊಡಬೇಕೆಂದು ಮನವಿ ಮಾಡಿದರು. ಹೆಚ್ಚುವರಿ ಅನುದಾನ ಬಿಡುಗಡೆ ಮಾಡಿದರೆ, ತಡೆಗೋಡೆಗಳನ್ನು, ರಸ್ತೆಗಳನ್ನು ದುರಸ್ತಿ ಮಾಡಿಸಲು ಸಾಧ್ಯವಾಗಲಿದೆ ಎಂದು ತಿಳಿಸಿದರು.

ಕೊಡಗು ಜಿಲ್ಲೆಯಾದ್ಯಂತ ಈ ಬಾರಿ ಅತಿ ಹೆಚ್ಚು ಮಳೆಯಾಗಿದೆ. ಇದಕ್ಕಾಗಿ ಹೆಚ್ಚುವರಿ ಪರಿಹಾರ ಬಿಡುಗಡೆ ಮಾಡಬೇಕು ಎಂದೂ ಅವರು ಮನವಿ ಮಾಡಿದರು. ತಂಬಾಕು ಮತ್ತು ಕಾಫಿ ಬೆಳೆಗಾರರು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಹಾಗೂ ಮಳೆಯಿಂದ ಆಗಿರುವ ನಷ್ಟಕ್ಕೆ ಪರಿಹಾರ ದೊರಕಿಸಿಕೊಡಬೇಕು ಎಂದು ಕೋರಿದರು.

ಎಲ್ಲಾ ವಿಷಯಗಳನ್ನು ಕೂಲಂಕಷವಾಗಿ ಆಲಿಸಿದ ಗೃಹ ಸಚಿವ ಅಮಿತ್ ಶಾ, ಕಾಲಮಿತಿಯಲ್ಲಿ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳುವ ಭರವಸೆ ನೀಡಿದರು ಎಂದು ಯದುವೀರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಳೆ ವಿಮಾ ಯೋಜನೆ ಜಾರಿ

• ಉದಯವಾಹಿನಿ, ಕೆ.ಆರ್.ಪೇಟೆ

ಪ್ರಧಾನ ಮಂತ್ರಿ ಫಸಲ್ ಬೀಮಾ ಯೋಜನೆಯಡಿ 2025-26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಅಧಿಸೂಚಿತ ಬೆಳೆಗಳಿಗೆ ಬೆಳೆ ವಿಮಾ ಯೋಜನೆ ಜಾರಿಗೆ ತರಲಾಗಿದೆ. ಅಲಸಂದೆ ಪ್ರತಿ ಎಕರೆಗೆ 243, ಹೆಕ್ಟೇರ್‌ಗೆ 600. ಟೊಮೆಟೊಗೆ ಎಕರೆಗೆ 1408 ಹಾಗೂ ಹೆಕ್ಟೇರ್‌ಗೆ 3,481 ವಿಮೆ ಹಣ ನಿಗದಿ ಪಡಿಸಿದ್ದು, ರೈತರು ಜುಲೈ 15ರೊಳಗೆ ವಿಮೆ ನೊಂದಣಿ ಮಾಡಿಸಬೇಕು. ಭತ್ತಕ್ಕೆ ಪ್ರತಿ ಎಕರೆಗೆ 755 ಹಾಗೂ ಒಂದು ಹೆಕ್ಟೇರ್‌ಗೆ 1865. ನೀರಾವರಿ ಪ್ರದೇಶದ ರಾಗಿ ಬೆಳೆಗೆ 302, 746, ಮಳೆ ಆಶ್ರಿತ ರಾಗಿ ಬೆಳೆಗೆ 344 ಹಾಗೂ 850, ಹುರುಳಿಗೆ 166 ಹಾಗೂ 410 ವಿಮೆ ಪಾವತಿಸಬೇಕು.

ಭತ್ತ, ರಾಗಿ ಮತ್ತು ಹುರಳಿ ಬೆಳೆ ವಿಮೆಗೆ ಆಗಸ್ಟ್ 16 ಕಡೆಯ ದಿನ. ರೈತರು ಮುಂಗಾರು ಹಂಗಾಮಿಗೆ ರೈತರ ಬೆಳೆ ಸಮೀಕ್ಷೆ ಆ್ಯಪ್-2025 ಬಿಡುಗಡೆ ಮಾಡಿದ್ದು, ತಾವೇ ಮೊಬೈಲ್ ಮೂಲಕ ಬೆಳೆಯನ್ನು ಅಪ್‌ಲೋಡ್ ಮಾಡಬಹುದಾಗಿದೆ ಎಂದು ತಾಲ್ಲೂಕು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಎಚ್.ಜೆ.ಸಂತೋಷ್ ಕುಮಾರ್ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

## 3.80 ಕೋಟಿ ಮಹಿಳೆಯರ ಪ್ರಯಾಣ

• ಉದಯವಾಹಿನಿ, ಗುಂಡ್ಲುಪೇಟೆ

ಶಕ್ತಿ ಯೋಜನೆಯಡಿ ಗುಂಡ್ಲುಪೇಟೆ ಘಟಕದದಿಂದ ಸುಮಾರು 3.80 ಕೋಟಿ ಮಹಿಳೆಯರು ಎರಡು ವರ್ಷದಿಂದ ಉಚಿತ ಪ್ರಯಾಣ ಮಾಡಿದ್ದು, ಡಿಪೊಗೆ 3 ಕೋಟಿ ಆದಾಯ ಬಂದಿದೆ ಎಂದು ಶಾಸಕ ಎಚ್.ಎಂ.ಗಣೇಶಪ್ರಸಾದ್ ಹೇಳಿದರು. ಪಟ್ಟಣದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಶಕ್ತಿ ಯೋಜನೆಯ ಎರಡನೇ ವರ್ಷಾಚರಣೆ ಹಿನ್ನಲೆ ನಿಗಮದ ಬಸ್‌ಗೆ ಪೂಜೆ ಸಲ್ಲಿಸಿ, ಹಸಿರು ನಿಶಾನೆ ತೋರಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಶಕ್ತಿ ಯೋಜನೆಯಿಂದ ತಾಲ್ಲೂಕಿನ ಬಹುತೇಕ ಮಹಿಳೆಯರಿಗೆ ಅನುಕೂಲವಾಗಿದ್ದು, ಯೋಜನೆ ಹೀಗೆಯೇ ವಿಸ್ತರಣೆ ಆಗಲಿದೆ ಎಂದು ತಿಳಿಸಿದರು. ಕ್ಷೇತ್ರದ ವಿವಿಧ ಕಡೆಗಳಲ್ಲಿ ಬಸ್ ಸಮಸ್ಯೆ ಇದೆ. ಇದಕ್ಕೆ ಹೊಸ ಬಸ್‌ಗಾಗಿ ಈಗಾಗಲೇ ಸರ್ಕಾರಕ್ಕೆ ಮನವಿ ಮಾಡಲಾಗಿದ್ದು, ಸದ್ಯದಲ್ಲೇ ಬಸ್‌ಗಳು ಬರುವ ನಿರೀಕ್ಷೆಯಿದೆ. ಜೊತೆಗೆ ಶಕ್ತಿ ಯೋಜನೆಯಿಂದ ಬಸ್‌ನಲ್ಲಿ ತೆರಳುವ ಪುರುಷ ಪ್ರಯಾಣಿಕರಿಗೆ ಸಾಕಷ್ಟು ಸಮಸ್ಯೆಗಳಾಗಿದ್ದು, ಹಂತ ಹಂತವನ್ನು ಬಗೆಹರಿಸುವ ನಿಟ್ಟಿನಲ್ಲಿ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

ಅಂತರಾಳದಿಂದ... EDITORIAL

# ಕೃತಕ ಬುದ್ಧಿಮತ್ತೆ ಆಧಾರಿತ ಕೃಷಿ; ಸ್ಫೂರ್ತಿದಾಯಕ ಹೆಜ್ಜೆ-ಪ್ರಯೋಗ



ಕೃಷಿಯಲ್ಲಿ 'ಎಐ' ತಂತ್ರಜ್ಞಾನದ ಬಳಕೆ ರೈತರಿಗೆ ಹೊಸ ಅವಕಾಶಗಳನ್ನು ಒದಗಿಸಲಿದೆ; ಇಳುವರಿ ಹೆಚ್ಚಳದೊಂದಿಗೆ, ಮಾರುಕಟ್ಟೆ ಸಾಧ್ಯತೆಗಳೂ ತೆರೆದುಕೊಳ್ಳಲಿವೆ. ಕೃತಕ ಬುದ್ಧಿಮತ್ತೆ ತಂತ್ರಜ್ಞಾನದ ಮೂಲಕ ಕೃಷಿ ಕ್ಷೇತ್ರವನ್ನು ಲಾಭದಾಯಕಗೊಳಿಸುವ ರಾಜ್ಯ ಸರ್ಕಾರದ ಉದ್ದೇಶ, ಸಮಸ್ಯೆಗಳ ಸರಮಾಲೆಯಿಂದ ಕಂಗೆಟ್ಟಿರುವ ರೈತರಲ್ಲಿ ಒಂದಿಷ್ಟು ಭರವಸೆ ಮೂಡಿಸುವಂತಹದ್ದು. ಇಳುವರಿ ಹೆಚ್ಚಳದ ಜೊತೆಗೆ ಮಾರುಕಟ್ಟೆ ಸಾಧ್ಯತೆಗಳ ಕುರಿತು ರೈತರಿಗೆ ನೆರವು ನೀಡುವ 'ಕೃಷಿ ಸೇವಾ ಕೇಂದ್ರ'ಗಳನ್ನು ಸ್ಥಾಪಿಸಲು ಸರ್ಕಾರ ಮುಂದಾಗಿದೆ. ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಕೃತಕ ಬುದ್ಧಿಮತ್ತೆ ತಂತ್ರಜ್ಞಾನವನ್ನು ಆಧರಿಸಿ ಕಾರ್ಯ ನಿರ್ವಹಿಸಲಿರುವ ಈ ಕೇಂದ್ರಗಳ ಮೂಲಕ, ಆಯಾ ಪ್ರದೇಶದ ಮಣ್ಣಿನ ಮಾದರಿ, ಹವಾಗುಣ, ತೇವಾಂಶ. ಮಳೆಯ ಪ್ರಮಾಣದೊಂದಿಗೆ ಪ್ರಸ್ತುತ ಇರುವ ಬೆಳೆ ಪದ್ಧತಿ ಮತ್ತು ಇಳುವರಿಯ ವಿಶ್ಲೇಷಣೆ ನಡೆಯಲಿದೆ.ಈ ವಿಶ್ಲೇಷಣೆಯು ರಾಜ್ಯದ ರೈತರು ಹಾಗೂ ಕೃಷಿ ನೀತಿ ನಿರೂಪಕರಿಗೆ ನೆರವಾಗಲಿದೆ. ಆಯಾ ಪ್ರದೇಶಕ್ಕೆ ಅನುಗುಣವಾಗಿ ಅಧಿಕ ಲಾಭ ತರುವ ಬೆಳೆಗಳನ್ನು ಆಯ್ಕೆ ಮಾಡಿಕೊಳ್ಳುವ ಕುರಿತು ನೆರವಾಗಲು ರಾಜ್ಯಮಟ್ಟದ ತಂತ್ರಜ್ಞರ ಸಮಿತಿಯನ್ನೂ ಸರ್ಕಾರ ರಚಿಸಿದೆ. 2025–26ನೇ ಸಾಲಿನಲ್ಲಿ, ಭತ್ತದ ಬೆಳೆಯಲ್ಲಿ ತಂತ್ರಜ್ಞಾನದ ಮಾದರಿಯನ್ನು (ಎಸ್ ಟೆಕ್) ಅಳವಡಿಸಲು ಬಳ್ಳಾರಿ, ದಾವಣಗೆರೆ, ಕೊಪ್ಪಳ, ಮಂಡ್ಯ, ಮೈಸೂರು, ರಾಯಚೂರು, ವಿಜಯನಗರ ಮತ್ತು ಯಾದಗಿರಿ ಜಿಲ್ಲೆಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ. ರಾಯಚೂರು ಕೃಷಿ ವಿಶ್ವವಿದ್ಯಾಲಯ ಅಭಿವೃದ್ಧಿ ಪಡಿಸಿರುವ 'ಇ-ಸ್ಯಾಪ್' ತಂತ್ರಾಂಶ, ಕೀಟದಿಂದ ಉಂಟಾಗುವ ರೋಗಗಳನ್ನು ನಿವಾರಿಸುವುದರ ಜೊತೆಗೆ, ಪೋಷಕಾಂಶಗಳ ಕೊರತೆಯನ್ನು ನೀಗಿಸಲೂ ನೆರವಾಗುತ್ತದೆ.

> **ಇಂಥ ರೈತರಿಗೆ, ಕೃಷಿ ಸೇವಾ ಕೇಂದ್ರಗಳು ನೆರವಿಗೆ ಬರುವ ನಿರೀಕ್ಷೆಯಿದೆ. ಪ್ರಕೃತಿ ಹಾಗೂ ಮಾರುಕಟ್ಟೆಯ ವೈಪರೀತ್ಯಗಳನ್ನು ತಡೆಗಟ್ಟಲು ಅಗತ್ಯವಾದ ಮಾಹಿತಿಯನ್ನು ಒದಗಿಸುವ ತಂತ್ರಜ್ಞಾನ ಲಭ್ಯವಾದರೆ, ರೈತರ ಕೃಷಿ ಜೀವನದಲ್ಲಿ ತಕ್ಕಮಟ್ಟಿಗೆ ಸುಧಾರಣೆ ಆಗಲಿದೆ. ವಿಶ್ವದಲ್ಲಿ ಸಂಚಲನ ಹುಟ್ಟಿಸಿರುವ 'ಕೃತಕ ಬುದ್ಧಿಮತ್ತೆಯನ್ನು ಬಳಸಿಕೊಳ್ಳುವ ನಿಟ್ಟಿನಲ್ಲಿ ರೈತರನ್ನು ಸಜ್ಜುಗೊಳಿಸುವ ಜಾಗೃತಿ ಅಭಿಯಾನವೂ ನಡೆಯಬೇಕಾಗಿದೆ.**

ಈ ತಂತ್ರಾಂಶ ಬಳಸಿ, 52 ಕೃಷಿ ಬೆಳೆಗಳಲ್ಲಿ ಕಂಡುಬರುವ 1,000ಕ್ಕೂ ಹೆಚ್ಚು ಕೀಟ ರೋಗಗಳನ್ನು ನಿವಾರಣೆ ಮಾಡಲು ಕೃಷಿ ಇಲಾಖೆ ಮುಂದಾಗಿದೆ. ಆಯಾ ವರ್ಷದ ಹವಾಮಾನ, ಅತಿವೃಷ್ಟಿ, ಅನಾವೃಷ್ಟಿಯ ಆಧಾರದಲ್ಲಿ ಯಾವ ಋತುವಿನಲ್ಲಿ ಯಾವ ಬೆಳೆಗೆ ಹೆಚ್ಚಿನ ಬೇಡಿಕೆ ಇರುತ್ತದೆ ಎನ್ನುವುದನ್ನು ಕೃಷಿ ಸೇವಾ ಕೇಂದ್ರಗಳು ಅಂದಾಜು ಮಾಡಲಿವೆ. ಯಾವ ಬೆಳೆಗಳಿಗೆ ಉತ್ತಮ ಬೆಲೆ ದೊರೆಯಬಹುದು ಎನ್ನುವ ಮಾಹಿತಿಯನ್ನೂ ಒದಗಿಸಲಿವೆ. ಇದರಿಂದಾಗಿ, ರೈತರು ತಾವು ಬೆಳೆಯಬಹುದಾದ ಬೆಳೆಗಳನ್ನು ನಿರ್ಧರಿಸುವುದು ಸುಲಭವಾಗುತ್ತದೆ. ಮಳೆಯ ಕಣ್ಣಾಮುಚ್ಚಾಲೆಯಿಂದಾಗಿ ಬಿತ್ತಿದ್ದು ಕೈಗೆ ದೊರೆಯದೆ ಹೋಗುವುದು ಹಾಗೂ ಉತ್ತಮ ಫಸಲು ಬಂದಾಗ ಧಾರಣೆ ಇದ್ದಕ್ಕಿದ್ದಂತೆ ಕುಸಿಯುವುದು ರೈತರು ಎದುರಿಸುವ ಬಹುಮುಖ್ಯವಾದ ಎರಡು ಸಮಸ್ಯೆಗಳು. ಮಳೆಯ ವ್ಯತ್ಯಯ ಹಾಗೂ ರೋಗಬಾಧೆಯಿಂದ ಇಳುವರಿಯಲ್ಲಿ ವ್ಯತ್ಯಾಸವಾದಾಗ ಕಂಗೆಡುವುದಕ್ಕಿಂತಲೂ, ಮಾರುಕಟ್ಟೆಯಲ್ಲಿನ ದಿಢೀರ್ ಏರಿಳಿತಗಳು ಕೃಷಿಕರನ್ನು ತೀವ್ರವಾಗಿ ಗಾಸಿಗೊಳಿಸುತ್ತವೆ. ಟೊಮೆಟೊ, ಈರುಳ್ಳಿ, ಕಲ್ಲಂಗಡಿ ಬೆಳೆಗಾರರು ಆಗಾಗ ದಿಢೀರ್ ಬೆಲೆ ಕುಸಿತದ ವಿದ್ಯಮಾನಗಳಿಂದ ಕಂಗಾಲಾಗಿ, ಬೆಳೆದ ಫಸಲನ್ನು ರಸ್ತೆಗೆ ಚೆಲ್ಲಿ ತಮ್ಮ ಸಂಕಟ- ಪ್ರತಿಭಟನೆ ವ್ಯಕ್ತಪಡಿಸುವುದಿದೆ. ಕೊಬ್ಬರಿ, ಅಡಿಕೆ, ಭತ್ತ, ಕಬ್ಬು ಸೇರಿದಂತೆ ಯಾವ ಬೆಳೆಯೂ ಬೆಲೆಯ ಏರಿಳಿತದಿಂದ ತಪ್ಪಿಸಿಕೊಳ್ಳುವಂತಿಲ್ಲ. ಪ್ರಸ್ತುತ, ಕಲಬುರಗಿ ಜಿಲ್ಲೆಯ ರೈತರು ತೊಗರಿ ಧಾರಣೆ ಕುಸಿತದಿಂದ ಕಂಗೆಟ್ಟಿದ್ದಾರೆ. 2024ರ ಮೇ ತಿಂಗಳಿನಲ್ಲಿ, ಮುಕ್ತ ಮಾರುಕಟ್ಟೆಯಲ್ಲಿ ಕ್ವಿಂಟಲ್‌ಗೆ ಗರಿಷ್ಠ ರೂ.12,750 ಇದ್ದ ತೊಗರಿಯ ಧಾರಣೆ ಈಗ ರೂ.6,250ರ ಆಸುಪಾಸಿನಲ್ಲಿದೆ. ಈ ಅನಿರೀಕ್ಷಿತ ಧಾರಣೆ ಕುಸಿತ ತೊಗರಿ ಬೆಳೆಗಾರರನ್ನು ಕಂಗಾಲಾಗಿಸಿದೆ. ಮೂರು ತಿಂಗಳ ಹಿಂದಷ್ಟೇ, ಒಣ ಮೆಣಸಿನಕಾಯಿಯ ಧಾರಣೆ ಕುಸಿತದ ಘಾಟಿನಿಂದ ರಾಜ್ಯದ ರೈತರು ತತ್ತರಿಸಿದ್ದರು. ಬಳ್ಳಾರಿ, ವಿಜಯಪುರ ಸೇರಿದಂತೆ ರಾಜ್ಯದ ಹತ್ತು ಜಿಲ್ಲೆಗಳಲ್ಲಿ ಮೆಣಸಿನಕಾಯಿ ಇಳುವರಿ ಉತ್ತಮವಾಗಿದ್ದರೂ, ಧಾರಣೆ ಬೆಲೆ ಕುಸಿತದಿಂದ ಹತಾಶರಾದ ರೈತರು ಮೆಣಸಿನಕಾಯಿಯನ್ನು ಗಿಡಗಳಲ್ಲೇ ಬಿಡುವ ಮೂಲಕ ಪ್ರತಿಭಟಿಸಿದ್ದರು. ಮಾರುಕಟ್ಟೆಯಲ್ಲಿನ ಬೇಡಿಕೆಗಿಂತಲೂ ಹೆಚ್ಚಿನ ಉತ್ಪಾದನೆ ಇರುವುದು ಬೆಲೆ ಕುಸಿತಕ್ಕೆ ಕಾರಣಗಳಲ್ಲೊಂದು. ಬೇಡಿಕೆ ಮತ್ತು ಉತ್ಪಾದನೆಯ ಅಂದಾಜು ಮಾಡಲಾಗದೆ ಅನೇಕ ರೈತರು ಸಮಸ್ಯೆಗೆ ಸಿಲುಕುತ್ತಾರೆ.

# ದೇವರ ಅನುಗ್ರಹ ಬೇಕು..!

ವಿಶ್ವಾಸ್.ಡಿ.ಗೌಡ

• ಉದಯವಾಹಿನಿ, ವಿಶೇಷ





ಒಬ್ಬ ಮನುಷ್ಯನಿಗೆ ವಯಸ್ಸಾಯಿತು ಮೃತಪಟ್ಟನು. ಅವನು ಮಾಡಿದ ಪುಣ್ಯ ಕಾರ್ಯಗಳಿಂದ ನೇರವಾಗಿ ಸ್ವರ್ಗಕ್ಕೆ ಬಂದನು. ಸ್ವರ್ಗದಲ್ಲಿ ದೇವತೆಯು ಬಂದು ಅವನ ಕೈ ಹಿಡಿದು ಒಳಗೆ ಕರೆದುಕೊಂಡು ಹೋದಳು. ಹೀಗೆ ಸಾಗುತ್ತಿರುವಾಗ ಅಲ್ಲೊಂದು ಕೊಠಡಿ ಕಾಣುತ್ತದೆ. ಅಲ್ಲಿ ದೇವತೆಗಳು ಬಹಳ ಗಡಿಬಿಡಿಯಿಂದ ಕೆಲಸ ಮಾಡುತ್ತಾ, ಅಲ್ಲಿಂದಿಲ್ಲಿಗೆ ಅವಸರವಸರವಾಗಿ ಓಡಾಡುತ್ತಿದ್ದರು ಹಾಗೂ ಅಲ್ಲೊಂದಷ್ಟು ದೊಡ್ಡ ದೊಡ್ಡ ಪುಸ್ತಕಗಳಿದ್ದು ಅದರೊಳಗೆ ಏನೇನೋ ಬರೆಯುತ್ತಿದ್ದರು. ಇದನ್ನು ನೋಡಿದ ಮನುಷ್ಯ ದೇವತೆಯನ್ನು ಕೇಳಿದ ಅವರೆಲ್ಲ ಏನು ಮಾಡುತ್ತಿದ್ದಾರೆ ಎಂದು ಅವಳು ಹೇಳಿದಳು ಇದು ಸ್ವೀಕೃತಿ ವಿಭಾಗ. ಅಂದರೆ ಏನು? ಎಂದು ಪ್ರಶ್ನೆ ಮಾಡಿದನು. ಅವಳು ಇದು ಭೂಮಿಯ ಮೇಲಿನ ಜನರು ದೇವರಲ್ಲಿ ಅನೇಕ ಬೇಡಿಕೆಗಳನ್ನು ಬೇಡಿರುತ್ತಾರೆ ಅದನ್ನೆಲ್ಲ ಇಲ್ಲಿ ದಾಖಲಿಸುತ್ತಾರೆ ಎಂದಳು. ಮತ್ತೆ ಮುಂದೆ ಹೋಗುತ್ತಿದ್ದರು. ಅಲ್ಲಂತೂ ಬಹಳ ವಿಸ್ತಾರವಾದ ಕೊಠಡಿಯಿತ್ತು. ಕೆಲಸಗಳು ಸರಸರ ನಿಮಿಷವೂ ಬಿಡುವಿಲ್ಲದಂತೆ ನಡೆಯುತ್ತಲೇ ಇತ್ತು.

ಇದನ್ನು ಕಂಡ ಮನುಷ್ಯ ಮತ್ತೆ ದೇವತೆಯನ್ನು ಕೇಳಿದ, ಅದಕ್ಕೆ ಅವಳು ಇದು ಬಟವಾಡೆ ವಿಭಾಗ, ಪ್ರಾರ್ಥನೆ ಹಾಗೂ ಪೂಜೆಯ ಮೂಲಕ ಸಂದಾಯವಾದ ಜನರ ಬೇಡಿಕೆಗಳನ್ನೆಲ್ಲಾ ಪರಿಶೀಲಿಸಿ ಅಗತ್ಯಕ್ಕೆ ತಕ್ಕಂತೆ ಭಗವಂತನು ಅನುಗ್ರಹಿಸುತ್ತಾನೆ. ಅವುಗಳನ್ನೆಲ್ಲಾ ಸರಿ ಮಾಡಿ ಆ ಅನುಗ್ರಹಗಳನ್ನು ಪ್ಯಾಕ್ ಮಾಡಿ ಅದಕ್ಕೆ ಸಂಬಂಧಪಟ್ಟವರಿಗೆ ತಲುಪಿಸುವ ಕೆಲಸ ಈ ವಿಭಾಗದ್ದು.

ಅಲ್ಲಿಂದ ಮುಂದೆ ನಡೆಯುತ್ತಿದ್ದರು. ಬಹಳ ದೊಡ್ಡ ಚೌಕಿ. ಅದರಿಂದ ದಾಟಿ ಮುಂದೆ ಬಂದಾಗ ಅಲ್ಲೊಂದು ಸಣ್ಣ ಕೊಠಡಿ ಕಾಣುತ್ತದೆ. ಅಲ್ಲೊಬ್ಬ ದೇವತೆ ಟೇಬಲ್ ಮುಂದೆ ಕೆಲಸವಿಲ್ಲದೆ ಕೂತಿದ್ದಾಳೆ. ಅವಳಿಗೆ ಮಾಡಲು ಏನೂ ಕೆಲಸವಿಲ್ಲ. ಏನನ್ನೋ ಕಾಯುವಂತೆ ಕಾಯುತ್ತ ಕುಳಿತಿದ್ದಳು. ಮನುಷ್ಯನಿಗೆ ಆಶ್ಚರ್ಯವಾಯಿತು, ಮತ್ತೆ ದೇವತೆಯನ್ನು ಇದೇನು? ಇದು ಮೊದಲು ನೋಡಿದ ಎರಡು ಕೊಠಡಿಗಳಲಲ್ಲೂ ಒಬ್ಬರ ಮುಖ ಒಬ್ಬರು ನೋಡಿಕೊಳ್ಳಲು ಆಗದಷ್ಟು ಕೆಲಸ ಮಾಡುತ್ತಿದ್ದರು. ಆದರೆ ಇಲ್ಲಿ ಈ ದೇವತೆ ಏನು ಇಲ್ಲದೆ ಸುಮ್ಮನೆ ಕುಳಿತಿದ್ದಾಳೆ ಯಾಕೆ? ಈ ಕೊಠಡಿಯ ಅಗತ್ಯವಾದರೂ ಏನು ಎಂದು ಕೇಳಿದ. ಆಗ ದೇವತೆ, ಬಹಳ ಬೇಸರದಿಂದ ಹೇಳಿದಳು. ಇದು 'ರಸೀದಿ' ವಿಭಾಗ. ಭಗವಂತನನ್ನು ಅರ್ಚಿಸಿ ಜನರು ಬೇಡಿಕೆಗಳನ್ನು ಬೇಡುತ್ತಾರೆ, ಭಗವಂತ ಅವುಗಳನ್ನು ಅನುಗ್ರಹಿಸುತ್ತಾನೆ. ದೇವರ 'ಅನುಗ್ರಹವನ್ನು' ನಾವುಗಳು ಭಕ್ತರಿಗೆ ಬಟವಾಡೆ ಮಾಡುತ್ತೇವೆ. ನಮಗೆ ತಲುಪಿದೆ ಎಂದು ಜನರು 'ರಸೀದಿ'ಯನ್ನು ಕಳಿಸಿದರೆ ಮಾತ್ರ ಇಲ್ಲಿ ದಾಖಲಾಗುತ್ತದೆ. ಆದರೆ ಅಂಥ ರಸೀದಿಯನ್ನು ಕಳುಹಿಸುವವರು ತುಂಬಾ ಅಂದರೆ ತುಂಬಾ ಕಡಿಮೆ. ಆದುದರಿಂದ ಇಲ್ಲಿ ಈ ದೇವತೆಗೆ ಕೆಲಸವಿಲ್ಲ ಎಂದಳು. 'ರಸೀದಿ' ಎಂದರೆ ಏನು ಎಂದು ಆ ಮನುಷ್ಯ ಆಕೆಯನ್ನು ಕೇಳಿದ. ಕಷ್ಟ ಬಂದಾಗ ಈಶ್ವರ, ರಾಮ,ಕೃಷ್ಣ, ಆಂಜನೇಯ, ಲಕ್ಷ್ಮಿ, ಪಾರ್ವತಿ, ಗಣಪತಿ, ಸುಬ್ರಹ್ಮಣ್ಯ, ಇರೋ ಬರೋ ದೇವರುಗಳೆಲ್ಲರೂ ನೆನಪಾಗುತ್ತಾರೆ. ಅದೆಷ್ಟೇ ಒತ್ತಡಗಳಿದ್ದರೂ ಸೇವೆ ಸಲ್ಲಿಸುತ್ತಾರೆ. ಕೆಲಸ ಆದ ಮೇಲೆ ಈ ತಿಂಗಳು, ಮುಂದಿನ ವರ್ಷ, ಮದುವೆ ಒಂದು ಆಗಲಿ, ಮನೆ ಮುಗಿದುಬಿಡಲಿ, ಹೀಗೆ ಅಡ್ಡಗೋಡೆ ಕಟ್ಟಿ ಮರೆತುಬಿಡುತ್ತಾರೆ. ಇದು ದೇವರ ವಿಚಾರದಲ್ಲಿ ಮಾತ್ರ ಅಲ್ಲ ಮನುಷ್ಯ ಮನುಷ್ಯನಿಗೂ, ಮನುಷ್ಯ ಪ್ರಾಣಿಗಳಿಗೂ, ಕೃತಜ್ಞತೆ ಸಲ್ಲಿಸುವುದಿಲ್ಲ. ಪ್ರಕೃತಿಗೆ ಕೃತಜ್ಞತೆಯನ್ನು ಸಲ್ಲಿಸಬೇಕು. ಆದರೆ ಹಾಗೆ ಮಾಡುವುದಿಲ್ಲ. ಹೀಗಾಗಿ ರಸೀದಿ ವಿಭಾಗ ಯಾವಾಗಲೂ ಖಾಲಿ ಇರುತ್ತದೆ

> **ಮತ್ತೆ ದೇವತೆ ಹೇಳಿದಳು, ರಸೀದಿ ಕಳಿಸುವುದು ತುಂಬಾ ಸುಲಭ. ಯಾರು ಶ್ರದ್ಧಾಭಕ್ತಿಯಿಂದ ಭಗವಂತನನ್ನು ಪೂಜಿಸಿ ಅವರಿಗೆ ಬೇಕಾದ್ದನ್ನು ಬೇಡಿಕೊಳ್ಳುತ್ತಾರೋ, ಅದನ್ನು ಭಗವಂತನು ಅನುಗ್ರಹಿಸುತ್ತಾನೆ. ಭಕ್ತರು, ಭಗವಂತ ನಿನ್ನಿಂದ ನನಗೆ ಮಹದುಪಕಾರವಾಯಿತು. ನನ್ನ ಕಷ್ಟಗಳನ್ನೆಲ್ಲ ಮಂಜಿನಂತೆ ಕರಗಿಸಿದೆ, ನನ್ನ ಮಕ್ಕಳ ವಿದ್ಯಾಭ್ಯಾಸಕ್ಕೆ ದಾರಿತೋರಿದೆ, ಕೆಲಸ ಸಿಕ್ಕಿತು, ಮದುವೆಯಾಯಿತು, ಮನೆ ಆಯಿತು, ಮಕ್ಕಳಾಯಿತು ಹೀಗೆ ಅವರಿಗೆ ಫಲ ದೊರೆತ ನಂತರ, ದೇವರಿಗೆ ಧನ್ಯತಾಭಾವದಿಂದ ಕೈಮುಗಿದು ಕೃತಜ್ಞತೆಯನ್ನು ಸೂಚಿಸುವುದೇ ರಸೀದಿ ಆದರೆ ಮನುಷ್ಯರು ತಮ್ಮ ಕೆಲಸ ಆಗುವವರೆಗೂ ಅವರಿವರನ್ನು ಕೇಳಿ, ಜೋತಿಷ್ಯ ರನ್ನು ಕೇಳಿ, ಬೇಕಾದಷ್ಟು ಒದ್ದಾಡಿ, ಮಡಿ -ಹುಡಿಯಿಂದ ಸೇವೆಮಾಡಿ ಬೇಡಿಕೆ ಸಲ್ಲಿಸುತ್ತಾರೆ, ಭಗವಂತ ಈಡೇರಿಸುತ್ತಾನೆ. ಅವರು ಕೇಳಿದ್ದನ್ನು ಅನುಗ್ರಹಿಸಿದ ಮೇಲೆ ಹಿಂದಿನದೆಲ್ಲ ಮರೆತು ಬಿಡುತ್ತಾರೆ. ರಸೀದಿ ತಲುಪಿಸುವ ವಿಚಾರವು ಅವರ ತಲೆಯಲ್ಲಿ ಬರುವುದೇ ಇಲ್ಲ ಎಂದಳು.**

# ರೂಟ್ ಕೆನಾಲ್ ಮಾಡಿಸಿದ್ರೆ ಹೃದಯದ ಕಾಯಿಲೆ ಕಾಡುತ್ತೆ ಅನ್ನೋದು ನಿಜನಾ?

ರೂಟ್ ಕೆನಾಲ್‌ಗಳು ಹೃದಯ ಕಾಯಿಲೆಗೆ ಕಾರಣವಾಗುತ್ತವೆ ಎಂಬುದು ಸಾಮಾನ್ಯ ಪುರಾಣಗಳಲ್ಲಿ ಒಂದಾಗಿದೆ. ಸೋಂಕಿತ ಹಲ್ಲು ಹೃದಯದ ಆರೋಗ್ಯವನ್ನು ಹದಗೆಡಿಸುತ್ತದೆಯೇ ವಿನಹಃ ರೂಟ್ ಕೆನಾಲ್ ಮಾಡೋದ್ರಿಂದ ಯಾವುದೇ ಸಮಸ್ಯೆ ಉಂಟಾಗೋದಿಲ್ಲ. ಹಲ್ಲಿನ ಸಮಸ್ಯೆ ಪ್ರತಿಯೊಬ್ಬರನ್ನೂ ಕಾಡುವಂತಹದ್ದೇ. ಅದರಲ್ಲೂ ಹಲ್ಲು ಸೋಂಕಿಗೆ ಒಳಗಾದರೆ ಅದನ್ನು ರೂಟ್ ಕೆನಾಲ್‌ಗೆ ಒಳಗಾಗಬೇಕಾಗುತ್ತದೆ. ಇದು ಹಲ್ಲಿನ ಒಳಗಿನಿಂದ ಸೋಂಕಿತ ಅಥವಾ ಉಬ್ಬಿರುವ ತಿರುಳನ್ನು ತೆಗೆದುಹಾಕುವ ವಿಧಾನವಾಗಿದೆ.



ರೂಟ್ ಕೆನಾಲ್ ನಿಮ್ಮ ಹಲ್ಲಿನ ಮೇಲಿನ ಯಾವುದೇ ರೀತಿಯ ಬ್ಯಾಕ್ಟೀರಿಯಾದ ಬೆಳವಣಿಗೆಯನ್ನು ತೆಗೆದುಹಾಕಲು, ಹಲ್ಲಿನ ಮರು ಸೋಂಕನ್ನು ತಡೆಯಲು ಮತ್ತು ನೈಸರ್ಗಿಕ ಹಲ್ಲನ್ನು ಉಳಿಸಲು ಸಹಾಯ ಮಾಡುತ್ತದೆ.

**ರೂಟ್ ಕೆನಾಲ್:** ಲಕ್ಷಾಂತರ ಜನರು ತಮ್ಮ ಹಾನಿಗೊಳಗಾದ ಅಥವಾ ರೋಗಪೀಡಿತ ಹಲ್ಲಿಗೆ ಚಿಕಿತ್ಸೆ ನೀಡಲು ರೂಟ್ ಕೆನಾಲ್‌ಗೆ ಒಳಗಾಗುತ್ತಾರೆ.

ಈ ವಿಧಾನವು ತನ್ನದೇ ಆದ ಪ್ರಯೋಜನಗಳು, ಅಪಾಯಗಳನ್ನು ಹೊಂದಿದೆ. ಈ ಕಾರ್ಯವಿಧಾನದ ಪ್ರಯೋಜನಗಳಲ್ಲಿ ಸೋಂಕನ್ನು ತೆಗೆದುಹಾಕುವುದು, ಸೋಂಕು ನಿಮ್ಮ ದವಡೆಯ ಮೂಳೆಗೆ ಹರಡುವುದನ್ನು ಅಥವಾ ಹಾನಿಯಾಗದಂತೆ ತಡೆಯುವುದು, ನಿಮ್ಮ ನೈಸರ್ಗಿಕ ಹಲ್ಲನ್ನು ಉಳಿಸುವುದು ಸೇರಿವೆ. ಅಪಾಯಗಳಲ್ಲಿ ಹಲ್ಲಿಗೆ ಮತ್ತೊಂದು ರೂಟ್ ಕೆನಾಲ್‌ನೊಂದಿಗೆ ಮರು ಚಿಕಿತ್ಸೆ ನೀಡುವುದುಹಲ್ಲನ್ನು ತೆಗೆದುಹಾಕುವುದು, ಅದನ್ನು ಇಂಪ್ಲಾಂಟ್ ಅಥವಾ ಬ್ರಿಡ್ಜ್‌ನೊಂದಿಗೆ ಬದಲಾಯಿಸುವುದು ಸೇರಿವೆ.

**ಬಾಯಿಯ ಸೋಂಕಿನಿಂದ ಹೃದಯದ ಅಪಾಯ:** ರೂಟ್ ಕೆನಾಲ್‌ಗಳು ಹೃದಯಾಘಾತಕ್ಕೆ ಕಾರಣವಾಗುತ್ತವೆ ಎಂದು ಅನೇಕ ಜನರು ಭಾವಿಸುತ್ತಾರೆ. ಆದಾಗ್ಯೂ, ರೂಟ್ ಕೆನಾಲ್ ಸ್ವತಃ ಹೃದಯಾಘಾತಕ್ಕೆ ಕಾರಣವಾಗುತ್ತದೆ ಎನ್ನಲು ಯಾವುದೇ ವೈಜ್ಞಾನಿಕ ಪುರಾವೆಗಳಿಲ್ಲ. ರೂಟ್ ಕೆನಾಲ್ ನೇರವಾಗಿ ಹೃದಯಾಘಾತಕ್ಕೆ ಕಾರಣವಾಗುವುದಿಲ್ಲ, ಆದರೆ ಬಾಯಿಯ ಸೋಂಕನ್ನು ನಿರ್ಲಕ್ಷಿಸುವುದರಿಂದ ಹೃದಯದ ಅಪಾಯ ಹೆಚ್ಚಾಗಬಹುದು. ಕಳಪೆ ಬಾಯಿಯ ಆರೋಗ್ಯ ಮತ್ತು ಹೃದಯರಕ್ತನಾಳದ ಸಮಸ್ಯೆಗಳ ನಡುವಿನ ಸಂಬಂಧವನ್ನು ತೋರಿಸುವ ಅನೇಕ ಅಧ್ಯಯನಗಳಿವೆ. ಪಿರಿಯಾಂಟೈಟಿಸ್ (ಒಸಡು ಕಾಯಿಲೆ) ನಂತಹ ಪರಿಸ್ಥಿತಿಗಳು ಹೃದಯಾಘಾತದ ಅಪಾಯವನ್ನು ಹೆಚ್ಚಿಸುತ್ತವೆ ಎಂದು ತೋರಿಸಲಾಗಿದೆ. ಸರಿಯಾಗಿ ಮಾಡಿದ ರೂಟ್ ಕೆನಾಲ್ ಸೋಂಕನ್ನು ಕಡಿಮೆ ಮಾಡುತ್ತದೆ, ಹಲ್ಲಿನ ಸೋಂಕನ್ನು ನಿರ್ಲಕ್ಷಿಸುವುದರಿಂದ ಹೃದಯದ ಅಪಾಯಗಳು ಹೆಚ್ಚಾಗಬಹುದು.

### ಹಲ್ಲಿನ ಸೋಂಕಿಗೆ ಚಿಕಿತ್ಸೆ ನೀಡದಿದ್ದರೆ ಏನಾಗುತ್ತದೆ

**ಪ್ರಮುಖ ಕಾಳಜಿಯೆಂದರೆ ಚಿಕಿತ್ಸೆ ನೀಡದ ಸೋಂಕುಗಳು, ಕಾರ್ಯವಿಧಾನವಲ್ಲ. ವಾಸ್ತವವಾಗಿ, ರೂಟ್ ಕೆನಾಲ್‌ಗಳು ಹೃದಯರಕ್ತನಾಳದ ಅಪಾಯಗಳನ್ನು ಹೆಚ್ಚಿಸುವ ಸೋಂಕುಗಳನ್ನು ತಡೆಯಬಹುದು. ರೂಟ್ ಕೆನಾಲ್ ಸಮಯದಲ್ಲಿ, ಸೋಂಕಿತ ಹಲ್ಲಿನ ಬ್ಯಾಕ್ಟೀರಿಯಾವನ್ನು ತೆಗೆದುಹಾಕಲಾಗುತ್ತದೆ. ಸಂಪೂರ್ಣವಾಗಿ ಸ್ವಚ್ಛಗೊಳಿಸದಿದ್ದರೆ ಅಥವಾ ಸೋಂಕು ಹರಡಿದರೆ, ಬಾಯಿಯ ಬ್ಯಾಕ್ಟೀರಿಯಾಗಳು ರಕ್ತಪ್ರವಾಹಕ್ಕೆ ಪ್ರವೇಶಿಸಬಹುದು. ಇದು ರಕ್ತನಾಳಗಳಲ್ಲಿ ಉರಿಯೂತವನ್ನು ಉಂಟುಮಾಡಬಹುದು, ಇದು ನಂತರ ಹೃದಯ ಕಾಯಿಲೆಗೆ ಕಾರಣವಾಗಬಹುದು.**

**ಈಗಾಗಲೇ ಹೃದಯದ ಸಮಸ್ಯೆ ಇರುವವರು ಎಚ್ಚರದಿಂದಿರಬೇಕು:** ಅಸ್ತಿತ್ವದಲ್ಲಿರುವ ಹೃದಯ ಸಮಸ್ಯೆ ಅಥವಾ ಕೃತಕ ಹೃದಯ ಕವಾಟಗಳನ್ನು ಹೊಂದಿರುವವರು ಹಲ್ಲಿನ ಬ್ಯಾಕ್ಟೀರಿಯಾದಿಂದ ಸೋಂಕುಗಳಿಗೆ ಎಂಡೋಕಾರ್ಡಿಟಿಸ್ ನಂತಹ ಹೆಚ್ಚು ಗುರಿಯಾಗಬಹುದು.



ತೊಡಕುಗಳನ್ನು ತಡೆಗಟ್ಟಲು ದಂತ ವೈದ್ಯರು ಸಾಮಾನ್ಯವಾಗಿ ಅಂತಹ ಸಂದರ್ಭಗಳಲ್ಲಿ ಕಾರ್ಯವಿಧಾನಗಳ ಮೊದಲು ಆಂಟಿಬಯೋಟಿಕ್‌ಗಳನ್ನು ಶಿಫಾರಸು ಮಾಡುತ್ತಾರೆ. ಹಲ್ಲಿನ ಕೊಳೆತ ಮತ್ತು ಒಸಡು ಕಾಯಿಲೆಗೆ ಚಿಕಿತ್ಸೆ ನೀಡುವ ಎಲ್ಲಾ ಇತರ ವಿಧಾನಗಳ ಜೊತೆಗೆ ರೂಟ್ ಕೆನಾಲ್ ಚಿಕಿತ್ಸೆಯು ನಿಮ್ಮ ಒಟ್ಟಾರೆ ಆರೋಗ್ಯವನ್ನು ರಕ್ಷಿಸಲು ಸಹಾಯ ಮಾಡುತ್ತದೆ.

# ಕೇಂದ್ರ ಶಿಷ್ಟಾಚಾರ ಪಾಲನೆ ಮಾಡದಿದ್ರೆ ಗಣತಂತ್ರ ವ್ಯವಸ್ಥೆಗೆ ಕಪ್ಪು ಚುಕ್ಕಿ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಸರ್ಕಾರ ರಾಜ್ಯಗಳ ಜೊತೆ ಫೈಟ್ ಮಾಡದೇ ಶಿಷ್ಟಾಚಾರ ಪಾಲನೆ ಮಾಡಬೇಕು ಎಂದು ಕೇಂದ್ರದ ವಿರುದ್ಧ ಸಚಿವ ಮಹದೇವಪ್ಪ ವಾಗ್ದಾಳಿ ನಡೆಸಿದರು.

ಸಿಗಂದೂರು ಸೇತುವೆ ಉದ್ಘಾಟನೆ ಕಾರ್ಯಕ್ರಮದಲ್ಲಿ ಕೇಂದ್ರ ಸರ್ಕಾರದಿಂದ ಶಿಷ್ಟಾಚಾರ ಉಲ್ಲಂಘನೆ ಹಿನ್ನೆಲೆ ಪ್ರಧಾನಿ ಮೋದಿಗೆ ಸಿಎಂ ಪತ್ರ ಬರೆದ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಕೇಂದ್ರ ಸರ್ಕಾರ ಶಿಷ್ಟಾಚಾರ ಪಾಲನೆ ಮಾಡಬೇಕು.



> **ರಾಜ್ಯ ಸರ್ಕಾರವೇ ನಿರ್ಧಾರ ಮಾಡಿ, ಸೇತುವೆ ಆಗಬೇಕು ಎಂದಿದ್ದರು. ನಮ್ಮ ಮನವಿ ಮೇಲೆ ಕೇಂದ್ರ ಕೆಲಸ ಮಾಡಲು ಒಪ್ಪಿಗೆ ನೀಡಿತ್ತು. ಸೇತುವೆ ಆಗಬೇಕು ಅಂತ ನಿರ್ಧಾರ ಮಾಡಿದ್ದೇ ಸಿದ್ದರಾಮಯ್ಯ ಸರ್ಕಾರ. ನಾವು ಒಕ್ಕೂಟ ವ್ಯವಸ್ಥೆಯಲ್ಲಿ ಇದ್ದೇವೆ. ಅಭಿವೃದ್ಧಿ ವಿಷಯದಲ್ಲಿ ಫೈಟ್ ಮಾಡೋ ಅವಶ್ಯಕತೆ ಇಲ್ಲ. ನಾವೇ ಕ್ರೆಡಿಟ್ ತಗೋಬೇಕು ಅಂತ ಮಾಡಬಾರದು ಎಂದು ಕಿಡಿಕಾರಿದರು.**

ಸಿಗಂದೂರು ಸೇತುವೆ ಮಾಡಿರುವುದು ಐತಿಹಾಸಿಕ ಕೆಲಸ. ಇದನ್ನು ಸ್ವಾಗತ ಮಾಡಬೇಕು. 2013–18ವರೆಗೆ ನಾನು ಲೋಕೋಪಯೋಗಿ ಇಲಾಖೆಯ ಸಚಿವನಾಗಿದ್ದೆ. ಆಗ ಯಡಿಯೂರಪ್ಪ ನನಗೆ ಸೇತುವೆ ಮಾಡಿಕೊಡಿ ಅಂತ ಕೇಳಿದ್ದರು. ಕಾಗೋಡು ತಿಮ್ಮಪ್ಪ ಕೂಡ ಮನವಿ ಮಾಡಿದ್ದರು. 2013–18ರ ನಡುವೆ ಕರ್ನಾಟಕ ರೋಡ್ ಡೆವಲಪ್ಮೆಂಟ್ ಕಾರ್ಪೋರೇಷನ್‌ನಿಂದ ಡಿಪಿಆರ್‌ನ್ನು (ಯೋಜನೆಯ ವಿವರವಾದ ವರದಿ) ತಯಾರಿ ಮಾಡಿದ್ದೆವು. ಬಳಿಕ ಗಡ್ಕರಿ ಅವರನ್ನು ಭೇಟಿ ಮಾಡಿ, ನ್ಯಾಷನಲ್ ಹೈವೆ ಅಥವಾ ಸಾಗರಮಾಲ ಯೋಜನೆ ಮಾಡಿ ಕೊಡಿ ಎಂದು ಕೇಳಿದ್ದೆ ಎಂದು ಇತಿಹಾಸ ತಿಳಿಸಿದರು. ಕಾರ್ಯಕ್ರಮಗಳನ್ನ ಶಿಷ್ಟಾಚಾರದ ಪ್ರಕಾರ ಮಾಡಬೇಕು. ಸಿಎಸ್‌ಗೆ ಪತ್ರ ಬರೆದು ಸಿಎಂ ಸಮಯ ಪಡೆದು ಕಾರ್ಯಕ್ರಮ ಮಾಡಬೇಕಿತ್ತು. ಸಿಎಂ ಬೇಡ ನಾವೇ ಕಾರ್ಯಕ್ರಮ ಮಾಡ್ತೀವಿ ಅಂದ್ರೆ, ಅದು ಗಣತಂತ್ರ ವ್ಯವಸ್ಥೆಗೆ ಕಪ್ಪು ಚುಕ್ಕಿ. ಸಿಎಂ ಸಮಯ ನೋಡಿಕೊಂಡು ಸಮನ್ವಯದಿಂದ ಕೆಲಸ ಮಾಡಬೇಕು. ಫೈಟ್ ಮಾಡೋದ್ರಿಂದ ಏನು ಪ್ರಯೋಜನ ಇಲ್ಲ. ಇದು ಪ್ರಜಾಪ್ರಭುತ್ವ ಅಲ್ಲ ಎಂದು ಆಕ್ರೋಶ ಹೊರಹಾಕಿದರು. ಸಮಾಜ ಕಲ್ಯಾಣ ಇಲಾಖೆಯಲ್ಲಿನ ಬ್ಯಾಗ್ ಲಾಗ್ ಹುದ್ದೆ ಮುಂಬಡ್ತಿ ನೀಡಲು ನಿಯಮಗಳು ಪಾಲನೆ ಆಗ್ತಿಲ್ಲ ಅಂತ ಎಐಸಿಸಿ ಅಧ್ಯಕ್ಷರು ಸಿಎಂಗೆ ಪತ್ರ ಬರೆದಿರುವ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಎಐಸಿಸಿ ಅಧ್ಯಕ್ಷರು ಸಿಎಂಗೆ ಪತ್ರ ಬರೆದಿರೋದು ನನಗೆ ಗೊತ್ತಿಲ್ಲ.

# ರಾಮಾಯಣ



## ಭರತನು ಶ್ರೀ ರಾಮನ ಆಶ್ರಮವನ್ನು ಕಂಡದ್ದು

• ಹಿಂದಿನ ಸಂಚಿಕೆಯಿಂದ

97ನೆಯ ಅಧ್ಯಾಯ

ಮುಂದೆ ಹೋಗಿ ಮನೋಹರವಾದ ಪರ್ಣಶಾಲೆಯನ್ನು ಕಂಡನು. ಆ ಪರ್ಣಶಾಲೆಯು ಸಾಲ ತಾಲ ಮುಂತಾದ ಮರಗಳ ಎಲೆಗಳಿಂದ ಆಚ್ಛಾದಿತವಾಗಿತ್ತು. ಭೀಕರಗಳಾದ ದಿವ್ಯ ಧನುಸ್ಸುಗಳು ತೂಗುಹಾಕಲ್ಪಟ್ಟಿದ್ದವು. ಸರ್ಪಗಳಂತೆ ಕಂಗೊಳಿಸುವ ಭಯಂಕರಾಸ್ತ್ರಗಳಿಂದ ತುಂಬಿದ ಬತ್ತಳಿಕೆಗಳು ಅಲ್ಲಿ ಶೋಭಿಸುತ್ತಿದ್ದವು. ಉತ್ತಮವಾದ 2 ಖಡ್ಗಗಳೂ ಢಾಲುಗಳೂ ವಿರಾಜಿಸುತ್ತಿದ್ದವು. ಪೂರ್ವೋತ್ತರವಾಗಿ ವಿರಚಿತವಾದ ಒಂದು ಅಗ್ನಿವೇದಿಯು ಆಶ್ರಮದಲ್ಲಿ ಭರತನಿಗೆ ಗೋಚರಿಸಿತು. ಮರುಕ್ಷಣದಲ್ಲಿ ವೇದಿಕೆಯ ಬಳಿ ವೀರಾಸನದಲ್ಲಿ ಮಂಡಿಸಿ ಅಗ್ನಿಯಂತೆ ಪ್ರಜ್ವಲಿಸುತ್ತಿದ್ದ ಶ್ರೀರಾಮನನ್ನು ಭರತನು ಕಂಡನು. ಕೂಡಲೇ ಭರತನು ಅತ್ಯಂತ ಶೋಕಾವಿಷ್ಟನಾಗಿ ರೋದನ ಮಾಡುತ್ತ ಹಂಬಲಿಸುತ್ತ ಬಿಕ್ಕುತ್ತ ಮಾತಾಡುವುದಕ್ಕೆ ಶಕ್ತಿಯಿಲ್ಲದೆ ಸ್ವರಗುಂದಿ ಮೆಲ್ಲಗೆ ಅಕಟಕಟಾ! ಅಯೋಧ್ಯಾ ಪಟ್ಟಣದಲ್ಲಿ ಆಸ್ಥಾನಮಂಟಪದಲ್ಲಿ ಸಿಂಹಾಸನದಲ್ಲಿ ಕುಳಿತುಕೊಂಡು ಸಮಸ್ತ ಪ್ರಧಾನರೊಡನ ವಿರಾಜಿಸಬೇಕಾಗಿದ್ದ ಶ್ರೀರಾಮನನ್ನು ಈ ವನದಲ್ಲಿ ಪರ್ಣಶಾಲೆಯಲ್ಲಿ ಮೃಗಪಕ್ಷಿಗಳ ಮಧ್ಯದಲ್ಲಿ ಕಾಣುವಹಾಗಾಯಿತಲ್ಲ ದಿವ್ಯವಾದ ವಸ್ತ್ರಗಳಿಂದ ಅಲಂಕರಿಸಿಕೊಂಡಿದ್ದ ಈ ಸ್ವಾಮಿಯು ಮೃಗಗಳ ಚರ್ಮವನ್ನು ಧರಿಸಿಕೊಂಡಿರುವುದನ್ನು ಕಂಡೆನಲ್ಲ ಪರಿಮಳಯುಕ್ತವಾಗಿ ನಾನಾವಿಧವಾದ ಪುಷ್ಪಮಾಲಿಕೆಗಳನ್ನು ಮುಡಿಯಲ್ಲಿ ಧರಿಸುತ್ತಿದ್ದವನು ಜಟಾಭಾರವನ್ನು ಧರಿಸಿ ಕೊಂಡು ಇರಬೇಕಾಯಿತಲ್ಲ ಅನೇಕ ಯಜ್ಞಾದಿಗಳನ್ನು ಮಾಡಿ ಬ್ರಾಹ್ಮಣರಿಗೆ ಬೇಕಾದ ವಸ್ತುಗಳನ್ನು ಕೊಟ್ಟು ಧರ್ಮಸಂಗ್ರಹಮಾಡುತ್ತಿದ್ದ ಈ ಮಹಾತ್ಮನು ವನಮಧ್ಯದಲ್ಲಿ ಕೃಷ್ಣಾಜಿನವನ್ನು ಹೊದ್ದು ಶರೀರದಂಡನೆಯಿಂದ ತಪಸ್ಸು ಮಾಡುತ್ತ ಧರ್ಮಸಂಗ್ರಹ ಮಾಡುವಂತಾಯಿತಲ್ಲ! ಈ ದುಃಖಗಳೆಲ್ಲಾ ನನ್ನಿಂದಲೇ ಉಂಟಾದವು. ಲೋಕದಲ್ಲಿ ' ಭರತನು ರಾಜ್ಯಾಧಿಪತ್ಯದ ನಿಮಿತ್ತವಾಗಿ ಅಣ್ಣನನ್ನು ದೇಶತ್ಯಾಗ ಮಾಡಿಸಿ ಹೊರಡಿಸಿದನು' ಎಂಬ ಅಪಕೀರ್ತಿಗೆ ಗುರಿಯಾದ ನನ್ನ ಶರೀರವನ್ನು ಸುಡಬೇಕು ಎಂದುಕೊಂಡನು. ಭರತನು ಮುಖಬೆವರಿಟ್ಟು ಕಂಗೆಟ್ಟು ಶ್ರೀರಾಮನ ಪಾದಗಳನ್ನು ಮುಟ್ಟಬೇಕೆಂದು ಧಾವಿಸಿದನು.

ಭರತನು ಅಣ್ಣಾ ಎಂದು ಒಂದುಸಾರಿ ನುಡಿದು ಮತ್ತೇನನ್ನೂ ನುಡಿಯಲಾರದೆ ಮಧ್ಯದಲ್ಲಿಯೇ ಚೈತನ್ಯಗುಂದಿ ನೆಲಕ್ಕುರುಳಿದನು. ಶತ್ರುಘ್ನನು ರೋದನ ಮಾಡುತ್ತ, ಶ್ರೀರಾಮನಿಗೆ ಸಾಷ್ಟಾಂಗವೆರಗಿದನು. ಆಗ ಶ್ರೀರಾಮನು ಅವರಿಬ್ಬರನ್ನೂ ತಬ್ಬಿಕೊಂಡು ತಾನೂ ಕಣ್ಣೀರು ಬಿಡಲಾರಂಭಿಸಿದನು. ಆಮೇಲೆ ಸುಮಂತ್ರನೂ ಗುಹನೂ ಶ್ರೀರಾಮನಿಗೆ ಅಭಿವಂದಿಸಿ ಕಣ್ಣೀರು ಬಿಡತೊಡಗಿದರು. ಇವರನ್ನು ಕಂಡ ತಪಸ್ವಿಗಳೆಲ್ಲರೂ ಕಣ್ಣೀರು ಸುರಿಸಿದರು. **ಶ್ರೀರಾಮನು ಭರತನಿಗೆ ಹೇಳಿದ ರಾಜ ನೀತಿ:** ಆಮೇಲೆ ಶ್ರೀರಾಮನು ನಾರುಬಟ್ಟೆಯನ್ನುಟ್ಟು ಜಡೆಗಳನ್ನು ಧರಿಸಿಕೊಂಡು ಕೈಮುಗಿದು ಕೊಂಡು ತೇಜಸ್ವಿಯಾದ ಸೂರನಂತೆ ಭೂಮಿಯಮೇಲೆ ಬಿದ್ದಿದ್ದ ಭರತನ ವಿವರ್ಣವಾದ ಮುಖವನ್ನೂ ಕೃಶವಾದ ಶರೀರವನ್ನೂ ಕಂಡನು.

ಮುಂದುವರಿಯುವುದು...

# 10 ಎಕರೆ ವಿಸ್ತೀರ್ಣದ ಜೌಗು ಪ್ರದೇಶ ನಿರ್ಮಾಣ



• ಉದಯವಾಹಿನಿ, ಬೆಂಗಳೂರು

ಬ್ರ್ಯಾಂಡ್ ಬೆಂಗಳೂರು ಉಪಕ್ರಮದಡಿಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬ್ಯಾಟರಾಯನಪುರ ಜಕ್ಕೂರು ಕೆರೆ ಬಳಿ 10 ಎಕರೆ ವಿಸ್ತೀರ್ಣದ ಜೌಗು ಪ್ರದೇಶ'ವನ್ನು ಅಭಿವೃದ್ಧಿಪಡಿಸಿದ್ದು, ಈ ಮೂಲಕ ತ್ಯಾಜ್ಯ ನೀರು ಕೆರೆ ಸೇರುವುದಕ್ಕೂ ಮೊದಲು ಅದನ್ನು ಸಂಸ್ಕರಿಸುವ ಕೆಲಸವನ್ನು ಮಾಡಲು ಮುಂದಾಗಿದೆ. ಪ್ರಸ್ತುತ ಅಭಿವೃದ್ಧಿಪಡಿಸಿರುವ ಈ ಜೌಗು ಪ್ರದೇಶವು ಪ್ರತಿ ನಿತ್ಯ ಸುಮಾರು 7 ಮಿಲಿಯನ್ ಲೀಟರ್ ತ್ಯಾಜ್ಯ ನೀರನ್ನು ಸಂಸ್ಕರಿಸುತ್ತದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಜೌಗು ಪ್ರದೇಶ ಸೇರಿದಂತೆ 163 ಎಕರೆ ವಿಸ್ತೀರ್ಣದ ಕೆರೆಯು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವಶದಲ್ಲಿತ್ತು. 2015 ರಲ್ಲಿ ಕೆರೆಯನ್ನು ಬಿಬಿಎಂಪಿಗೆ ವರ್ಗಾಯಿಸಲಾಯಿತು. ಆದಾಗ್ಯೂ, 30 ಎಕರೆ ಕೆರೆ ಪ್ರದೇಶವನ್ನು ಅತಿಕ್ರಮಿಸಿ ತೆಂಗಿನ ಮರಗಳನ್ನು ನೆಡಲಾಗಿತ್ತು. ನಂತರ ಈ 30 ಎಕರೆಗಳನ್ನು ಮರಳಿ ಪಡೆದು, ಬೇಲಿ ಹಾಕಲಾಯಿತು. ಕೆರೆ ಬಳಿ ಯಾವುದೇ ಜೌಗು ಪ್ರದೇಶವಿಲ್ಲದ ಕಾರಣ, 10 ಎಕರೆ ಭೂಮಿಯಲ್ಲಿ ಕೃತಕ ಜೌಗು ಪ್ರದೇಶವನ್ನು ಅಭಿವೃದ್ಧಿಪಡಿಸಲಾಯಿತು. ಆರು ತಿಂಗಳ ಹಿಂದೆ ಕೆಸರು ತೆಗೆದು ಜೌಗು ಪ್ರದೇಶವನ್ನು ಆಳಗೊಳಿಸುವ ಕೆಲಸವನ್ನು ಕೈಗೆತ್ತಿಕೊಳ್ಳಲಾಗಿತ್ತು. ಈ ಜೌಗು ಪ್ರದೇಶವು ಘನವಸ್ತುಗಳನ್ನು ಹಿಡಿದಿಟ್ಟುಕೊಂಡು, ಪೊಟ್ಯಾಸಿಯಮ್ ಮತ್ತು ಸಾರಜನಕ ಮಟ್ಟವನ್ನು ಕಡಿಮೆ ಮಾಡುತ್ತದೆ. ಕೆರೆಯಲ್ಲಿ ಆಮ್ಲಜನಕ ಮಟ್ಟವನ್ನು ಹೆಚ್ಚಿಸುತ್ತದೆ. ಒಟ್ಟಾರೆ ಯೋಜನೆಗೆ 5 ಕೋಟಿ ರೂಪಾಯಿ ವೆಚ್ಚಾಗಿದೆ. ಕೆರೆಗೆ ನೀರು ಹರಿಯುವುದನ್ನು ಸುಧಾರಿಸಲು ಮುಂದಿನ ದಿನಗಳಲ್ಲಿ ಹೆಚ್ಚಿನ ಸಸ್ಯಗಳನ್ನು ಜೌಗು ಪ್ರದೇಶಕ್ಕೆ ಸೇರಿಸಲಾಗುವುದು ಎಂದು ಅಧಿಕಾರಿಯೊಬ್ಬರು ನೀಡಿದ್ದಾರೆ.

# ಮಧುಮೇಹಿಗಳು ಗೋಧಿ ಸೇವಿಸಬಹುದಾ...?



ಭಾರತದಲ್ಲಿ ಗೋಧಿಯನ್ನು ಹೆಚ್ಚಾಗಿ ಬಳಸಲಾಗುತ್ತದೆ. ಭಾರತೀಯರು ಪ್ರತಿದಿನ ಚಪಾತಿ, ಪರಾಠ ಥೆಪ್ಲಾ, ಬ್ರೆಡ್, ಪಾಸ್ತಾ, ಬಿಸ್ಕತ್ತುಗಳ ರೂಪದಲ್ಲಿ ಗೋಧಿಯನ್ನು ಸೇವಿಸುತ್ತೇವೆ. ಇದು ಸಾಮಾನ್ಯವಾಗಿ ಬಳಸುವ ಧಾನ್ಯಗಳಲ್ಲಿ ಒಂದಾಗಿದ್ದರೂ, ಗೋಧಿಯನ್ನು ಮಧುಮೇಹಿಗಳಿಗೆ ಅಕ್ಕಿಗಿಂತ ಆರೋಗ್ಯಕರ ಧಾನ್ಯವೆಂದು ಪರಿಗಣಿಸಲಾಗುತ್ತದೆ. ಗೋಧಿ ಉತ್ತಮ ಜೀರ್ಣಕ್ರಿಯೆಗೆ ಸಹಾಯ ಮಾಡುತ್ತದೆ ಮತ್ತು ಹೃದಯರಕ್ತನಾಳದ ಕಾಯಿಲೆಗಳನ್ನು ತಡೆಯುತ್ತದೆ. ಅಷ್ಟೇ ಅಲ್ಲದೆ ಆರೋಗ್ಯಕರ ತೂಕವನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ.

**ಬಹುತೇಕರಲ್ಲಿದೆ ಈ ಪ್ರಶ್ನೆ:** ಕೆಲವರು ಮಧುಮೇಹಿಗಳಿಗೆ ಗೋಧಿ ಒಳ್ಳೆಯದಲ್ಲ ಎನ್ನುತ್ತಾರೆ

ಹಾಗಾದ್ರೆ, ಮಧುಮೇಹಿಗಳು ಗೋಧಿಯಿಂದ ತಯಾರಿಸಿದ ಆಹಾರ ತಿನ್ನಬಾರದೇ ಎನ್ನುವ ಪ್ರಶ್ನೆ ಬಹುತೇಕರಲ್ಲಿದೆ. ಗೋಧಿ ನೀಡುವ ಪ್ರಯೋಜನಗಳ ಹೊರತಾಗಿ ಗೋಧಿಯ ಪೌಷ್ಟಿಕಾಂಶದ ಮೌಲ್ಯ ಮತ್ತು ಅದು ರಕ್ತದಲ್ಲಿನ ಗ್ಲುಕೋಸ್ ಮಟ್ಟದ ಮೇಲೆ ಹೇಗೆ ಪರಿಣಾಮ ಬೀರುತ್ತದೆ ಎಂಬುದನ್ನು ನ್ಯೂಟ್ರಿಷಿಯನಿಸ್ಟ್ ಶಿಲ್ಪಾ ಜೋಶಿ ಅವರಿಂದ ತಿಳಿಯೋಣ.

**ಗೋಧಿಯಲ್ಲಿರುವ ಪೋಷಕಾಂಶಗಳು:** ಗೋಧಿಯ ಗ್ಲೈಸೆಮಿಕ್ ಸೂಚ್ಯಂಕ 45 ಆಗಿದ್ದರೆ, ಅದರ ಗ್ಲೈಸೆಮಿಕ್ ಲೋಡ್ 26.8 ಆಗಿದೆ. ಗೋಧಿಯ ಕಡಿಮೆ ಗ್ಲೈಸೆಮಿಕ್ ಸೂಚ್ಯಂಕವು ಮಧುಮೇಹ ಇರುವವರಿಗೆ ಉತ್ತಮ ಆಯ್ಕೆಯಾಗಿದೆ. ಗೋಧಿಯಲ್ಲಿ ಕಾರ್ಬೋಹೈಡ್ರೇಟ್ ಅಂಶದಿಂದಾಗಿ ನೀವು ಸೇವಿಸುವ ಗೋಧಿಯ ಪ್ರಮಾಣವನ್ನು ನೀವು ಗಮನಿಸಬೇಕು. ನಿಮ್ಮ ಗೋಧಿ ಸೇವನೆಯನ್ನು ಟ್ರ್ಯಾಕ್ ಮಾಡುವುದರ ಜೊತೆಗೆ, ನಿಮ್ಮ ಸಂಪೂರ್ಣ ಊಟದ ಗ್ಲೈಸೆಮಿಕ್ ಲೋಡ್ ಅನ್ನು ಕಡಿಮೆ ಮಾಡಲು ನಿಮ್ಮ ಆಹಾರದಲ್ಲಿ ಸಾಕಷ್ಟು ಫೈಬರ್ ಪ್ರೋಟೀನ್‌ಗಳನ್ನು ಸೇರಿಸುವುದನ್ನು ನೀವು ಖಚಿತ ಪಡಿಸಿಕೊಳ್ಳಬೇಕು. ನ್ಯೂಟ್ರಿಶನ್ ರೀಟ ಕೂಡ ಇದನ್ನೇ ಹೇಳುತ್ತಾರೆ

**ಗೋಧಿ ಹಿಟ್ಟನ್ನು ಹೆಚ್ಚು ಶೋಧಿಸಬಾರದು:** ಗೋಧಿ ಹಿಟ್ಟನ್ನು ಹೆಚ್ಚು ಶೋಧಿಸುವುದರಿಂದ ಗೋಧಿ ಹಿಟ್ಟಿನಲ್ಲಿರುವ ನಾರಿನ ಅಂಶವನ್ನು ಕಡಿಮೆ ಮಾಡುವುದರಿಂದ ನೀವು ಹಿಟ್ಟನ್ನು ಹೆಚ್ಚು ಶೋಧಿಸಬಾರದು. ಇದರ ನಾರಿನ ಅಂಶವು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನೇರವಾಗಿ ಪರಿಣಾಮ ಬೀರುವ ಗ್ಲೈಸೆಮಿಕ್ ಸೂಚಿಯನ್ನು ಕಡಿಮೆ ಮಾಡುತ್ತದೆ. ಗೋಧಿಯನ್ನು ಕಡಿಮೆ ಸಂಸ್ಕರಿಸಿದಷ್ಟೂ, ರಕ್ತದಲ್ಲಿನ ಸಕ್ಕರೆಯನ್ನು ನಿಯಂತ್ರಿಸಲು ಅದು ಉತ್ತಮ ಆಯ್ಕೆಯಾಗಿದೆ.

**ಅಕ್ಕಿಗಿಂತ ಉತ್ತಮ:** ಬಹುತೇಕ ಎಲ್ಲಾ ಭಾರತೀಯ ಮನೆಗಳಲ್ಲಿ ಗೋಧಿ ಒಂದು ಪ್ರಮುಖ ಧಾನ್ಯವಾಗಿರುವುದರಿಂದ ಮಧುಮೇಹಕ್ಕೆ ಗೋಧಿಯ ಪರಿಣಾಮವನ್ನು ಅರ್ಥಮಾಡಿಕೊಳ್ಳುವುದು ಬಹಳ ಮುಖ್ಯ. ಸಂಪೂರ್ಣ ಗೋಧಿ ಹಿಟ್ಟು ಅಕ್ಕಿಯಷ್ಟು ರಕ್ತದಲ್ಲಿನ ಗ್ಲೂಕೋಸ್ ಮಟ್ಟವನ್ನು ಹೆಚ್ಚಿಸುವುದಿಲ್ಲ. ಗ್ಲೂಕೋಸ್ ಮಟ್ಟಗಳು ಮತ್ತು ದೇಹದ ಕೊಬ್ಬಿನ ಮಟ್ಟವನ್ನು ನಿರ್ವಹಿಸುವುದರ ಜೊತೆಗೆ ಕೆಲವೊಂದು ಪ್ರಯೋಜನಗಳನ್ನು ಹೊಂದಿದೆ.

**ಮಧುಮೇಹಿಗಳು ಗೋಧಿಯನ್ನು ಯಾವ ರೀತಿ ಅಡುಗೆಗೆ ಬಳಸಬೇಕು:** ಜಗತ್ತಿನಾದ್ಯಂತ ಅತ್ಯಂತ ಜನಪ್ರಿಯವಾದ ಧಾನ್ಯವಾದ ಗೋಧಿಯನ್ನು ಮಧುಮೇಹಿಗಳು ಹಲವು ವಿಧಗಳಲ್ಲಿ ಸೇವಿಸಬಹುದು.

**ರೋಟಿ/ಚಪಾತಿ:** ಸಾಮಾನ್ಯವಾಗಿ ಗೋಧಿ ಹಿಟ್ಟನ್ನು ರೋಟಿ ಅಥವಾ ಚಪಾತಿ ತಯಾರಿಸಲು ಬಳಸಲಾಗುತ್ತದೆ.

**ದಲಿಯಾ:** ಮುರಿದ ಗೋಧಿಯಿಂದ ತಯಾರಿಸಿದ ಫೈಬರ್-ಭರಿತ ಏಕದಳ, ಡಾಲಿಯಾ ಒಂದು ಪೌಷ್ಟಿಕ ಮತ್ತು ಹೊಟ್ಟೆ ತುಂಬಿಸುವ ಆಹಾರ ಆಯ್ಕೆಯಾಗಿದೆ.

**ಆರೋಗ್ಯಕರ ಕೇಕ್‌ಗಳು:** ಸಕ್ಕರೆ ಮತ್ತು ಎಣ್ಣೆಯನ್ನು ಬದಲಿಸಲು ಸ್ಟೀವಿಯಾ ಮತ್ತು ಮೊಸರಿನಂತಹ ನೈಸರ್ಗಿಕ ಸಿಹಿಕಾರಕಗಳೊಂದಿಗೆ ಕ್ಯಾರೆಟ್ ಕೇಕ್‌ಗಳನ್ನು ತಯಾರಿಸಲು ಸಂಪೂರ್ಣ ಗೋಧಿ ಹಿಟ್ಟನ್ನು ಬಳಸಬಹುದು.

### ಮಧುಮೇಹಿಗಳಿಗೆ ಗೋಧಿಯ ಇತರ ಆರೋಗ್ಯ ಪ್ರಯೋಜನಗಳೇನು?

- **ದೀರ್ಘಕಾಲದ ಕಾಯಿಲೆಗಳ ಅಪಾಯವನ್ನು ಕಡಿಮೆ ಮಾಡುತ್ತದೆ.**
- **ನಿಮ್ಮ ಹೃದಯದ ಆರೋಗ್ಯವನ್ನು ನಿರ್ವಹಿಸಲು ಸಹಾಯ ಮಾಡುತ್ತದೆ.**
- **ಗೋಧಿಯಲ್ಲಿ ಹೆಚ್ಚಿನ ನಾರಿನ ಅಂಶವು ಹೊಟ್ಟೆ ಖಾಲಿಯಾಗುವುದನ್ನು ವಿಳಂಬಗೊಳಿಸುತ್ತದೆ. ಇದು ದೀರ್ಘಕಾಲದವರೆಗೆ ನಿಮಗೆ ಹೊಟ್ಟೆ ತುಂಬಿರುವ ಭಾವನೆಯನ್ನು ನೀಡುತ್ತದೆ.**
- **ಕ್ಯಾನ್ಸರ್ ಬರುವ ಅಪಾಯವನ್ನು ಕಡಿಮೆ ಮಾಡುತ್ತದೆ. ಮೂಳೆಗಳನ್ನು ಬಲಪಡಿಸುತ್ತದೆ.**

## ಸೋರುತ್ತಿದೆ 'ಸೊಕ್ಕೆ' ಸರ್ಕಾರಿ ಶಾಲೆ: ವಿದ್ಯಾರ್ಥಿಗಳ ಮೇಲೆ ಪ್ರತಿಕೂಲ ಪರಿಣಾಮ

• ಉದಯವಾಹಿನಿ ಅಜ್ಜಂಪುರ

ಶತಮಾನೋತ್ಸವದ ಹೊಸ್ತಿಲಿನಲ್ಲಿ ಇರುವ ತಾಲ್ಲೂಕಿನ ಸೊಕ್ಕೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಈಗ ಹಲವು ಕೊರತೆಗಳ ನಡುವೆ ನರಳುತ್ತಿದೆ. ಸೋರುವ ಮೇಲ್ಛಾವಣಿ, ಶಿಥಿಲಾವಸ್ಥೆಗೆ ತಲುಪಿರುವ ಗೋಡೆಗಳು, ಕಿತ್ತು ಬಂದಿರುವ ನೆಲಹಾಸಿನ ನಡುವೆ ವಿದ್ಯಾರ್ಥಿಗಳು ಪಾಠ ಕಲಿಯುತ್ತಿದ್ದಾರೆ.

ಸ್ವಾತಂತ್ರ್ಯ ಪೂರ್ವದಿಂದ ಇರುವ ಈ ಗ್ರಾಮದ ಹಿರಿಯ ಪ್ರಾಥಮಿಕ ಶಾಲೆಗೆ ತನ್ನದೇ ಇತಿಹಾಸವಿದೆ. ಅದರ ಜತೆಗೆ ಗುಣಮಟ್ಟದ ಶಿಕ್ಷಣದಿಂದಾಗಿ ಇಂದಿಗೂ ವಿದ್ಯಾರ್ಥಿಗಳ ಸಂಖ್ಯೆಯನ್ನು ಕಡಿಮೆ ಮಾಡಿಕೊಂಡಿಲ್ಲ. ಇಂಗ್ಲಿಷ್ ಮಾಧ್ಯಮ ಹಾಗೂ ಗುಣಮಟ್ಟದ ಶಿಕ್ಷಣದಿಂದ ಖಾಸಗಿಸ ಶಾಲೆಗೂ ಪೈಪೋಟಿ ನೀಡುತ್ತಿದೆ. ಎಲ್‌ಕೆಜಿ ಮತ್ತು ಯುಕೆಜಿ 62, 1ರಿಂದ 7ನೇ ತರಗತಿವರೆಗಿನ 280 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಆದರೆ, ಸೋರುವ ಚಾವಣಿ ಕೆಳಗೆ



ಉದಯವಾಹಿನಿ ಚಿತ್ರ

ವಿದ್ಯಾರ್ಥಿಗಳು ಪಾಠ ಕೇಳುವ ದುಸ್ಥಿತಿ ನಿರ್ಮಾಣಗೊಂಡಿದೆ. ಶಾಲೆಯ ಮೂರು ಕೊಠಡಿ ಚಾವಣಿಯ ಮರಗಳು ಹುಳು ತಿಂದಿವೆ. ಆಗಲೊ- ಈಗಲೋ ಬೀಳುವ ಸ್ಥಿತಿಯಲ್ಲಿವೆ. ಬಾಗಿಲುಗಳು ಮುರಿದಿದ್ದು, ಕಿಟಕಿ ಮುಚ್ಚುವ ಸ್ಥಿತಿಯಲ್ಲಿ ಇಲ್ಲ. ಚಾವಣಿ ಹಾಳಾಗಿರುವುದರಿಂದ ಮಳೆಯಲ್ಲಿ ಗೋಡೆಗಳ ಮೇಲೆಯೇ ನೀರು ಸೋರಿ ಹರಿಯುತ್ತಿದೆ. ಇದರಿಂದಾಗಿ ಗೋಡೆ ಗಳೂ ಶಿಥಿಲಗೊಂಡಿದ್ದು, ವಿದ್ಯಾರ್ಥಿಗಳು ಭಯದಲ್ಲಿ ಕೊಠಡಿಯೊಳಗೆ ಕುಳಿತುಕೊಳ್ಳಬೇಕಾಗಿದೆ.

**ಆಗಲೊ- ಈಗಲೋ ಬೀಳುವ ಸ್ಥಿತಿಯಲ್ಲಿ**

ನೆಲಹಾಸು ಕೂಡ ಅಲ್ಲಲ್ಲಿ ಕಿತ್ತು ಬಂದಿದ್ದು, ಸರಿಪಡಿಸುವ ಕೆಲಸ ಆಗಿಲ್ಲ. ಗ್ರಾಮೀಣ ಪ್ರದೇಶದ ಮಕ್ಕಳು ಸರ್ಕಾರಿ ಶಾಲೆಯನ್ನೇ ಆಶ್ರಯಿಸಿದ್ದಾರೆ. ಸರ್ಕಾರಿ ಶಾಲೆಗೆ ಕನಿಷ್ಠ ಮೂಲ ಸೌಕರ್ಯ ಒದಗಿಸದಿದ್ದರೆ ಹೇಗೆ ಎಂಬುದು ಪೋಷಕರ ಪ್ರಶ್ನೆ. ಗುಣಮಟ್ಟದ ಶಿಕ್ಷಣ ದೊರಕುತ್ತಿದೆ ಎಂಬ ಕಾರಣಕ್ಕೆ ಮಕ್ಕಳನ್ನು ಕಳುಹಿಸುತ್ತಿದ್ದೇವೆ. ಸೋರುವ ಮೇಲ್ಛಾವಣಿ, ಕಿತ್ತು ಬಂದಿರುವ ನೆಲಹಾಸು ಸರಿಪಡಿಸುವ ಕೆಲಸವನ್ನಾದರೂ ಸರ್ಕಾರ ಮಾಡಬೇಕು ಎಂಬುದು ಅವರ ಒತ್ತಾಯ.

ಸುತ್ತಲಿನ ಹತ್ತಾರು ಗ್ರಾಮಗಳ ವಿದ್ಯಾರ್ಥಿಗಳನ್ನು ಸೆಳೆಯುತ್ತಿರುವ ಶಾಲೆಯಲ್ಲಿ, ಆರು ಶಿಕ್ಷಕರು, ಮೂವರು ಅತಿಥಿ ಶಿಕ್ಷಕರು, ಎಸ್‌ಡಿಎಂಸಿಯಿಂದ ನೇಮಕಗೊಂಡಿರುವ ಇಬ್ಬರು ಶಿಕ್ಷಕರಿದ್ದಾರೆ. ಆದರೂ ಮುಖ್ಯಶಿಕ್ಷಕ ಸೇರಿ, ಐದು ಶಿಕ್ಷಕರ ಹುದ್ದೆಗಳು ಖಾಲಿ ಇವೆ. ಇದು ವಿದ್ಯಾರ್ಥಿಗಳ ಶಿಕ್ಷಣದ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತಿದೆ. ಕೂಡಲೇ ಈ ಬಗ್ಗೆ ಇಲಾಖೆ ಗಮನ ಹರಿಸಬೇಕು ಎಂದು ಪೋಷಕ ವೀರಭದ್ರಪ್ಪ ಒತ್ತಾಯಿಸಿದರು.

## ಮಳೆಯ ಅಬ್ಬರ ಶಾಲೆಗಳಿಗೆ ರಜೆ

• ಉದಯವಾಹಿನಿ ಮಂಗಳೂರು

ಕಳೆದ ಮೂರು ದಿನಗಳಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಡಬಿಡದೆ ಭಾರೀ ಮಳೆಯಾಗುತ್ತಿದೆ. ಉಳ್ಳಾಲ ಮತ್ತು ಬಂಟ್ವಾಳ ತಾಲ್ಲೂಕುಗಳಲ್ಲಿ ಭಾರಿ ಮಳೆಯ ಅಬ್ಬರಕ್ಕೆ ಈ 2 ತಾಲ್ಲೂಕುಗಳ ಶಾಲೆಗಳಿಗೆ ರಜೆ ಘೋಷಿಸಲಾಗಿದೆ. ಬಂಟ್ವಾಳ ಮತ್ತು ಉಳ್ಳಾಲ ತಾಲ್ಲೂಕುಗಳಲ್ಲಿ ನಿರಂತರ ಮಳೆಯಾಗುತ್ತಿರುವುದರಿಂದ, ಜುಲೈ 15 ರಂದು ಈ ತಾಲ್ಲೂಕುಗಳ ಎಲ್ಲಾ ಅಂಗನವಾಡಿ ಕೇಂದ್ರಗಳು, ಪ್ರಾಥಮಿಕ ಮತ್ತು ಪ್ರೌಢಶಾಲೆಗಳು, ಸರ್ಕಾರಿ ಅನುದಾನಿತ ಮತ್ತು ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ರಜೆ ಘೋಷಿಸಲಾಗಿದೆ ಎಂದು ತಹಶೀಲ್ದಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗಾಂಜಾ ಸೇವನೆ: ಪ್ರಕರಣ ದಾಖಲು

• ಉದಯವಾಹಿನಿ ಗೋಕರ್ಣ

ಸಾರ್ವಜನಿಕ ಸ್ಥಳದಲ್ಲಿ ಮಾದಕ ವಸ್ತುಗಳ ಗಾಂಜಾ ಸೇವನೆ ಮಾಡಿದ ಆರೋಪದ ಮೇಲೆ, ಆರೋಪಿಯನ್ನು ಪೊಲೀಸರು ವಶಕ್ಕೆ ಪಡೆದು ಕ್ರಮ ಜರುಗಿಸಿದ್ದಾರೆ. ಬಂಕಿಕೊಡ್ಲ ಸಮೀಪದ ಹನೇಹಳ್ಳಿಯ ನಿವಾಸಿ, ವಿಠಲ ನಾಗೇಶ ಗೌಡ (35) ಆರೋಪಿ. ಇಲ್ಲಿಯ ಬಂಗ್ಲೆಗುಡ್ಡದ ಸಮೀಪದ ಸಾರ್ವಜನಿಕ ರಸ್ತೆಯ ಪಕ್ಕದಲ್ಲಿ ಮಾದಕ ಪದಾರ್ಥ ಗಾಂಜಾ ಸೇವಿಸಿ, ಅಮಲಿನಲ್ಲಿ ಅಲೆದಾಡುತ್ತಿರುವಾಗ, ಪೊಲೀಸ್ ಉಪನಿರೀಕ್ಷಕ ಖಾದರ ಭಾಷ ನೇತೃತ್ವದ ಪೊಲೀಸ್ ತಂಡಕ್ಕೆ ಸಿಕ್ಕಿಬಿದ್ದಿದ್ದಾರೆ. ಸಂಶಯ ಬಂದ ಪೊಲೀಸರು ಆರೋಪಿಯನ್ನು ವಶಕ್ಕೆ ಪಡೆದು ವೈದ್ಯಕೀಯ ತಪಾಸಣೆಗೆ ಒಳಪಡಿಸಿದಾಗ ಗಾಂಜಾ ಸೇವಿಸಿದ್ದು ದೃಢ ಪಟ್ಟಿದೆ ಎಂದು ತಿಳಿಸಿದ್ದಾರೆ.

ಗೋಕರ್ಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ಕ್ರಮ ಜರುಗಿಸಿದ್ದಾರೆ.

## ಕೈಗಾರಿಕೆ ವಸಾಹತುಗಳಲ್ಲಿನ ಸಮಸ್ಯೆ ದೂರು ಸಲ್ಲಿಕೆಗೆ ಅವಕಾಶ

• ಉದಯವಾಹಿನಿ ಕಾರವಾರ

ಕೈಗಾರಿಕೆ ವಸಾಹತುಗಳಲ್ಲಿನ ಸಮಸ್ಯೆ ಸೇರಿದಂತೆ ಕೈಗಾರಿಕೋದ್ಯಮಿಗಳು ಎದುರಿಸುತ್ತಿರುವ ತೊಂದರೆಗಳ ಕುರಿತು ಜಿಲ್ಲಾ ಕೈಗಾರಿಕೆ ಕೇಂದ್ರಕ್ಕೆ ಜುಲೈ 25ರ ಒಳಗೆ ದೂರು ಸಲ್ಲಿಸಿ ಎಂದು ಜಂಟಿ ಕೈಗಾರಿಕೆ ನಿರ್ದೇಶಕ ನಾಗರಾಜ ನಾಯಕ ತಿಳಿಸಿದ್ದಾರೆ. ಕೈಗಾರಿಕೋದ್ಯಮಿಗಳು ದೂರುಗಳನ್ನು ಕಚೇರಿಯ ಇಮೇಲ್ ವಿಳಾಸಕ್ಕೆ dic.ukd123@gmail.com ಅಥವಾ ಕಚೇರಿಗೆ ಖುದ್ದು ಭೇಟಿ ನೀಡಿ ಸಲ್ಲಿಸಬಹುದು. ಬಂದ ದೂರುಗಳನ್ನು ಆಗಸ್ಟ್ ತಿಂಗಳಲ್ಲಿ ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ನಡೆಯುವ ಜಿಲ್ಲಾಮಟ್ಟದ ಏಕಗವಾಕ್ಷಿ ಒಪ್ಪಿಗೆ ಸಮಿತಿ ಸಭೆಯಲ್ಲಿ ಚರ್ಚಿಸಿ, ಪರಿಹರಿಸಲು ಕ್ರಮವಹಿಸಲಾಗುತ್ತದೆ. ಅಗತ್ಯ ಮಾಹಿತಿಗೆ ಕಚೇರಿ (08382 282302) ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಾಲೆ ಅಂಗಳದಲ್ಲೇ ಅಂತ್ಯಕ್ರಿಯೆಗೆ ಸಿದ್ಧತೆ

• ಉದಯವಾಹಿನಿ ಕೊಪ್ಪಳ

ಜಿಲ್ಲಾ ಕೇಂದ್ರದ ಸಮೀಪದಲ್ಲಿರುವ ಮಂಗಳಾಪುರದಲ್ಲಿ ಶವ ಸಂಸ್ಕಾರಕ್ಕೆ ಜಾಗವಿಲ್ಲದ ಕಾರಣ ಶಾಲೆಯ ಆವರಣದಲ್ಲಿಯೇ ಶವಸಂಸ್ಕಾರಕ್ಕೆ ಸಿದ್ಧತೆ ಮಾಡಿಕೊಂಡು ಗ್ರಾಮಸ್ಥರು ತಾಲ್ಲೂಕು ಆಡಳಿತದ ವಿರುದ್ಧ ಆಕ್ರೋಶ ಹೊರಹಾಕಿದರು.

ಸಾವಂತ್ರಮ್ಮ ಮೆಳ್ಳಿಕೇರಿ (80) ಎಂಬ ಮಹಿಳೆ ಮೃತಪಟ್ಟಿದ್ದು, ಹಿಂದೂಗಳ ಅಂತಿಮ ಸಂಸ್ಕಾರ ಸಲ್ಲಿಸಲು ಜಾಗ ಇಲ್ಲದಿರುವುದರಿಂದ ಕುಟುಂಬಸ್ಥರು ಅಂತ್ಯಕ್ರಿಯೆಗೆ ಪರದಾಡುವಂತಾಯಿತು.

ಸ್ಮಶಾನ ಸೌಲಭ್ಯ ಕಲ್ಪಿಸುವಂತೆ ಅನೇಕ ಬಾರಿ ಮನವಿ ಮಾಡಿದ್ದರೂ ಬೇಡಿಕೆ ಈಡೇರಿರಲಿಲ್ಲ. ಸಾವಂತ್ರಮ್ಮ ಅವರಿಗೆ ಯಾವುದೇ ಜಮೀನು ಇಲ್ಲದ ಕಾರಣ ಅನಿವಾರ್ಯವಾಗಿ ರಸ್ತೆ ಮಧ್ಯದಲ್ಲಿಯೇ ಅಂತ್ಯಕ್ರಿಯೆಗೆ ಸಿದ್ಧತೆ ನಡೆಸಿದರು. ಗ್ರಾಮಸ್ಥರು ಶಾಲೆ ಮುಂಭಾಗದ ರಸ್ತೆಯಲ್ಲಿ ಕಟ್ಟಿಗೆ ಜೋಡಿಸಿ ಅಂತ್ಯಕ್ರಿಯೆ ಮಾಡುವುದಾಗಿ ಪಟ್ಟು ಹಿಡಿದಾಗ ಕೊಪ್ಪಳ ತಹಶೀಲ್ದಾರ್ ವಿಠಲ ಚೌಗುಲಾ ಹಾಗೂ ಪೊಲೀಸರು ಗ್ರಾಮಕ್ಕೆ ದೌಡಾಯಿಸಿದರು.

'ಶವ ಸಂಸ್ಕಾರಕ್ಕೆ ಜಾಗವಿಲ್ಲ. ಹಲವು ಬಾರಿ ಮನವಿ ಮಾಡಿದರೂ ಸ್ಪಂದಿಸಿಲ್ಲ. ಈಗ ಬಂದು ಸಮಾಧಾನ ಮಾಡಬೇಡಿ' ಎಂದು ಗ್ರಾಮಸ್ಥರು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಕೆಲ ಹೊತ್ತು ಮಾತಿನ ಚಕಮಕಿಯೂ ನಡೆಯಿತು.

## ಒತ್ತುವರಿ- 30 ಅಂಗಡಿ ತೆರವು

• ಉದಯವಾಹಿನಿ ಕಡರನಾಯ್ಕನಹಳ್ಳಿ

ಸಮೀಪದ ಸುಕ್ಷೇತ್ರ ಉಕ್ಕಡಗಾತ್ರಿ ಗ್ರಾಮದ ರಸ್ತೆಯ ಎಡಬಲಗಳಲ್ಲಿ ರಸ್ತೆ ಅತಿಕ್ರಮಿಸಿ ನಿರ್ಮಿಸಿದ್ದ ಅಂಗಡಿ, ಹೋಟೆಲ್‌ಗಳಲ್ಲಿ 30ನ್ನು ಸಂಜೆ ವೇಳೆಗೆ ತೆರವುಗೊಳಿಸಲಾಯಿತು.

ಇಲ್ಲಿಗೆ ಬರುವ ಯಾತ್ರಾರ್ಥಿಗಳಿಗೆ ಸುಗಮ ಸಂಚಾರಕ್ಕೆ ತೊಂದರೆ ಆಗುತ್ತದೆ ಎಂದು ಅಂಗಡಿ, ಹೋಟೆಲ್‌ಗಳನ್ನು ತೆರವುಗೊಳಿಸಲು ಗ್ರಾಮ ಪಂಚಾಯಿತಿಯವರು ಸುಮಾರು 45 ಜನ ಮಾಲೀಕರಿಗೆ ಅಂತಿಮ ನೋಟಿಸ್ ನೀಡಿದ್ದರು. ಅಲ್ಲದೇ 3 ದಿನಗಳೊಳಗೆ ಒತ್ತುವರಿ ತೆರವುಗೊಳಿಸಲಾಗುವುದು ತಮ್ಮ ತಮ್ಮ ವಸ್ತುಗಳನ್ನು ತೆಗೆದುಕೊಂಡು ಖಾಲಿ ಮಾಡಲು ಸೂಚನೆಯನ್ನೂ ಕೊಟ್ಟಿದ್ದಾಗಿ ಪಿಡಿಒ ಟಿ.ಪಿ. ರಾಮಚಂದ್ರಪ್ಪ ತಿಳಿಸಿದರು.

ಅಜ್ಜಯ್ಯನ ದೇವಸ್ಥಾನಕ್ಕೆ ರಾಜ್ಯ ಮತ್ತು ಹೊರರಾಜ್ಯಗಳಿಂದ ಭಕ್ತರು ಬರುತ್ತಾರೆ. ಸರ್ಕಾರಿ ಜಾಗ ಒತ್ತುವರಿ ಮಾಡಿ ಅಂಗಡಿಗಳು, ಹೋಟೆಲ್‌ಗಳು ನಿರ್ಮಿಸಿದ್ದರಿಂದ ಭಕ್ತರಿಗೆ ಹಾಗೂ ವಾಹನಗಳ ಸಂಚಾರಕ್ಕೆ ಸಮಸ್ಯೆ ಆಗುತ್ತಿದ್ದು ಅದಕ್ಕಾಗಿ ತೆರವು ಕಾರ್ಯಾಚರಣೆ ನಡೆಸಿದ್ದು, ಒತ್ತುವರಿ ಮಾಡಿರುವ ಎಲ್ಲಾ ಅಂಗಡಿಗಳನ್ನು ತೆರವು ಮಾಡುವುದಾಗಿ' ಗ್ರಾ.ಪಂ ಅಧ್ಯಕ್ಷೆ ಭಾರತಿ ಕಟಗೇರ, ಉಪಾಧ್ಯಕ್ಷ ಚಂದ್ರುಗೌಡ ಜಿಗಳಿ ವಿವರಿಸಿದರು. ತೆರವು ಮಾಡಿದ ಅಂಗಡಿಗಳ ಟೇಬಲ್‌ಗಳು, ಚೇರ್‌ಗಳನ್ನು ಉಳಿದ ಜಾಗಗಳಲ್ಲಿ ಒಂದರ ಮೇಲೊಂದು ಇಡುತ್ತಿರುವುದು ಮತ್ತು ಕೆಲವರು ಸಾಮಗ್ರಿಗಳನ್ನು ಬೇರೆಡೆಗೆ ಹೊತ್ತೊಯ್ಯುವ ದೃಶ್ಯಗಳು ಕಂಡುಬಂದವು.


ಉದಯವಾಹಿನಿ ಚಿತ್ರ

### ಬೂದಿಹಾಳ–ಫೀರಾಪೂರ ಏತ ನೀರಾವರಿ ಯೋಜನೆಗೆ ಸಂಬಂಧಿಸಿದ ಕೊನೆ ಹಂತದ ಎಫ್.ಐ.ಸಿ ನಿರ್ಮಾಣ ಮಾಡಬೇಕೆಂದು ಒತ್ತಾಯ

## ಯೋಜನೆ ಸಂಪೂರ್ಣ ಮುಗಿಯುವರೆಗೆ ವಿಶ್ರಮಿಸಲ್ಲಾ: ರಾಜುಗೌಡ

• ಉದಯವಾಹಿನಿ ತಾಳಿಕೋಟೆ

ಬೂದಿಹಾಳ ಪೀರಾಪೂರ ಏತ ನೀರಾವರಿ ಕಾಮಗಾರಿಗೆ ಸಂಬಂದಿಸಿ ಈಗಾಗಲೇ ಹತ್ತಾರು ಭಾರಿ ಮುಖ್ಯಮಂತ್ರಿ ಮತ್ತು ಉಪ ಮುಖ್ಯಮಂತ್ರಿ ಜಲಸಂಪನ್ಮೂಲ ಸಚಿವರನ್ನು ಬೆಟ್ಟಿಯಾಗಿ ಕೊನೆಯ ಹಂತದ ಕಾಮಗಾರಿ ಪ್ರಾರಂಭಕ್ಕೆ ಒತ್ತಾಯ ಮಾಡುತ್ತಾ ಬಂದಿದ್ದೇನೆ ಅದರಂತೆ ರೈತ ಸಂಘದ ನೇತೃತ್ವದಲ್ಲಿ ನಡೆಸಿರುವ ಹೋರಾಟಕ್ಕೆ ನಾನು ಎಲ್ಲಾ ರೀತಿಯಿಂದಲೂ ಸದಾ ಬೆಂಬಲವಾಗಿ ನಿಲ್ಲುತ್ತೇನೆಂದು ದೇವರ ಹಿಪ್ಪರಗಿ ಮತಕ್ಷೇತ್ರದ ಶಾಸಕ ರಾಜುಗೌಡ ಪಾಟೀಲ(ಕುದರಿ ಸಾಲವಾಡಗಿ) ಅವರು ಹೇಳಿದರು.

ತಾಲ್ಲೂಕಿನ ಕೊಡಗಾನೂರ ಕ್ರಾಸ್‌ನಲ್ಲಿ ಬೂದಿಹಾಳ -ಫೀರಾಪೂರ ಏತ ನೀರಾವರಿ ಯೋಜನೆಗೆ ಸಂಬಂಧಿಸಿದ ಕೊನೆ ಹಂತದ ಎಫ್.ಐ.ಸಿ (ಹೊಲ ಗಾಲುವೆ) ನಿರ್ಮಾಣ ಮಾಡಬೇಕೆಂದು ಒತ್ತಾಯಿಸಿ ಅಖಂಡ ಕರ್ನಾಟಕ ರೈತ ಸಂಘದ ನೇತೃತ್ವದಲ್ಲಿ ತಾಲ್ಲೂಕಿನ 38 ಗ್ರಾಮಗಳ ರೈತಾಪಿ ಜನರು ನಡೆಸಿರುವ ಅಹೋರಾತ್ರಿ ಧರಣಿ ಸ್ಥಳಕ್ಕೆ ಬೆಟ್ಟಿ ನೀಡಿ ಬೆಂಬಲ ಸೂಚಿಸಿ ಮಾತನಾಡುತ್ತಿದ್ದ ಅವರು ಮುಖ್ಯ ಯೋಜನೆಗಳ ಅನುಷ್ಠಾನಕ್ಕೆ ಸಂಬಂದಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹಾಗೂ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ ಅವರು ನಡೆಸಿದ ಸಭೆಯಲ್ಲಿ ಮುಖ್ಯವಾಗಿ ಬೂದಿಹಾಳ-ಫೀರಾಪೂರ ಏತ ನೀರಾವರಿ ಯೋಜನೆಗೆ ಸಂಬಂದಿಸಿ ಕೊನೆಯ ಹಂತದ ಕಾಮಗಾರಿ ಕೈಗೊಳ್ಳಲು ಒತ್ತಾಯಿಸಿದ್ದೇನೆ. ಈ ಯೋಜನೆ ಸಂಪೂರ್ಣಕ್ಕಾಗಿ ಹತ್ತಾರು ಭಾರಿ ಮುಖ್ಯಮಂತ್ರಿ, ಮತ್ತು ಡಿಕೆ ಶಿವಕುಮಾರ ಅವರನ್ನು ಬೆಟ್ಟಿ ಮಾಡಿದ್ದೇನೆ ಇದಕ್ಕೆ ಸಂಬಂದಿಸಿ ಡಿಪಿಆರ್ ತಯಾರಿಸಿ ಸಭೆಗೆ ಮಂಡಿಸಲು ಸೂಚಿಸಿದ್ದಾರೆ. ಆದರೆ ಡಿಪಿಆರ್ ತಯಾರಿಸಲು ಅಧಿಕಾರಿಗಳು ಹಿಂದೇಟು ಹಾಕಿದ್ದರಿಂದ ತಡವಾಗಿದೆ ಇದಕ್ಕೂ ಪೂರಕವಾಗಿ ಸದ್ಯ ರೈತ ಸಂಘದ ನೇತೃತ್ವದಲ್ಲಿ ನಡೆಸಿರುವ ಹೋರಾಟ ಈ ಯೋಜನೆ ಪೂರ್ಣಗೊಳಿಸಲು ಸರ್ಕಾರದ ಮೇಲೆ ಒತ್ತಡ ಹಾಕಲು ನನಗೆ ಇನ್ನಷ್ಟು ಪುಷ್ಠಿ ಮತ್ತು ಶಕ್ತಿ ನೀಡಿದಂತಾಗಿದೆ ನಾನೂ ಕೂಡಾ ರೈತನ ಮಗನಾಗಿದ್ದೇನೆ ರೈತರ ಕಷ್ಟ ಅರೀತುಕೊಂಡ ಮತ್ತು ಅನುಭವಿಸಿದ ವ್ಯಕ್ತಿಯಾಗಿದ್ದೇನೆ ನಾನು ಶಾಸಕನೆಂಬ ಅಹಂಭಾವ ನನ್ನಬಳಿ ಇಲ್ಲಾ ಮೊದಲು ಈ ರಾಜುಗೌಡ ಹೇಗಿದ್ದ ಈಗಲೂ ಕೂಡಾ ಹಾಗೆ ಇದ್ದೇನೆ ನನ್ನ ಬಳಿ ಯಾವ ಬದಲಾವಣೆಗಳಿಲ್ಲಾ ನಿಮ್ಮ ಈ ಹೋರಾಟದಲ್ಲಿ ನಾನೂ ಭಾಗಿಯಾಗಿ ನಿಮ್ಮ ಶಕ್ತಿಯೊಂದಿಗೆ ಸರ್ಕಾರದ ಮೇಲೆ ಒತ್ತಡ ಹಾಕುವಂತಹ ಕೆಲಸ ಮಾಡುತ್ತೇನೆಂದ ಅವರು ಯಾರೋ ಓಹಾ ಪೋಹಗಳು ಎಬ್ಬಿಸಬಹುದು ಅದಕ್ಕೆ ಯಾರೂ ತಲೆ ಕೆಡಿಸಿಕೊಳ್ಳಬೇಡಿ ಬೂದಿಹಾಳ -ಫೀರಾಪೂರ ಯೋಜನೆ ಸಂಪೂರ್ಣ ಮುಗಿಯಬೇಕೆಂಬ ಆಲೋಚನೆ ಮಾತ್ರ ನಿಮ್ಮ ಬಳಿ ಇರಲಿ ನಾನು ನಿಮ್ಮ ಜೊತೆ ಸದಾ ಇದ್ದೇನೆಂದು ಕೈಗೊಂಡ ಹೋರಾಟಕ್ಕೆ ಸಂಪೂರ್ಣ ಬೆಂಬಲ ಸೂಚಿಸಿದರು.



ಉದಯವಾಹಿನಿ ಚಿತ್ರ

**ಕೊನೆಯ ಹಂತದ ಕಾಮಗಾರಿ ಪ್ರಾರಂಭಕ್ಕೆ ಒತ್ತಾಯ**

2008ರಿಂದಲೂ ಬೂದಿಹಾಳ-ಫೀರಾಪೂರ ಯೋಜನೆಗಾಗಿ ಅನೇಕ ಹೋರಾಟಗಳನ್ನು ಮಾಡುತ್ತಾ ಬಂದಿದ್ದೇವೆ ಮೊದಲಿಗೆ 8.50 ಟಿಎಂಸಿ ನೀರು ಹಂಚಿಕೆ ಮಾಡಿ ಇಡಲಾಗಿತ್ತು ಆದರೆ ಆ ನೀರನ್ನು ಕತ್ತರಿಸಿ ಈಗ 2.70 ಟಿಎಂಸಿ ನೀರಿಗೆ ನಿಲ್ಲಿಸಿದ್ದಾರೆ ನಮ್ಮ ಬಳಿ ಹೋರಾಟದ ಮನೋಭಾವನೆ ಎಲ್ಲಿಯವರೆಗೂ ಬರುವದಿಲ್ಲವೋ ಅಲ್ಲಿಯವರೆಗೆ ರಾಜಕಾರಣಿಗಳು ರೈತರನ್ನು ತುಳಿಯುತ್ತಾ ಬರುತ್ತಾರೆ ಈ ಯೋಜನೆಯ ಅನುಷ್ಠಾನದ ಹಿಂದೆ ಸಾಕಷ್ಟು ಕೈಗಳು ಕೆಲಸ ಮಾಡಿದ್ದು ಅವುಗಳು ಯಾರು ಎಂಬುದು ಎಲ್ಲರಿಗೂ ಗೊತ್ತಿದೆ ಅವರನ್ನೂ ಸಹ ಈ ಹೋರಾಟದಲ್ಲಿ ತೊಡಗಿಸಿಕೊಳ್ಳುವದರೊಂದಿಗೆ ಹೋರಾಟವನ್ನು ಮತ್ತಷ್ಟು ಚುರುಕುಗೊಳಿಸಬೇಕು. -ಬಸನಗೌಡ ವಣಕ್ಯಾಳ

ಬೂದಿಹಾಳ-ಫೀರಾಪೂರ ಯೋಜನೆಯ ಅನುಷ್ಠಾನಕ್ಕಾಗಿ ಮಾಡಿರುವಂತಹ ಹೋರಾಟ ಇನ್ಯಾವ ಯೋಜನೆಗಾಗಿ ರಾಜ್ಯದಲ್ಲಿ ಯಾರೂ ಮಾಡಿಲ್ಲಾ ಅಷ್ಟೇಲ್ಲಾ ಹೋರಾಟಗಳನ್ನು ಮಾಡುತ್ತಾ ಬಂದರೂ ಕಾಂಗ್ರೆಸ್ ಸರ್ಕಾರ ಕುಂಭಕರ್ಣ ನಿದ್ದೆಗೆ ಜಾರಿದೆ ರೈತರ ಬಾರಕೋಲ ಚಳುವಳಿಯಿಂದ ಮಾತ್ರ ಎಚ್ಚೆತ್ತುಕೊಳ್ಳುವಂತೆ ಕಾಣುತ್ತಿದೆ ಎಂದ ಅವರು ಜಿಲ್ಲೆಯ ಉಸ್ತುವಾರಿ ಮಂತ್ರಿ ಎಂ.ಬಿ.ಪಾಟೀಲರಿಗೆ ತಾವು ಜಿಲ್ಲೆಯ ಉಸ್ತುವಾರಿ ಮಂತ್ರಿ ಎಂಬುದು ಅರೀವೆ ಇಲ್ಲದಂತೆ ಕಾಣುತ್ತಿದೆ ಮಂತ್ರಿಯಾಗಿದ್ದರೂ ಕೂಡಾ ಕೇವಲ ಬಬಲೇಶ್ವರ ತಾಲ್ಲೂಕಿಗೆ ಮಿಸಲಿದ್ದಂತೆ ವರ್ತಿಸುತ್ತಿರುವದು ಇವರ ಇಚ್ಛಾಶಕ್ತಿಯ ಕೊರತೆ ಎಂಬುದು ಎದ್ದು ಕಾಣುತ್ತದೆ.
-ಮಲ್ಲನಗೌಡ ಪಾಟೀಲ
ಯಾದಗಿರಿ ಜಿಲ್ಲಾ ರೈತ ಸಂಘದ ಅಧ್ಯಕ್ಷ

ಬೂದಿಹಾಳ-ಫೀರಾಪೂರ ನೀರಾವರಿ ಯೋಜನೆಗೆ ಈಗಾಗಲೇ 1500 ಕೋಟಿ ರೂ. ಖರ್ಚು ಮಾಡಲಾಗಿದೆ ಸದ್ಯ ಕೇವಲ 170 ಕೋಟಿ ರೂ. ಕೊನೆಯ ಹಂತದ ಕಾಮಗಾರಿಗೆ ನಿಂತಿದೆ ಈ ಯೋಜನೆ ಪೂರ್ಣಗೊಳ್ಳದಿದ್ದರೂ ಹಿಂದೆ ಖರ್ಚು ಮಾಡಿದ ಎಲ್ಲಾ ಹಣವೂ ಹಳ್ಳದಲ್ಲಿ ಹುಣಸೇಹಣ್ಣು ತೊಳೆದಂತಾಗಲಿದೆ ಸರ್ಕಾರವು ಶ್ರೇಯಸ್ಸಿಗೆ ಬಡೆದಾಡುವದನ್ನು ಬಿಟ್ಟು ಯೋಜನೆಯನ್ನು ಸಂಪೂರ್ಣ ಮುಗಿಸಿ ರೈತರ ಬದುಕಿಗೆ ಆಸರೆಯಾಗಬೇಕು
-ಬಸನಗೌಡ ಮಾಡಗಿ

## ಪದವಿ ಪೂರ್ವ ಕಾಲೇಜು: ಮೂಲಸೌಕರ್ಯಗಳ ಕೊರತೆ

• ಉದಯವಾಹಿನಿ ತಡಸ

ತಡಸ ಸುತ್ತಮುತ್ತಲಿನ ಗ್ರಾಮಗಳ ಹಾಗೂ ಕಲಘಟಗಿ, ಕುಂದಗೋಳ ತಾಲ್ಲೂಕಿನ ಮಕ್ಕಳ ಉನ್ನತ ಶಿಕ್ಷಣ ಕೇಂದ್ರವಾಗಿರುವ ಸರ್ಕಾರಿ ಸ್ವತಂತ್ರ ಪದವಿ ಪೂರ್ವ ಕಾಲೇಜು ಮೂಲಸೌಕರ್ಯಗಳ ಕೊರತೆಯಿಂದ ಬಳಲುತ್ತಿದೆ. ಗ್ರಾಮದಲ್ಲಿ ಕಾಲೇಜು 2006 ಮಂಜೂರಾಗಿದ್ದು 2007 ಸಾಲಿನಲ್ಲಿ ಸ್ಥಾಪನೆಯಾಗಿರುವ ಸರ್ಕಾರಿ ಸ್ವತಂತ್ರ ಪದವಿ ಪೂರ್ವ ಕಾಲೇಜು ಹಲವು ಬಡ ಮಕ್ಕಳ ಶಿಕ್ಷಣ ಕೇಂದ್ರವಾಗಿದೆ ಸರಿಯಾದ ಸೌಕರ್ಯ, ಮೂಲಭೂತ ವ್ಯವಸ್ಥೆಯನ್ನು ಕಲ್ಪಿಸಿ ಕೊಡುವಲ್ಲಿ ಅಧಿಕಾರಿಗಳಾಗಲಿ ಜನಪ್ರತಿನಿಧಿಗಳಾಗಲಿ ಮುಂದಾಗುತ್ತಿಲ್ಲ ಎಂದು ಗ್ರಾಮಸ್ಥರ ಆರೋಪವಾಗಿದೆ.

**ಕಾಲೇಜು ಸುತ್ತಲೂ ಕಾಂಪೌಂಡ್ ಇಲ್ಲ:** ಸರ್ಕಾರಿ ಸ್ವತಂತ್ರ ಪದವಿ ಪೂರ್ವ ಕಾಲೇಜು ಸ್ಥಾಪನೆಯಾಗಿ 18 ವರ್ಷ ಕಳೆದರೂ ಇನ್ನೂವರೆಗೆ ಸುತ್ತಲು ಕಾಂಪೌಂಡ್ ವ್ಯವಸ್ಥೆ ಇಲ್ಲದೆ ಹುಬ್ಬಳ್ಳಿ–ಶಿರಸಿ ರಾಜ್ಯ ಹೆದ್ದಾರಿಯಲ್ಲಿ ಓಡಾಡುವಂತ ವಾಹನ ಶಬ್ದಕ್ಕೆ ಮಕ್ಕಳ ಕಲಿಕೆ ಅಡ್ಡಿಯಾಗುತ್ತಿದೆ. ಕೆಲ ಪುಡಾಡಿ ಯುವಕರು ಬೇಕಂತಲೇ ಹೆಚ್ಚು ಶಬ್ದವಿರುವ ಬೈಕ್ ಅನ್ನು ಕಾಲೇಜಿನ ಮುಂದೆ ಹಾರ್ನ್ ಹಾಕುತ್ತಾ ಓಡಿಸುವ ಕೆಲಸ ಮಾಡುತ್ತಾರೆ ಎಂದು ಕಾಲೇಜಿನ ವಿದ್ಯಾರ್ಥಿಗಳು ಅಳಲು ತೋಡಿಕೊಂಡರು.

**ದನ ಮೇಯಿಸುವ ಮೈದಾನ:** ಕಾಲೇಜಿಗೆ ಸುತ್ತಲೂ


ಉದಯವಾಹಿನಿ ಚಿತ್ರ

ಸೂಕ್ತ ಕಾಂಪೌಂಡ್ ವ್ಯವಸ್ಥೆಯಿಲ್ಲದೆ ಗ್ರಾಮದ ದನ, ಕರುಗಳು ಹಾಗೂ ಆಡು ಮೇಯಿಸುವವರು ಮೈದಾನದಲ್ಲಿ ಬೆಳೆದಿರುವ ಹುಲ್ಲನ್ನು ಮೇಯಿಸುವ ಜೊತೆಗೆ ಮೈದಾನದಲ್ಲಿ ಖಾಸಗಿ ವಾಹನಗಳು ನಿಲ್ಲಿಸುವುದು ನಡೆದಿದೆ.

**ರಾತ್ರಿ ಸಮಯ ಕುಡುಕರ ತಾಣ:** ಸೂಕ್ತ ಕಂಪೌಂಡ್ ವ್ಯವಸ್ಥೆ ಇಲ್ಲದೆ ರಾತ್ರಿ ಸಮಯ ಕಾಲೇಜಿನ ಮೈದಾನದಲ್ಲಿ ಕಾಲೇಜಿನ ಒಳ ಹಾಲಿನಲ್ಲಿ ಕುಡುಕರು ಕುಳಿತುಕೊಂಡು ತಮ್ಮ ಚಟವನ್ನು ಮುಗಿಸಿಕೊಂಡು ಬಾಟಲಿ ಸಿಗರೇಟ್ ಮುಂತಾದ ಮಧ್ಯಪಾನ ವಸ್ತುಗಳನ್ನು ಅಲ್ಲಿಯೇ ಬಿಟ್ಟು ಹೋಗುವ ಪರಿ ನಿರ್ಮಾಣವಾಗಿದೆ ಎಂದು ಗ್ರಾಮದ ಶಿವರಾಜ ಹೇಳುತ್ತಾರೆ.

ಕಾಲೇಜು ಸ್ಥಾಪನೆ ಮಾಡಿ ಹಲವು ವರ್ಷಗಳು ಕಳೆದಿವೆ. ಆದರೆ ಸಮರ್ಪಕ ಸೌಕರ್ಯ ನೀಡುವಲ್ಲಿ ಅಧಿಕಾರಿಗಳಾಗಲಿ, ಜನಪ್ರತಿನಿಧಿಗಳು ಮೀನ ಮೇಷ ಮಾಡುತ್ತಿದ್ದು, ಮುಂದಿನ ದಿನಮಾನದಲ್ಲಿ ವ್ಯವಸ್ಥೆ ಕಲ್ಪಿಸಿ ಕೊಡದಿದ್ದಲ್ಲಿ ಹಳೇ ವಿದ್ಯಾರ್ಥಿಗಳ ಹಾಗೂ ಪ್ರಸ್ತುತ ಕಲಿಯುತ್ತಿರುವ ವಿದ್ಯಾರ್ಥಿಗಳು ಸೇರಿ ಉಗ್ರ ಹೋರಾಟ ಮಾಡುವುದಾಗಿ ಎಚ್ಚರಿಸಿದರು.

**ಸೌಕರ್ಯ ಕೊರತೆ**

ಕಾಲೇಜಿನಲ್ಲಿ ಸಮತಟ್ಟಾದ ಮೈದಾನ ಇಲ್ಲದೆ ಆಟ ಆಡಲು ಆಗುತ್ತಿಲ್ಲ ಸ್ವಚ್ಛತಗಾರರು ಇಲ್ಲದಿರುವುದರಿಂದ ಶೌಚಾಲಯಗಳು ದುರ್ವಾಸನೆ ಬೀರುತ್ತಿದೆ. ಇದರಿಂದ ಗಂಡು ಮಕ್ಕಳು ಹೊರವಲಯದಲ್ಲಿ ಶೌಚ ಮಾಡಿಕೊಂಡು ಬರುವಂತಹ ಸ್ಥಿತಿ ಇದೆ ಎಂದು ಕಾಲೇಜಿನ ವಿದ್ಯಾರ್ಥಿಗಳು ಅಳಲು ತೋಡಿಕೊಂಡರು. ವಾಣಿಜ್ಯ ಹಾಗೂ ಕಲಾ ವಿಭಾಗದಲ್ಲಿ ಒಬ್ಬಬ್ಬರೇ ಕಾಯಂ ಉಪನ್ಯಾಸಕರು ಇದ್ದು ಉಳಿದೆಲ್ಲ ಅರೆಕಾಲಿಕ ಉಪನ್ಯಾಸಕರಿದ್ದಾರೆ. ಮಕ್ಕಳಿಗೆ ಸೂಕ್ತ ಕಲಿಕೆ ಸಿಗುತ್ತಿಲ್ಲ ಅಧಿಕಾರಿಗಳು ಮಕ್ಕಳ ಶೈಕ್ಷಣಿಕ ಮಟ್ಟ ಕುಸಿಯಲು ನೇರೆ ಹೊಣೆ ಆಗಿದ್ದಾರೆ ಎಂದು ಪಾಲಕರ ಆಗ್ರಹವಾಗಿದೆ.

## ಸಮಾಜ ಕಲ್ಯಾಣ ಇಲಾಖೆ ಡಿಡಿಯಿಂದ ಅಕ್ರಮವಾಗಿ ಅರ್ಜಿ ಸ್ವೀಕಾರ: ತನಿಖೆಗೆ ಮನವಿ

• ಉದಯವಾಹಿನಿ ಬಳ್ಳಾರಿ

ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು, ಅಲೆಮಾರಿ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾಗಿರು ಮಲ್ಲಿಕಾರ್ಜುನ ಅವರು. ಕಾನೂನು ಬಾಹಿರವಾಗಿ ಭೂ ಮಾಲೀಕರ ಅರ್ಜಿಗಳನ್ನು ಸ್ವೀಕರಿಸಿದ್ದು ಈ ಬಗ್ಗೆ ತನಿಖೆ ನಡೆಸಿ ಕ್ರಮ ತೆಗೆದುಕೊಳ್ಳಬೇಕು ಎಂದು ದಲಿತ ಹಕ್ಕುಗಳ ಜಂಟಿ ಕ್ರಿಯಾ ಸಮಿತಿ ಡಿಸಿಯವರಿಗೆ ಮನವಿ ಸಲ್ಲಿಸಿದೆ. ಭೂರಹಿತರಿಗೆ ಸರ್ಕಾರದಿಂದ ಭೂಮಿ ನೀಡುವ ಸರ್ಕಾರದ ಯೋಜನೆಗೆ ನಿಗಧಿತ ಆರು ಅಂಶಗಳೊಂದಿಗೆ ಅರ್ಜಿ ನಮೂನೆ-1ರಲ್ಲಿ ಸಂಬಂಧಪಟ್ಟ ಇಲಾಖೆ ಕಛೇರಿಗೆ ಅರ್ಜಿ ಸಲ್ಲಿಸಬೇಕು.

ಇದಕ್ಕಾಗಿ ಅಧಿಸೂಚನೆ ಹೊರಡಿಸಬೇಕು. ಭೂ ಮಾಲೀಕರಿಗೆ ತಿಳಿಸಲು ವ್ಯಾಪಕ ಪ್ರಚಾರ ಮಾಡಲು ಪತ್ರಿಕಾ ಪ್ರಕಟಣೆ ನೀಡಬೇಕು. ಆದರೆ ಈ ಉಪ ನಿರ್ದೇಶಕರು, ಜಿಲ್ಲಾಧಿಕಾರಿಗಳಿಂದ ಅನುಮೋದನೆ ಪಡೆಯದೇ, ಅಧಿಸೂಚನೆ ಹೊರಡಿಸದೇ ಹಾಗೂ ಪತ್ರಿಕಾ ಪ್ರಕಟಣೆ ಹೊರಡಿಸದೇ, ತಮ್ಮ ಕಛೇರಿಗೆ ಬಂದ ಭೂ ಮಾಲೀಕರ ಅರ್ಜಿಗಳನ್ನು ಜೇಷ್ಠತೆ ಅನುಗುಣವಾಗಿ ನಮೂದಿಸದೆ. ನಿಯಮ


ಉದಯವಾಹಿನಿ ಚಿತ್ರ

ಬಾಹಿರವಾಗಿ ತಮ್ಮ ಇಲಾಖೆಯಿಂದ ಸುಳ್ಳು ಪತ್ರಗಳನ್ನು ಮಾಡಿ ಕೇವಲ ಕೆಲ ಮಧ್ಯವರ್ತಿಗಳು ತಯಾರಿಸಿದ ಪತ್ರಗಳಿಗೆ ಸಹಿ ಮಾಡಿಕೊಟ್ಟು ಅಧಿಕಾರ ದುರುಪಯೋಗ ಮಾಡಿದ್ದಾರೆ. ಭೂ ಒಡೆತನ ಯೋಜನೆಯು ಬಡ ಕುಟುಂಬಗಳಿಗೆ ನೆರವು ನೀಡುವ ಯೋಜನೆಯಾಗಿದ್ದು, ನಮ್ಮ ಜಿಲ್ಲೆಯ 5 ತಾಲ್ಲೂಕುಗಳಲ್ಲಿ ಈ ಯೋಜನೆಗೆ ಯಾವುದೇ ಅಧಿಕೃತ ಅರ್ಜಿಗಳನ್ನು ಆಹ್ವಾನಿಸದಿರುವುದರಿಂದ ಇವರು ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ಕಾನೂನು ಕ್ರಮ ಜರುಗಿಸಬೇಕೆಂದು ಮನವಿ ಮಾಡಲಾಗಿದೆ. ದಲಿತ ಹಕ್ಕುಗಳ ಜಂಟಿ ಕ್ರಿಯಾ ಸಮಿತಿಯ ಮುಖಂಡರುಗಳಾದ ಶಿವಶಂಕರ್, ಎ.ಮಾನಯ್ಯ, ಸಂಗನಕಲ್ಲು ವಿಜಯಕುಮಾರ್ ಮೊದಲಾದವರು ಇದ್ದರು.

## ನೈಸರ್ಗಿಕ ವಿಪತ್ತಿಗೆ ಅರಣ್ಯನಾಶವೇ ಮೂಲ ಕಾರಣ

• ಉದಯವಾಹಿನಿ ಬಂಟ್ವಾಳ

ನೈಸರ್ಗಿಕ ವಿಪತ್ತಿಗೆ ಅರಣ್ಯನಾಶವೇ ಮೂಲ ಕಾರಣ. ಜಲ ನೆಲ ಪ್ರಾಣಿ ಸಂಕುಲಗಳು ದೇವರ ಆಸ್ತಿ ಅವುಗಳನ್ನು ಸರಿಯಾಗಿ ನಡೆಸುವ ಜವಾಬ್ದಾರಿ ನಮ್ಮದು. ಪರಿಸರ ರಕ್ಷಣೆ ನಮ್ಮೆಲ್ಲರ ಜವಾಬ್ದಾರಿ .ಕಳೆದ 5 ವರ್ಷಗಳಿಂದ ಶ್ರೀ ಕ್ಷೇತ್ರ ಧರ್ಮಸ್ಥಳದ ಸಾಮಾಜಿಕ ಅರಣ್ಯೀಕರಣ ಕಾರ್ಯಕ್ರಮದಡಿಯಲ್ಲಿ 7 ಕೋಟಿ ಕಾಡುಹಣ್ಣಿನ ಗಿಡಗಳನ್ನು ನೆಟ್ಟು ರಕ್ಷಣೆ ಮಾಡಲಾಗುತ್ತಿದೆ ಎಂದು ಕೃಷಿ ವಿಭಾಗದ ಪ್ರಾದೇಶಿಕ ನಿರ್ದೇಶಕರಾದ ಮನೋಜ್ ಮಿನೇಜಸ್ ಹೇಳಿದರು.

ಅವರು ಬಂಟ್ವಾಳ ತಾಲ್ಲೂಕಿನ ಕೊಯಿಲ ಗ್ರಾಮದ ಬಬ್ಬುರ್ಯಬೈಲು ಇಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿ ಸಿ ಟ್ರಸ್ಟ್ ರಿ.) ಬಂಟ್ವಾಳ. ಪ್ರಗತಿ ಬಂದು ಸ್ವ-ಸಹಾಯ ಸಂಘಗಳ ಒಕ್ಕೂಟ ಬಂಟ್ವಾಳ ತಾಲ್ಲೂಕು, ಉಪ ಅರಣ್ಯ ಇಲಾಖೆ ಬಂಟ್ವಾಳ ತಾಲ್ಲೂಕು, ಶೌರ್ಯ ವಿಪತ್ತು ನಿರ್ವಹಣಾ ಘಟಕ ಬಂಟ್ವಾಳ ತಾಲ್ಲೂಕು, ಇವುಗಳ ಸಹಯೋಗದೊಂದಿಗೆ ನಡೆದ ಸಾಮಾಜಿಕ ಅರಣ್ಯೀಕರಣ ಕಾರ್ಯಕ್ರಮದಡಿಯಲ್ಲಿ ಬಬ್ಬುರ್ಯ ದೈವಸ್ಥಾನದ ವಠಾರದಲ್ಲಿ ಗಿಡ ನೆಟ್ಟು ಬಳಿಕ ನಡೆದ ಸಭಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.


ಉದಯವಾಹಿನಿ ಚಿತ್ರ

ಮುಖ್ಯ ಅತಿಥಿಗಳಾದ ಶ್ರೀ ಕೃಷ್ಣನಾಯ್ಕ್ ಉಪವಲಯ ಅರಣ್ಯಾಧಿಕಾರಿ ಬಂಟ್ವಾಳರವರು ಮಾತನಾಡುತ್ತಾ ಪ್ರಪಂಚದಲ್ಲಿ ಜನ ಸಂಕುಲ ಉತ್ತಮ ರೀತಿಯಲ್ಲಿ ಬದುಕಬೇಕಾದರೆ 33% ಮರಗಿಡಗಳು ಬೇಕು, ಅರಣ್ಯದಿಂದ ನಮಗೆ ಹಲವಾರು ಉಪಯೋಗಗಳಿದ್ದರು ನಾವು ಅಭಿವೃದ್ಧಿ ಹೆಸರಿನಲ್ಲಿ ಅರಣ್ಯ ನಾಶ ಮಾಡುತ್ತಾ ಬಂದಿದ್ದೇವೆ. ಇತ್ತೀಚಿನ ದಿನಗಳಲ್ಲಿ ಹೆಚ್ಚಿನ ಮಳೆಗಳು ಆಗುತ್ತದೆ, ಆದರೆ ಮಳೆಯ ಬೀಳುವ ದಿನಗಳು ಕಡಿಮೆ ಆಗುತ್ತಿದೆ ಇದು ಹೆಚ್ಚಾಗಬೇಕು ಇದಕ್ಕೆ ಅರಣ್ಯದ ಅವಶ್ಯಕತೆ ಎಂದರು.

ಈ ಸಂದರ್ಭದಲ್ಲಿ ಶೌರ್ಯ ಘಟಕ ಪ್ರತಿನಿಧಿಗಳಿಗೆ ಹಣ್ಣಿನ ಗಿಡ ವಿತರಿಸಲಾಯಿತು. ಕಾರ್ಯಕ್ರಮದ ವೇದಿಕೆಯಲ್ಲಿ ಜನಜಾಗೃತಿ ವೇದಿಕೆ ಬಂಟ್ವಾಳ ತಾಲ್ಲೂಕು ಅಧ್ಯಕ್ಷ ರೊನಾಲ್ಡ್ ಡಿಸೋಜ, ಶ್ರೀ ನಿತೇಶ್ ಕೆ ಉಪಸ್ಥಿತರಿದ್ದರು.

## ಹೆಸರು ಬೆಳೆ- ಹಸಿರು ಬಂಗಾರಕ್ಕೆ ಹಳದಿ ರೋಗ

• ಉದಯವಾಹಿನಿ ಲಕ್ಷ್ಮೇಶ್ವರ

ಕೃಷಿ ವಲಯದಲ್ಲಿ ಹಸಿರು ಬಂಗಾರ ಎಂದೇ ಕರೆಸಿಕೊಳ್ಳುವ ಹೆಸರು ಬೆಳೆಗೆ ಇದೀಗ ಹಳದಿ ರೋಗ ಕಾಣಿಸಿಕೊಂಡಿದ್ದು, ಕಷ್ಟಪಟ್ಟು ಬಿತ್ತನೆ ಮಾಡಿದ ರೈತರಲ್ಲಿ ಆತಂಕ ಮೂಡಿದೆ.

ಪ್ರತಿವರ್ಷ ಸಾವಿರಾರು ಹೆಕ್ಟೇರ್‌ನಲ್ಲಿ ಬೆಳೆಯಲಾಗುತ್ತದೆ. ಈ ವರ್ಷ ಉತ್ತಮವಾಗಿ ಸುರಿದ ಮುಂಗಾರು ಪೂರ್ವ ಹಾಗೂ ಮುಂಗಾರು ಮಳೆಗೆ ಖುಷಿಗೊಂಡ ರೈತರು ಹೆಸರು, ಗೋವಿನಜೋಳ, ಬಿಟಿ ಹತ್ತಿ, ಹೈಬ್ರಿಡ್ ಜೋಳದ ಬಿತ್ತನೆ ಕೈಗೊಂಡಿದ್ದರು. ಉತ್ತಮ ತೇವಾಂಶದಿಂದಾಗಿ ಹೆಸರು ಚೆನ್ನಾಗಿ ಬೆಳೆದಿದೆ. ಆದರೆ ಸೊಗಸಾಗಿ ಬೆಳೆಯುತ್ತಿರುವ ಬೆಳೆಯಲ್ಲಿ ಈಗ ಹಳದಿ ರೋಗ ಕಾಣಿಸಿಕೊಂಡಿದ್ದು ಇಳುವರಿ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುವ ಲಕ್ಷಣಗಳು ಗೋಚರಿಸುತ್ತಿವೆ ಎಂದು ರೈತರು ತಿಳಿಸಿದ್ದಾರೆ. ತಾಲ್ಲೂಕಿನ ಲಕ್ಷ್ಮೇಶ್ವರ, ಆದರಹಳ್ಳಿ, ನಾದಿಗಟ್ಟಿ, ಹರದಗಟ್ಟಿ, ಉಳ್ಳಟ್ಟಿ, ಮುನಿಯಾನ ತಾಂಡಾ, ದೊಡ್ಡರು, ಸೋಗಿವಾಳ, ನೆಲೂಗಲ್ಲ, ಸೇರಿದಂತೆ ಇತರೇ ಭಾಗದಲ್ಲಿ ಬೆಳೆದಿರುವ ಹೆಸರು ಬೆಳೆಗೆ ಹಳದಿ ರೋಗ ಗಂಟು ಬಿದ್ದಿದೆ. 'ಹಳದಿ ರೋಗ ವೈರಸ್‌ನಿಂದ ಬರುವ ರೋಗವಾಗಿದ್ದು ಸಾಮೂಹಿಕವಾಗಿ ಇದರ ನಿಯಂತ್ರಣಕ್ಕೆ ರೈತರು ಮುಂದಾಗಬೇಕು. ಹಳದಿ ರೋಗಕ್ಕೆ ವೈಟ್ ಫ್ಲೇ (ಬಿಳಿನೊಣ) ಕಾರಣವಾಗಿದ್ದು ಒಂದು ಗಿಡದಿಂದ ಇನ್ನೊಂದು ಗಿಡಕ್ಕೆ ಹೋಗಿ ರಸ ಹೀರುವುದರಿಂದ ಈ ರೋಗ ವೈರಾಣು ಮೂಲಕ ಗಿಡದಿಂದ ಗಿಡಕ್ಕೆ ಹರಡುತ್ತದೆ. ರೋಗದ ನಿಯಂತ್ರಣಕ್ಕಾಗಿ ರೈತರು ರೋಗಬಾಧೆಗೆ ತುತ್ತಾದ ಗಿಡದ ಎಲೆಗಳು ಮತ್ತು ಭಾಗವನ್ನು ಕಿತ್ತು ಮಣ್ಣಲ್ಲಿ ಮುಚ್ಚಬೇಕು' ಎಂದು ಲಕ್ಷ್ಮೇಶ್ವರದ ರೈತ ಸಂಪರ್ಕ ಕೇಂದ್ರದ ಅಧಿಕಾರಿ ಚಂದ್ರಶೇಖರ ನರಸಮ್ಮನವರ ಸಲಹೆ ನೀಡಿದ್ದಾರೆ.


ಉದಯವಾಹಿನಿ ಚಿತ್ರ

ರೈತರು ಕ್ರಿಮಿನಾಶಕ ಸಿಂಪಡಣೆ ಮಾಡಿದರೂ ಕೂಡ ರೋಗ ನಿಯಂತ್ರಣಕ್ಕೆ ಬರುತ್ತಿಲ್ಲ. ರೋಗ ನಿಯಂತ್ರಣಕ್ಕೆ ಬಾರದಿದ್ದರೆ ಬೆಳೆ ಬೆಳೆಯಲು ಈವರೆಗೆ ಖರ್ಚು ಮಾಡಿರುವ ಹಣ ವಾಪಸ್ ಬರುವ ಭರವಸೆಯೂ ಇಲ್ಲ.

### • ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಅಭಿವೃದ್ಧಿಗೆ ಯಾವುದೇ ತೊಂದರೆ ತೊಡಕು ಇಲ್ಲ : ಲಕ್ಷ್ಮಣ ಸವದಿ

## ಗ್ಯಾರಂಟಿ ಯೋಜನೆಗಳಿಂದ ಮಹಿಳೆಯರ ಸ್ವಾವಲಂಬನೆ ಬದುಕು ಸಾಧ್ಯ

• ಉದಯವಾಹಿನಿ ಅಥಣಿ

ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ಮಹಿಳೆಯರು ಸ್ವಾವಲಂಬನೆ ಬದುಕು ಕಟ್ಟಿಕೊಳ್ಳಲು ಸಾಧ್ಯವಾಗಿದೆ. ಅಭಿವೃದ್ಧಿ ಎಂದರೆ ಕೇವಲ ರಸ್ತೆ, ವಿದ್ಯುತ್, ಚರಂಡಿ ಕಾಮಗಾರಿಗಳನ್ನು ಮಾಡುವದಲ್ಲ, ಬಡವರ ಹಾಗೂ ಮಧ್ಯಮ ವರ್ಗದ ಜನರ ಜೀವನಮಟ್ಟ ಆರ್ಥಿಕವಾಗಿ ಉನ್ನತಿಕರಣ ಹೊಂದಿದರೆ ಮಾತ್ರ ಅಭಿವೃದ್ಧಿಗೆ ಪೂರಕವಾಗಲಿದೆ. ಸರ್ಕಾರದ ಗ್ಯಾರಂಟಿ ಯೋಜನೆಗಾಗಿ ಒಂದಾದ ಶಕ್ತಿ ಯೋಜನೆಯಿಂದ ಸಾಧ್ಯವಾಗಿದೆ ಎಂದು ಶಾಸಕ ಲಕ್ಷ್ಮಣ ಸವದಿ ಹೇಳಿದರು

ಅವರು ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳಲ್ಲೊಂದಾದ ಶಕ್ತಿ ಯೋಜನೆಯಡಿ 500 ಕೋಟಿ ಮಹಿಳಾ ಪ್ರಯಾಣಿಕರು ಪ್ರಯಾಣ ಮಾಡಿದ ಸಂಭ್ರಮೋತ್ಸವ ಹಿನ್ನೆಯಲ್ಲಿ ಪಟ್ಟಣದ ಬಸ್ ನಿಲ್ದಾಣದಲ್ಲಿ ಬಸ್‌ಗೆ ಪೂಜೆ ಮಾಡಿ, ಮಹಿಳೆಯರಿಗೆ ಸಿಹಿ ವಿತರಣೆ ಮಾಡಿ ಮಾತನಾಡುತ್ತಿದ್ದರು.

ಇಡೀ ರಾಜ್ಯಾದ್ಯಂತ ಶಕ್ತಿ ಯೋಜನೆ ಯಶಸ್ವಿಯಾದ ಹಿನ್ನೆಲೆಯಲ್ಲಿ ಐತಿಹಾಸಿಕ ಕಾರ್ಯಕ್ರಮವನ್ನು ರಾಜ್ಯದ ವಿವಿಧೆಡೆ ಆಯೋಜನೆ ಮಾಡಲಾಗಿದೆ. ಈ ಯೋಜನೆ ಯಶಸ್ವಿಯಾಗಲು ಸರ್ಕಾರದ ಜೊತೆಗೆ ಸಾರಿಗೆ ಇಲಾಖೆಯ ಸಿಬ್ಬಂದಿಗಳ ಕಾರ್ಯ ಪ್ರಮುಖವಾಗಿದೆ ಎಂದರು. ಶಕ್ತಿ ಯೋಜನೆಯಿಂದ ಕೋಟ್ಯಂತರ ಮಹಿಳೆಯರು ಸ್ವತಂತ್ರವಾಗಿ ರಾಜ್ಯದ ಎಲ್ಲಡೆ. ಪ್ರವಾಸಿ ತಾಣಗಳು. ದೇವಸ್ಥಾನಗಳು. ಸಂಬಂಧಿಕರ ಮದುವೆಗಳಿಗೆ ಹೋಗಲು ಮಹಿಳೆಯರಿಗೆ ಉಚಿತ ಪ್ರಯಾಣಿಸಲು ಅನುಕೂಲವಾಗಿದೆ.

ರಾಜ್ಯ ಸರಕಾರ ಪಂಚ ಗ್ಯಾರಂಟಿಗಳನ್ನು ಅನುಷ್ಠಾನ ಮಾಡುವಲ್ಲಿ ಯಶಸ್ವಿಯಾಗಿದೆ. ಯಾರು ದೇವಸ್ಥಾನ, ಸಂಬಂಧಿಕರ ಮನೆ ಬೇಟಿ, ದೇವಸ್ಥಾನಗಳನ್ನು ನೋಡದ ಬಡ ದಿನ ದಲಿತ ಹೆಣ್ಣು ಮಕ್ಕಳಿಗೆ ಶಕ್ತಿ ಯೋಜನೆ ವರದಾನವಾಗಿದೆ. ಮಹಿಳಾ ಸಬಲಿಕರಣಕ್ಕೆ ಒಂದೇ ಒಂದು ಕಾಸು ಇಲ್ಲದೆ ರಾಜ್ಯದ ಯಾವುದೇ ಭಾಗಕ್ಕೆ ಹೋಗಿ ಅಲ್ಲಿನ ಪರಿಸರ, ಸಂಸ್ಕೃತಿ, ದೇವಸ್ಥಾನಗಳ ದರ್ಶನ. ಊರಿಂದ ಊರಿಗೆ ವ್ಯಾಪಾರ ವಹಿವಾಟು ನಡೆಸಿ ಜ್ಞಾನವನ್ನು ಸಂಪಾದಿಸುವ ಮೂಲಕ ಸಬಲಿಕರಣ ಗೊಳ್ಳುತ್ತಿರುವದು ಹೆಮ್ಮೆಯ ಸಂಗತಿಯಾಗಿದೆ ಎಂದು ಶಾಸಕ ಲಕ್ಷ್ಮಣ ಸವದಿ ಹೇಳಿದರು. ಮಹಿಳೆಯರಿಗೆ ಉಚಿತ ಪ್ರಯಾಣ ಮಾಡಲು ಅವಕಾಶ ನೀಡಿ, ಅದರ ಹಣವನ್ನು ರಾಜ್ಯ ಸರ್ಕಾರವು ಸಾರಿಗೆ ನಿಗಮಗಳಿಗೆ ತುಂಬುತ್ತಾ ಬಂದಿದೆ. ಇದರಿಂದ ಸಾರಿಗೆ ನಿಗಮಗಳಿಗೆ ನಷ್ಟವೇನೂ ಆಗಿಲ್ಲ. ಹೊರತಾಗಿ ಲಾಭದಾಯಕವಾಗಿ ಮುನ್ನಡೆಯುತ್ತಿವೆ. ವಿರೋಧ ಪಕ್ಷದ ಕೆಲವು ನಾಯಕರು ಈ ಯೋಜನೆಗಳಿಂದ ಅಭಿವೃದ್ಧಿ ಕಾರ್ಯಗಳಿಗೆ ಹಿನ್ನಡೆಯಾಗುತ್ತಿದೆ ಎಂದು ಹಲವು ರೀತಿಯಲ್ಲಿ ಅಪಪ್ರಚಾರದಲ್ಲಿ ತೊಡಗಿದ್ದು, ರಾಜ್ಯದ ಜನತೆ ಇಂಥವರ ಟೀಕೆಗಳಿಗೆ ಕಿವಿಗೊಡಬಾರದು ಎಂದರು

ಈ ವೇಳೆ ತಹಶೀಲ್ದಾರ ಸಿದ್ದರಾಯ ಭೋಸಗಿ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಶಿವಾನಂದ ಕಲ್ಲಾಪುರ. ಮುಖಂಡರಾದ ಗಜಾನನ ಮಂಗಸೂಳಿ. ಸುನೀಲ ಸಂಕ. ಅಸ್ಲಮ್ ನಾಲಬಂದ. ಪುರಸಭೆ ಉಪಾಧ್ಯಕ್ಷೆ ಭುವನೇಶ್ವರಿ ಯಕ್ಕಂಚಿ, ಘಟಕ ವ್ಯವಸ್ಥಾಪಕ ಎನ್.ಎಂ ಕೇರಿ. ಪುರಸಭೆ ಸದಸ್ಯರಾದ ಸೈಯದ ಅಮೀನ ಗದ್ಯಾಳ, ಸಾರಿಗೆ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

ವಿರೋಧ ಪಕ್ಷದವರೇ ಹೇಳ್ತಾರೆ ದೇಶ ಸುತ್ತಿ ನೋಡು ಕೋಶ ಓದಿ ನೋಡು ಅಂತ. ದೇಶ ಸುತ್ತೋದಕ್ಕೆ ನಾರಿ ಶಕ್ತಿ ಸಹಕಾರಿಯಾಗಿದೆ ಮಹಿಳೆಯರು ರಾಜ್ಯ ಸುತ್ತಿ ನಮ್ಮ ಐತಿಹಾಸಿಕ ಪರಂಪರೆ, ಇತಿಹಾಸ, ಸಂಸ್ಕೃತಿ ನೋಡಿ ತಿಳಿದುಕೊಂಡಿದ್ದಾರೆಂದು ಸಂತಸ ವ್ಯಕ್ತಪಡಿಸಿದ ಅವರು ವಿರೋಧ ಪಕ್ಷದವರ ಟೀಕೆಗಳಿಗೆ 500 ಕೋಟಿ ರಾಜ್ಯದ ಮಹಿಳೆಯರು ಶಕ್ತಿ ಯೋಜನೆಯ ಲಾಭ ಪಡೆದು ತಕ್ಕ ಉತ್ತರ ನೀಡಿದ್ದಾರೆ. ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಅಭಿವೃದ್ಧಿಗೆ ಯಾವುದೇ ತೊಂದರೆ ತೊಡಕುವಿಲ್ಲ ವಿರೋಧ ಪಕ್ಷದವರ ಟೀಕೆ ಟಿಪ್ಪಣಿಗಳಿಗೆ ರಾಜ್ಯದ ಜನತೆ ಕಿವಿಗೊಡಬಾರದು. -ಲಕ್ಷ್ಮಣ ಸವದಿ, ಶಾಸಕರು

**ಅಭಿವೃದ್ಧಿಗೆ ತೊಂದರೆ ಇಲ್ಲ**



# ಅಂಕಿತ ಅಮರ್ ಚಿತ್ರಕ್ಕೆ ಸೆನ್ಸಾರ್ ಅಸ್ತು

ಚಿತ್ರಕ್ಕೆ ಅಜನೀಶ್ ಸಂಗೀತ ನಿರ್ದೇಶನ

'ಜಸ್ಟ್ ಮಾರೀಡ್' ಚಿತ್ರದ ಮೂಲಕ ನಿರ್ಮಾಪಕರಾಗಿದ್ದಾರೆ. ಅಜನೀಶ್ ಲೋಕನಾಥ್ ಹಾಗೂ ಸಿ.ಆರ್ ಬಾಬಿ ಈ ಪ್ರೇಮ ಕಥಾನಕವನ್ನು ನಿರ್ಮಾಣ ಮಾಡಿದ್ದಾರೆ. ಸಂಗೀತ ಕ್ಷೇತ್ರದಲ್ಲಿ ಗುರುತಿಸಿಕೊಂಡಿದ್ದ ಸಿ.ಆರ್.ಬಾಬಿ ಅವರ ಚೊಚ್ಚಲ ನಿರ್ದೇಶನದಲ್ಲಿ ಬಿಗ್ ಬಾಸ್ ಖ್ಯಾತಿಯ ಶೈನ್ ಶೆಟ್ಟಿ ಹಾಗೂ ಅಂಕಿತ ಅಮರ್ ನಾಯಕ-ನಾಯಕಿಯಾಗಿ ನಟಿಸಿರುವ ಬಹು ನಿರೀಕ್ಷಿತ ಜಸ್ಟ್ ಮ್ಯಾರೀಡ್ ಚಿತ್ರ ತೆರೆಗೆ ಬರಲು ಅಣಿಯಾಗಿದೆ. ಇತ್ತೀಚೆಗೆ ಈ ಚಿತ್ರವನ್ನು ವೀಕ್ಷಿಸಿದ ಪ್ರಾದೇಶಿಕ ಸೆನ್ಸಾರ್ ಮಂಡಳಿ ಯು/ಎ ಪ್ರಮಾಣಪತ್ರವನ್ನು ನೀಡಿದೆ. ಸದ್ಯದಲ್ಲೇ ನಿರ್ಮಾಪಕರು ಬಿಡುಗಡೆ ದಿನಾಂಕವನ್ನು ತಿಳಿಸಲಿದ್ದಾರೆ. ಪ್ರೇಮಕಥೆಯೊಂದಿಗೆ ಕೌಟುಂಬಿಕ ಕಥಾಹಂದರವನ್ನೂ ಹೊಂದಿರುವ ಜಸ್ಟ್ ಮ್ಯಾರೀಡ್ ಚಿತ್ರ ಆರಂಭದಿಂದಲೂ ಸಾಕಷ್ಟು ಸದ್ದು ಮಾಡುತ್ತಿದೆ.

ಈಗಾಗಲೇ ಬಿಡುಗಡೆಯಾಗಿರುವ ಚಿತ್ರದ ಹಾಡುಗಳು ಹಾಗೂ ಟೀಸರ್ ಗೆ ಪ್ರೇಕ್ಷಕರು ಪ್ರಶಂಸೆಯ ಮಳೆಯನ್ನೇ ಸುರಿಸಿದ್ದಾರೆ. ತೆರೆಯ ಮೇಲೆ ಚಿತ್ರವನ್ನು ನೋಡುವ ಕಾತುರದಲ್ಲಿದ್ದಾರೆ. ಶೈನ್ ಶೆಟ್ಟಿ ಹಾಗೂ ಅಂಕಿತ ಅಮರ್ ನಾಯಕ- ನಾಯಕಿಯಾಗಿ ನಟಿಸಿರುವ ಈ ಚಿತ್ರದಲ್ಲಿ ಭಾರತದ ಹೆಸರಾಂತ ಹಾಗೂ ಅನುಭವಿ ಕಲಾವಿದರ ದೊಡ್ಡ ತಾರಾಬಳಗವೇ ಇದೆ. ದೇವರಾಜ್, ಅಚ್ಯುತಕುಮಾರ್, ಮಾಳವಿಕ ಅವಿನಾಶ್, ಅನೂಪ್ ಭಂಡಾರಿ, ಶ್ರುತಿ ಹರಿಹರನ್, ಶ್ರುತಿ ಕೃಷ್ಣ, ಸಾಕ್ಷಿ ಅಗರವಾಲ್, ಶ್ರೀಮಾನ್, ರವಿಶಂಕರ್ ಗೌಡ, ರವಿ ಭಟ್, ವಾಣಿ ಹರಿಕೃಷ್ಣ, ಸಂಗೀತ, ಅನಿಲ್, ವೇದಿಕಾ ಕಾರ್ಕಳ್ ಮುಂತಾದವರು ಈ ಚಿತ್ರದಲ್ಲಿ ಅಭಿನಯಿಸಿದ್ದಾರೆ.

ಚಿತ್ರದಲ್ಲಿ ಆರು ಸುಮಧುರ ಹಾಡುಗಳಿದ್ದು ಅಜನೀಶ್ ಲೋಕನಾಥ್ ಅವರೇ ಸಂಗೀತ ಸಂಯೋಜನೆ ಮಾಡಿದ್ದಾರೆ. ಸಿ.ಆರ್ ಬಾಬಿ ಅವರೆ ಕಥೆ ಬರೆದಿದ್ದಾರೆ. ಚಿತ್ರಕಥೆ ಸಿ.ಆರ್ ಬಾಬಿ ಹಾಗೂ ಧನಂಜಯ್ ರಂಜನ್ ಅವರದು. ರಘು ನಿಡುವಳ್ಳಿ ಈ ಚಿತ್ರದ ಸಂಭಾಷಣೆಕಾರರು. ಪಿ ಜಿ ಛಾಯಾಗ್ರಹಣ, ಶ್ರೀಕಾಂತ್ ಮತ್ತು ಪ್ರತೀಕ್ ಶೆಟ್ಟಿ ಸಂಕಲನ, ಅಮರ್ ಕಲಾ ನಿರ್ದೇಶನ, ವಿಕ್ರಮ್ ಸಾಹಸ ನಿರ್ದೇಶನ ಹಾಗೂ ಬಾಬಾ ಭಾಸ್ಕರ್, ಶಾಂತಿ ಅರವಿಂದ್ ಅವರ ನೃತ್ಯ ನಿರ್ದೇಶನವಿರುವ ಜಸ್ಟ್ ಮ್ಯಾರೀಡ್ ಚಿತ್ರದ ಹಾಡುಗಳನ್ನು ಕೆ.ಕಲ್ಯಾಣ್, ಡಾ.ವಿ.ನಾಗೇಂದ್ರಪ್ರಸಾದ್ ಬರೆದಿದ್ದಾರೆ.

# ರಾಮಾಯಣದಲ್ಲಿ ಯಶ್ ಸ್ಕ್ರೀನ್ ಟೈಮ್ ಬಗ್ಗೆ ಸಿಕ್ಕಿತು ಸುಳಿವು

ಎರಡು ಭಾಗಗಳಲ್ಲಿ ಈ ಸಿನಿಮಾ ಬಿಡುಗಡೆ



ರಾಮಾಯಣ ಸಿನಿಮಾ ಭಾರತದ ಅತಿ ದೊಡ್ಡ ಬಜೆಟ್‌ನ ಸಿನಿಮಾ ಎನಿಸಿಕೊಂಡಿದೆ. ಸಿನಿಮಾ ಎರಡು ಭಾಗಗಳಲ್ಲಿ ತೆರೆಗೆ ಬರಲಿದೆ. ಸಿನಿಮಾದ ಗ್ಲಿಂಪ್ಸ್ ಕೆಲ ದಿನಗಳ ಹಿಂದಷ್ಟೆ ಬಿಡುಗಡೆಯನ್ನು ಕಂಡಿದೆ. 'ರಾಮಾಯಣ' ಸಿನಿಮಾದ ಮೊದಲ ಭಾಗದಲ್ಲಿ ಯಶ್ ಅವರ ಪಾತ್ರದ ಹೆಚ್ಚಿನ ಸ್ಕ್ರೀನ್‌ಟೈಮ್ ಇಲ್ಲ ಎನ್ನಲಾಗಿತ್ತು. ಆದರೆ ಅದು ಸುಳ್ಳು ಎಂಬ ಸುದ್ದಿ ಹೊರಬಿದ್ದಿದೆ. ರಣ್‌ಬೀರ್ ಕಪೂರ್ , ಸಾಯಿ ಪಲ್ಲವಿ, ಯಶ್ ಇನ್ನೂ ಹಲವು ಸ್ಟಾರ್ ನಟ-ನಟಿಯರು ನಟಿಸುತ್ತಿರುವ 'ರಾಮಾಯಣ' ಸಿನಿಮಾ ಭಾರತದ ಅತಿ ಹೆಚ್ಚು ಬಜೆಟ್‌ನ ಸಿನಿಮಾ ಎನಿಸಿಕೊಂಡಿದೆ. ಈ ಸಿನಿಮಾ ಎರಡು ಭಾಗಗಳ ಒಟ್ಟು ಬಜೆಟ್ ನಾಲ್ಕು ಸಾವಿರ ಕೋಟಿ ದಾಟಲಿದೆ ಎನ್ನಲಾಗುತ್ತಿದೆ. ಇತ್ತೀಚೆಗಷ್ಟೆ ಸಿನಿಮಾದ ಟೈಟಲ್ ಟೀಸರ್ ಬಿಡುಗಡೆ ಆಗಿದ್ದು, ನಟ ರಣ್‌ಬೀರ್ ಕಪೂರ್ ಹಾಗೂ ಯಶ್ ಅವರ ಸಣ್ಣ ಗ್ಲಿಂಪ್ಸ್ ಅನ್ನು ಟೀಸರ್‌ನಲ್ಲಿ ತೋರಿಸಲಾಗಿದೆ. ಸಿನಿಮಾ ಬಿಡುಗಡೆ ದಿನಾಂಕವನ್ನೂ ಘೋಷಿಸಲಾಗಿದೆ. ಎರಡು ಭಾಗಗಳಲ್ಲಿ ಈ ಸಿನಿಮಾ ಬಿಡುಗಡೆ ಆಗಲಿದ್ದು, ಸಿನಿಮಾದ ಮೊದಲ ಭಾಗದಲ್ಲಿ ಯಶ್ ಹೆಚ್ಚು ಸಮಯ ತೆರೆ ಮೇಲೆ ಕಾಣಿಸಿಕೊಳ್ಳುವುದಿಲ್ಲ ಎನ್ನಲಾಗುತ್ತಿದೆ. ಗ್ಲಿಂಪ್ಸ್ ಬಿಡುಗಡೆ ಆದ ಬಳಿಕ ಈ ರೀತಿಯ ಸುದ್ದಿಯೊಂದು ಹರಿದಾಡಿತ್ತು. ಮೊದಲ ಬಿಡುಗಡೆ ಆಗುವ ಪಾರ್ಟ್ 1 ನಲ್ಲಿ ಯಶ್ ಕೇವಲ 15 ನಿಮಿಷ ಮಾತ್ರವೇ ಕಾಣಿಸಿಕೊಳ್ಳಲಿದ್ದಾರೆ ಎನ್ನಲಾಗಿತ್ತು. ಮೊದಲ ಭಾಗದಲ್ಲಿ ಶ್ರೀರಾಮ ಪಟ್ಟಾಭಿಷೇಕ ಆ ನಂತರ ರಾಮನ ವನವಾಸದ ಕತೆ ಮಾತ್ರವೇ ಇರಲಿದ್ದು, ಯಶ್ ಪಾತ್ರ ಕೊನೆಯಲ್ಲಿ ಮಾತ್ರವೇ ಬರಲಿದ್ದು, 2027ಕ್ಕೆ ಬಿಡುಗಡೆ ಆಗುವ ಸಿನಿಮಾನಲ್ಲಿ ಯಶ್ ಹೆಚ್ಚು ಸಮಯ ತೆರೆಯ ಮೇಲೆ ಕಾಣಿಸಿಕೊಳ್ಳಲಿದ್ದಾರೆ ಎನ್ನಲಾಗಿತ್ತು.

# ಜಿಂಕೆ ಮರಿ ಶ್ವೇತಾ ಸ್ಯಾಂಡಲ್‌ವುಡ್‌ಗೆ ಕಂಬ್ಯಾಕ್



ಜಿಂಕೆ ಮರೀನಾ, ಜಿಂಕೆ ಮರೀನಾ..ಅಂತಾ ಕುಣಿದು ಫೇಮಸ್ ಆಗಿದ್ದ ನಂದಿತಾ ಶ್ವೇತಾ ಮತ್ತೆ ಕನ್ನಡ ಚಿತ್ರರಂಗದತ್ತ ಮುಖ ಮಾಡಿದ್ದಾರೆ. ನಂದಾ ಲವ್ಸ್ ನಂದಿತಾ ಸಿನಿಮಾ ಮೂಲಕ ಕನ್ನಡ ಸಿನಿಪ್ರಿಯರ ಮುಂದೆ ಬಂದಿದ್ದ ಶ್ವೇತಾ, ಆ ಬಳಿಕ ತೆಲುಗು, ತಮಿಳು ಚಿತ್ರರಂಗದತ್ತ ಮುಖ ಮಾಡಿದರು. ಇದೀಗ ಮತ್ತೊಮ್ಮೆ ನಂದಿತಾ ಶ್ವೇತಾ ಸ್ಯಾಂಡಲ್ ವುಡ್ ಕಂಬ್ಯಾಕ್ ಆಗುತ್ತಿದ್ದಾರೆ. ನಂದಿತಾ ಶ್ವೇತಾ ಅವರನ್ನು ಮತ್ತೊಮ್ಮೆ ಕನ್ನಡ ಚಿತ್ರರಂಗದತ್ತ ಹೊಂದಿಸಿ ಬರೆಯಿರಿ ಸಿನಿಮಾದ ನಿರ್ದೇಶಕ ರಾಮೇನಹಳ್ಳಿ ಜಗನ್ನಾಥ್ ಕರೆದುಕೊಂಡು ಬರುತ್ತಿದ್ದಾರೆ. ಹಾಗಂತ ಶ್ವೇತಾಗೆ ಅವರು ಆಕ್ಷನ್ ಕಟ್ ಹೇಳುತ್ತಿಲ್ಲ. ಬದಲಿಗೆ ಅವರಿಗೆ ಸಿನಿಮಾ ನಿರ್ಮಾಣ ಮಾಡುತ್ತಿದ್ದಾರೆ. ಈ ಹಿಂದೆ ಪೆಪೆ ಸಿನಿಮಾ ನಿರ್ದೇಶನ ಮಾಡಿದ್ದ ಶ್ರೀಲೇಶ್ ಎಸ್ ನಾಯರ್ ಈಗ ಮತ್ತೊಂದು ಚಿತ್ರ ಕೈಗೆತ್ತಿಕೊಂಡಿದ್ದಾರೆ. ಈ ಚಿತ್ರಕ್ಕೆ ಜಿಂಕೆ ಮರಿ ಖ್ಯಾತಿಯ ನಂದಿತಾ ಶ್ವೇತಾ ನಾಯಕಿ. ಬೆನ್ನಿ ಎಂಬ ಮಹಿಳಾ ಪ್ರಧಾನ ಸಿನಿಮಾ ನಿರ್ದೇಶನ ಮುಂದಾಗಿದ್ದಾರೆ.

# ಸ್ಟಾರ್ ಹೀರೋಗಳಿಗೆ ಸರಿಸಾಟಿಯಾಗಿ ಸಂಭಾವನೆ



ಲೋಕೇಶ್ ಕನಗರಾಜ್ ಅವರು ರಜನಿಕಾಂತ್ ಅಭಿನಯದ ಕೂಲಿ ಚಿತ್ರಕ್ಕೆ ದೊಡ್ಡ ಮೊತ್ತದ ಸಂಭಾವನೆ ಪಡೆದಿದ್ದಾರೆ.

ಇದು ನಿರ್ದೇಶಕರ ಸಂಭಾವನೆಯಲ್ಲಿ ಹೊಸ ದಾಖಲೆಯಾಗಿದೆ. ಲೋಕೇಶ್ ಹಿಂದಿನ ಚಿತ್ರ 'ಲಿಯೋ' ಯಶಸ್ಸಿನಿಂದಾಗಿ ನನ್ನ ಸಂಭಾವನೆ ಹೆಚ್ಚಾಗಿದೆ ಎಂದು ಅವರು ಹೇಳಿದ್ದಾರೆ. ಆಗಸ್ಟ್ 14 ರಂದು ಸಿನಿಮಾ ಬಿಡುಗಡೆಯಾಗಲಿದೆ.

ಪ್ರತಿ ಸಿನಿಮಾದಲ್ಲಿ ಹೀರೋಗೆ ಹೆಚ್ಚಿನ ಸಂಭಾವನೆ ಸಿಗುತ್ತದೆ. ಆ ಬಳಿಕ ಉಳಿದ ಕಲಾವಿದರಿಗೆ. ಹೆಚಿ ಸಂದರ್ಭದಲ್ಲಿ ನಿರ್ದೇಶಕರಿಗೂ ದೊಡ್ಡ ಮಟ್ಟದ ಸಂಭಾವನೆ ನೀಡುವುದಿಲ್ಲ ಎನ್ನಬಹುದು. ಆದರೆ, ಈಗ ಕಾಲ ಬದಲಾಗಿದೆ. ನಿರ್ದೇಶಕರು ಕೂಡ ಹೀರೋಗೆ ಸರಿಸಾಟಿಯಾಗಿ ಸಂಭಾವನೆ ಪಡೆಯುತ್ತಾರೆ. ಇದಕ್ಕೆ ಹೊಸ ಉದಾಹರಣೆ ಲೋಕೇಶ್ ಕನಗರಾಜ್. ಅವರು ರಜನಿಕಾಂತ್ ನಟನೆಯ 'ಕೂಲಿ' ಸಿನಿಮಾ ನಿರ್ದೇಶನ ಮಾಡಿದ್ದು, ಇದಕ್ಕಾಗಿ ದೊಡ್ಡ ಮಟ್ಟದಲ್ಲಿ ಸಂಭಾವನೆ ಪಡೆದ ವಿಚಾರ ರಿವೀಲ್ ಆಗಿದೆ. ಲೋಕೇಶ್ ಕನಗರಾಜ್ ಅವರು 'ಕೂಲಿ' ಚಿತ್ರಕ್ಕಾಗಿ ಸಾಕಷ್ಟು ಶ್ರಮಿಸಿದ್ದಾರೆ. ಈ ಸಿನಿಮಾ ಆಗಸ್ಟ್ 14ರಂದು ರಿಲೀಸ್ ಆಗಲಿದೆ ಕನ್ನಡದ ಉಪೇಂದ್ರ, ತೆಲುಗಿನ ಅಕ್ಕಿನೇನಿ ನಾಗಾರ್ಜುನ ಹಾಗೂ ಆಮಿರ್ ಖಾನ್ ಅವರ ಅತಿಥಿ ಪಾತ್ರವನ್ನು ಈ ಚಿತ್ರದಲ್ಲಿ ನೀವು ನೋಡಬಹುದು. ಈ ಚಿತ್ರಕ್ಕಾಗಿ ಲೋಕೇಶ್ ಅವರು ಬರೋಬ್ಬರಿ 50 ಕೋಟಿ ರೂಪಾಯಿ ಸಂಭಾವನೆ ಪಡೆದುಕೊಂಡಿದ್ದಾರೆ. ಇದಕ್ಕೆ ಕಾರಣವನ್ನೂ ಅವರು ನೀಡಿದ್ದಾರೆ. 'ನೀವು ಸಿನಿಮಾಗೆ 50 ಕೋಟಿ ರೂ. ಪಡೆದುಕೊಂಡಿದ್ದರಂತೆ ಹೌದೇ' ಎಂದು ಕೇಳಲಾಯಿತು. ಇದಕ್ಕೆ ಅವರು ಆಸಕ್ತಿದಾಯಕ

# ಸಕಲ ಸರ್ಕಾರಿ ಗೌರವದೊಂದಿಗೆ ನೆರವೇರಿದ ಅಂತ್ಯಸಂಸ್ಕಾರ

ಸಾರ್ವಜನಿಕ ದರ್ಶನದ ಬಳಿಕ ಹುಟ್ಟೂರಿಗೆ



ಕನ್ನಡ ಚಿತ್ರರಂಗದ ಹಿರಿಯ ನಟಿ, ಅಭಿನಯ ಸರಸ್ವತಿ ಬಿ.ಸರೋಜಾದೇವಿ ಅವರ ಅಂತ್ಯಸಂಸ್ಕಾರ ಹುಟ್ಟೂರು ಚನ್ನಪಟ್ಟಣದ ದಶಾವರದಲ್ಲಿ ತಾಯಿಯ ಸಮಾಧಿ ಪಕ್ಕವೇ ನೆರವೇರಿದೆ. ಸಕಲ ಸರ್ಕಾರಿ ಗೌರವದೊಂದಿಗೆ, ಒಕ್ಕಲಿಗ ಸಂಪ್ರದಾಯದಂತೆ ಅಂತ್ಯಕ್ರಿಯೆ ನಡೆದಿದೆ. ಅಂತ್ಯಸಂಸ್ಕಾರಕ್ಕೂ ಮುನ್ನ ಅವರ ಪಾರ್ಥಿವ ಶರೀರವನ್ನು ಮೆರವಣಿಗೆ ಮೂಲಕ ತರಲಾಯಿತು. ಬಳಿಕ ಪಲ್ಲಕ್ಕಿಯಲ್ಲಿಟ್ಟು ಅವರ ಪಾರ್ಥಿವ ಶರೀರವನ್ನು ತಂದು ಅಂತ್ಯಸಂಸ್ಕಾರ ಮಾಡಲಾಯಿತು. ಸ್ಥಳದಲ್ಲಿ ನೂರಾರು ಜನ ಸೇರಿದ್ದರು. ಈ ಹಿಂದೆ, ಸರೋಜಾದೇವಿ ಬರೆದ ವಿಲ್ ಪ್ರಕಾರ, ಗಂಡ ಹರ್ಷ ಸಮಾಧಿ ಪಕ್ಕವೇ ಕೊಡಿಗೇಹಳ್ಳಿಯ ತೋಟದ ಮನೆಯಲ್ಲಿ ಅಂತ್ಯಸಂಸ್ಕಾರ ನೆರವೇರಿಸಬೇಕಿತ್ತು.

ಆದರೆ ಸರೋಜಾದೇವಿ ತೋಟದ ಪಕ್ಕ ಅಪಾರ್ಟ್‌ಮೆಂಟ್‌ಗಳು ತಲೆ ಎತ್ತಿರುವುದರಿಂದ ಚನ್ನಪಟ್ಟಣದ ದಶಾವರದ ಗ್ರಾಮದಲ್ಲಿ ಅಂತ್ಯಸಂಸ್ಕಾರ ನೆರವೇರಲಿದೆ. ಬೆಳಗ್ಗೆ 10 ಗಂಟೆಯವರೆಗೆ ಸಾರ್ವಜನಿಕ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿತ್ತು. ನಂತರ ಪಾರ್ಥಿವ ಶರೀರವನ್ನು ಚನ್ನಪಟ್ಟಣಕ್ಕೆ ಕೊಂಡೊಯ್ದು, ಚನ್ನಪಟ್ಟಣದ ಗಾಂಧಿ ಭವನದ ಬಳಿ ಸಾರ್ವಜನಿಕ ದರ್ಶನದ ಬಳಿಕ ಹುಟ್ಟೂರಿಗೆ ತರಲಾಯಿತು. ಪತಿ ಪಕ್ಕದಲ್ಲೇ ಅಂತ್ಯ ಸಂಸ್ಕಾರ ಮಾಡಬೇಕು ಎಂಬ ಆಸೆಯನ್ನು ಅಮ್ಮ ವ್ಯಕ್ತಪಡಿಸಿದ್ದರು.

# ಟಾಪ್ ಆರ್ಡರ್ 6 ರನ್ ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲೇ ಅತ್ಯಂತ ಕಳಪೆ ದಾಖಲೆ

ವೆಸ್ಟ್ ಇಂಡೀಸ್ ವಿರುದ್ಧದ ಮೂರನೇ ಟೆಸ್ಟ್ ಪಂದ್ಯದಲ್ಲಿ ಆಸ್ಟ್ರೇಲಿಯಾ ತಂಡ ಭರ್ಜರಿ ಜಯ ಸಾಧಿಸಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಆಸ್ಟ್ರೇಲಿಯಾ ಪ್ರಥಮ ಇನಿಂಗ್ಸ್‌ನಲ್ಲಿ 225 ರನ್ ಕಲೆಹಾಕಿದರೆ, ವೆಸ್ಟ್ ಇಂಡೀಸ್ ತಂಡವು 143 ರನ್‌ಗಳಿಸಿ ಆಲೌಟ್ ಆಯಿತು.

ದ್ವಿತೀಯ ಇನಿಂಗ್ಸ್‌ನಲ್ಲಿ ಆಸ್ಟ್ರೇಲಿಯಾ 121 ರನ್‌ಗಳಿಗೆ ಆಲೌಟ್ ಆಗಿದ್ದರು. ಅದರಂತೆ ಕೊನೆಯ ಇನಿಂಗ್ಸ್‌ನಲ್ಲಿ 204 ರನ್‌ಗಳ ಗುರಿ ಪಡೆದ ವೆಸ್ಟ್ ಇಂಡೀಸ್ ಕೇವಲ 27 ರನ್‌ಗಳಿಗೆ ಆಲೌಟ್ ಆಗಿದೆ. ಅಗ್ರ ಕ್ರಮಾಂಕದ 6 ಬ್ಯಾಟರ್‌ಗಳು ಕಲೆಹಾಕಿರುವುದು ಕೇವಲ 6 ರನ್‌ಗಳು ಮಾತ್ರ. ಈ ಆರು ರನ್‌ಗಳೊಂದಿಗೆ ಟೆಸ್ಟ್ ಇತಿಹಾಸದಲ್ಲೇ ಅತ್ಯಂತ ಕಳಪೆ ಆರಂಭ ಪಡೆದ ಅನಪೇಕ್ಷಿತ ದಾಖಲೆಯೊಂದು ವೆಸ್ಟ್ ಇಂಡೀಸ್ ತಂಡದ ಪಾಲಾಗಿದೆ. ಇದಕ್ಕೂ ಮುನ್ನ ಈ ಕೆಟ್ಟ ದಾಖಲೆ ಆಸ್ಟ್ರೇಲಿಯಾ ತಂಡದ ಹೆಸರಿನಲ್ಲಿತ್ತು.



ಜಮೈಕಾದ ಸಬೀನಾ ಪಾರ್ಕ್ ಮೈದಾನದಲ್ಲಿ ನಡೆದ ಆಸ್ಟ್ರೇಲಿಯಾ ವಿರುದ್ಧದ ಈ ಪಂದ್ಯದ ನಾಲ್ಕನೇ ಇನಿಂಗ್ಸ್‌ನಲ್ಲಿ ವೆಸ್ಟ್ ಇಂಡೀಸ್ ತಂಡವು 204 ರನ್‌ಗಳ ಗುರಿ ಪಡೆದಿತ್ತು. ಈ ಗುರಿಯನ್ನು ಬೆನ್ನತ್ತಲು ಆಗಮಿಸಿದ ವಿಂಡೀಸ್ ಆರಂಭಿಕ ದಾಂಡಿಗ ಜಾನ್ ಕ್ಯಾಂಪ್ಬೆಲ್ ಶೂನ್ಯಕ್ಕೆ ಔಟಾದರು. ಇದರ ಬೆನ್ನಲ್ಲೇ ಕ್ಲೆವಾನ್ ಅಯಂಡರ್ಸನ್ (0) ಕೂಡ ಸೊನ್ನೆ ಸುತ್ತಿದರು. ಇನ್ನು ಮೈಕೆಲ್ ಲೂಯಿಸ್ 4 ರನ್ ಕಲೆಹಾಕಿ ವಿಕೆಟ್ ಒಪ್ಪಿಸಿದರೆ, ಬ್ರಾಂಡನ್ ಕಿಂಗ್ಸ್ (0) ಹಾಗೂ ರೋಸ್ಟನ್ ಚೇಸ್ (0) ಶೂನ್ಯಕ್ಕೆ ವಿಕೆಟ್ ಒಪ್ಪಿಸಿದರು.

ಇನ್ನು ಶಾಯ್ ಹೋಪ್ 2 ರನ್‌ಗಳಿಸಿ ಔಟಾದರು. ಈ ಮೂಲಕ ವೆಸ್ಟ್ ಇಂಡೀಸ್ ತಂಡದ ಅಗ್ರ ಕ್ರಮಾಂಕದ ಆರು ಬ್ಯಾಟರ್‌ಗಳು ಜೊತೆಗೂಡಿ ಕಲೆಹಾಕಿದ್ದು ಕೇವಲ 6 ರನ್‌ಗಳು ಮಾತ್ರ. ಇದು ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲೇ ಟಾಪ್-6 ಬ್ಯಾಟರ್‌ಗಳು ಜೊತೆಗೂಡಿ ಕಲೆಹಾಕಿದ ಅತ್ಯಂತ ಕಡಿಮೆ ಮೊತ್ತ. ಈ ಮೂಲಕ ವೆಸ್ಟ್ ಇಂಡೀಸ್ ದಾಂಡಿಗರು ಆಸ್ಟ್ರೇಲಿಯಾ ತಂಡದ ಹೆಸರಿನಲ್ಲಿತ್ತ ಕಳಪೆ ದಾಖಲೆಯೊಂದನ್ನು ತಮ್ಮದಾಗಿಸಿಕೊಂಡಿದ್ದಾರೆ. ಇದಕ್ಕೂ ಮುನ್ನ ಆಸ್ಟ್ರೇಲಿಯಾ ತಂಡದ ಟಾಪ್-6 ಬ್ಯಾಟರ್‌ಗಳು 12 ರನ್‌ಗಳಿಸಿದ್ದು ಅತ್ಯಂತ ಹೀನಾಯ ಪ್ರದರ್ಶನವಾಗಿತ್ತು. 1888 ರಲ್ಲಿ ಸಿಡ್ನಿಯಲ್ಲಿ ನಡೆದ ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಪಂದ್ಯದ 2ನೇ ಇನಿಂಗ್ಸ್‌ನಲ್ಲಿ ಆಸ್ಟ್ರೇಲಿಯಾದ ಅಗ್ರ ಕ್ರಮಾಂಕದ 6 ಬ್ಯಾಟರ್‌ಗಳು 12 ರನ್‌ಗಳಿಸಿ ವಿಕೆಟ್ ಒಪ್ಪಿಸಿದ್ದರು.

ಇದೀಗ ಇದಕ್ಕಿಂತಲೂ ಕೆಟ್ಟ ಪ್ರದರ್ಶನ ನೀಡಿ ವೆಸ್ಟ್ ಇಂಡೀಸ್ ಭಾರೀ ಮುಖಭಂಗ ಅನುಭವಿಸಿದೆ. ಇನ್ನು ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಆಸ್ಟ್ರೇಲಿಯಾ ಪ್ರಥಮ ಇನಿಂಗ್ಸ್‌ನಲ್ಲಿ 225 ರನ್ ಕಲೆಹಾಕಿದರೆ, ವೆಸ್ಟ್ ಇಂಡೀಸ್ ತಂಡವು 143 ರನ್‌ಗಳಿಸಿ ಆಲೌಟ್ ಆಯಿತು. ದ್ವಿತೀಯ ಇನಿಂಗ್ಸ್‌ನಲ್ಲಿ ಆಸ್ಟ್ರೇಲಿಯಾ 121 ರನ್‌ಗಳಿಗೆ ಆಲೌಟ್ ಆಗಿದ್ದರು. ಅದರಂತೆ ಕೊನೆಯ ಇನಿಂಗ್ಸ್‌ನಲ್ಲಿ 204 ರನ್‌ಗಳ ಗುರಿ ಪಡೆದ ವೆಸ್ಟ್ ಇಂಡೀಸ್ ಕೇವಲ 27 ರನ್‌ಗಳಿಗೆ ಆಲೌಟ್ ಆಗುವ ಮೂಲಕ ಟೆಸ್ಟ್ ಇತಿಹಾಸದಲ್ಲೇ ಅತೀ ರನ್ ಗಳಿಸಿದ 2ನೇ ತಂಡ ಎನಿಸಿಕೊಂಡಿದೆ.

# ಡಬ್ಲ್ಯುಸಿಎಲ್ 2025 ಟೂರ್ನಿಗೆ ಭಾರತ ತಂಡ ಪ್ರಕಟ

ಜುಲೈ 18 ರಿಂದ ಶುರು

ವರ್ಲ್ಡ್ ಚಾಂಪಿಯನ್‌ಶಿಪ್ ಆಫ್ ಲೆಜೆಂಡ್ಸ್ ಎಂಬುದು ಮಾಜಿ ಕ್ರಿಕೆಟಿಗರ ಟಿ20 ಟೂರ್ನಿ. ಈ ಟೂರ್ನಿಯಲ್ಲಿ ಇಂಡಿಯಾ ಚಾಂಪಿಯನ್ಸ್, ಪಾಕಿಸ್ತಾನ್ ಚಾಂಪಿಯನ್ಸ್, ಇಂಗ್ಲೆಂಡ್ ಚಾಂಪಿಯನ್ಸ್, ಆಸ್ಟ್ರೇಲಿಯಾ ಚಾಂಪಿಯನ್ಸ್, ವೆಸ್ಟ್ ಇಂಡೀಸ್ ಚಾಂಪಿಯನ್ಸ್ ಹಾಗೂ ಸೌತ್ ಆಫ್ರಿಕಾ ಚಾಂಪಿಯನ್ಸ್ ತಂಡಗಳು ಕಣಕ್ಕಿಳಿಯಲಿವೆ. ವರ್ಲ್ಡ್ ಚಾಂಪಿಯನ್‌ಶಿಪ್ ಆಫ್ ಲೆಜೆಂಡ್ಸ್ ಟಿ20 ಟೂರ್ನಿಗೆ ಇಂಡಿಯಾ ಚಾಂಪಿಯನ್ಸ್ ತಂಡವನ್ನು ಪ್ರಕಟಿಸಲಾಗಿದೆ. 17 ಸದಸ್ಯರನ್ನು ಒಳಗೊಂಡಿರುವ ಈ ಚಾಂಪಿಯನ್ಸ್ ತಂಡವನ್ನು ಟೀಮ್ ಇಂಡಿಯಾದ ಮಾಜಿ ಆಲ್‌ರೌಂಡರ್ ಯುವರಾಜ್ ಸಿಂಗ್ ಮುನ್ನಡೆಸಲಿದ್ದಾರೆ. ಇನ್ನು ತಂಡದಲ್ಲಿ ಅನುಭವಿ ಕ್ರಿಕೆಟಿಗರಾದ ಸುರೇಶ್ ರೈನಾ, ಶಿಖರ್ ಧವನ್, ಇರ್ಫಾನ್ ಪಠಾಣ್, ಯೂಸುಫ್ ಪಠಾಣ್ ಸೇರಿದಂತೆ ಅನೇಕರು ಕಾಣಿಸಿಕೊಂಡಿದ್ದಾರೆ. ಹಾಗೆಯೇ ಕರ್ನಾಟಕದ ಮಾಜಿ ಕ್ರಿಕೆಟಿಗರಾದ ರಾಬಿನ್ ಉತ್ತಪ್ಪ ಹಾಗೂ ವಿನಯ್ ಕುಮಾರ್ ಕೂಡ ಇಂಡಿಯಾ ಚಾಂಪಿಯನ್ಸ್ ತಂಡದಲ್ಲಿದ್ದಾರೆ. 2024 ರಲ್ಲಿ ನಡೆದ ಚೊಚ್ಚಲ ಟೂರ್ನಿಯ ಫೈನಲ್‌ನಲ್ಲಿ ಪಾಕಿಸ್ತಾನ್ ಚಾಂಪಿಯನ್ಸ್ ತಂಡಕ್ಕೆ ಸೋಲುಣಿಸಿ ಇಂಡಿಯಾ ಚಾಂಪಿಯನ್ಸ್ ಟ್ರೋಫಿ ಗೆದ್ದಿದ್ದರು. ಇದೀಗ ಮತ್ತೊಮ್ಮೆ 5 ತಂಡಗಳನ್ನು ಹಿಂದಿಕ್ಕಿ 2025 ರಲ್ಲೂ ಚಾಂಪಿಯನ್ ಪಟ್ಟ ಅಲಂಕರಿಸುವ ವಿಶ್ವಾಸದಲ್ಲಿದೆ ಇಂಡಿಯಾ ಚಾಂಪಿಯನ್ಸ್ ಪಡೆ. ಇನ್ನು ವರ್ಲ್ಡ್ ಚಾಂಪಿಯನ್‌ಶಿಪ್ ಆಫ್ ಲೆಜೆಂಡ್ಸ್ ಟಿ20 ಟೂರ್ನಿಯ ಎರಡನೇ ಸೀಸನ್ ಜುಲೈ 18 ರಿಂದ ಶುರುವಾಗಲಿದೆ. ಇಂಗ್ಲೆಂಡ್‌ನಲ್ಲಿ ಜರುಗಲಿರುವ ಆರು ತಂಡಗಳ ನಡುವಣ ಈ ಟಿ20 ಟೂರ್ನಿಯ ಫೈನಲ್ ಪಂದ್ಯವು ಆಗಸ್ಟ್ 2 ರಂದು ಬರ್ಮಿಂಗ್ ಹ್ಯಾಮ್‌ನ ಎಡ್ಜ್‌ಬಾಸ್ಟನ್ ಸ್ಟೇಡಿಯಂನಲ್ಲಿ ನಡೆಯಲಿದೆ.

**ಇಂಡಿಯಾ ಚಾಂಪಿಯನ್ಸ್ ತಂಡ:** ಯುವರಾಜ್ ಸಿಂಗ್ (ನಾಯಕ), ಶಿಖರ್ ಧವನ್, ಹರ್ಭಜನ್ ಸಿಂಗ್, ಸುರೇಶ್ ರೈನಾ, ಸೌರಭ್ ತಿವಾರಿ, ಇರ್ಫಾನ್ ಪಠಾಣ್, ಯೂಸುಫ್ ಪಠಾಣ್, ರಾಬಿನ್ ಉತ್ತಪ್ಪ, ಅಂಬಾಟಿ ರಾಯುಡು, ಗುರುಕ್ರೀತ್ ಮಾನ್



# ವಿಶ್ವದಾಖಲೆ ನಿರ್ಮಿಸಿದ ಮಿಚೆಲ್ ಸ್ಟಾರ್ಕ್

9 ರನ್ ನೀಡಿ 6 ವಿಕೆಟ್ ಕಬಳಿಸಿದ ಸ್ಟಾರ್ಕ್



ವೆಸ್ಟ್ ಇಂಡೀಸ್ ವಿರುದ್ಧದ ಮೂರನೇ ಟೆಸ್ಟ್ ಪಂದ್ಯದಲ್ಲಿ ಆಸ್ಟ್ರೇಲಿಯಾ ತಂಡ ಭರ್ಜರಿ ಜಯ ಸಾಧಿಸಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಆಸ್ಟ್ರೇಲಿಯಾ ಪ್ರಥಮ ಇನಿಂಗ್ಸ್‌ನಲ್ಲಿ 225 ರನ್ ಕಲೆಹಾಕಿದರೆ, ವೆಸ್ಟ್ ಇಂಡೀಸ್ ತಂಡವು 143 ರನ್ ಗಳಿಸಿ ಆಲೌಟ್ ಆಯಿತು. ಇನ್ನು ಆಸ್ಟ್ರೇಲಿಯಾ ದ್ವಿತೀಯ ಇನಿಂಗ್ಸ್‌ನಲ್ಲಿ 121 ರನ್‌ಗಳಿಗೆ ಆಲೌಟ್ ಆಗಿದ್ದರು.

ಅದರಂತೆ ಕೊನೆಯ ಇನಿಂಗ್ಸ್‌ನಲ್ಲಿ 204 ರನ್‌ಗಳ ಗುರಿ ಪಡೆದ ವೆಸ್ಟ್ ಇಂಡೀಸ್ ಕೇವಲ 27 ರನ್‌ಗಳಿಗೆ ಆಲೌಟ್ ಆಗಿದೆ. ಆಸ್ಟ್ರೇಲಿಯಾ ವೇಗಿ ಮಿಚೆಲ್ ಸ್ಟಾರ್ಕ್ ಟೆಸ್ಟ್ ಕ್ರಿಕೆಟ್‌ನಲ್ಲಿ ಹೊಸ ವಿಶ್ವದಾಖಲೆ ನಿರ್ಮಿಸಿದ್ದಾರೆ. ಅದು ಕೂಡ ಕೇವಲ 15 ಎಸೆತಗಳಲ್ಲಿ. ಜಮೈಕಾದ ಸಬೀನಾ ಪಾರ್ಕ್ ಮೈದಾನದಲ್ಲಿ ನಡೆದ ವೆಸ್ಟ್ ಇಂಡೀಸ್ ವಿರುದ್ಧದ ಮೂರನೇ ಟೆಸ್ಟ್ ಪಂದ್ಯದಲ್ಲಿ ಸ್ಟಾರ್ಕ್ ಭರ್ಜರಿ ಬೌಲಿಂಗ್ ಸಂಘಟಿಸಿದ್ದರು. ಈ ಭರ್ಜರಿ ಬೌಲಿಂಗ್‌ನೊಂದಿಗೆ ವರ್ಲ್ಡ್ ರೆಕಾರ್ಡ್ ತನ್ನದಾಗಿಸಿಕೊಳ್ಳುವಲ್ಲಿ ಆಸೀಸ್ ವೇಗಿ ಯಶಸ್ವಿಯಾಗಿದ್ದಾರೆ.

ಈ ಪಂದ್ಯದ ದ್ವಿತೀಯ ಇನಿಂಗ್ಸ್‌ನಲ್ಲಿ ಮೊದಲ ಓವರ್ ಎಸೆದ ಮಿಚೆಲ್ ಸ್ಟಾರ್ಕ್ ಯಾವುದೇ ರನ್ ನೀಡದೇ 3 ವಿಕೆಟ್ ಕಬಳಿಸಿದ್ದರು. 3ನೇ ಓವರ್‌ನಲ್ಲಿ 6 ರನ್ ನೀಡಿ ಮತ್ತೆರಡು ವಿಕೆಟ್‌ಗಳನ್ನು ಪಡೆದರು. ಕೇವಲ 15 ಎಸೆತಗಳಲ್ಲಿ 5 ವಿಕೆಟ್ ಕಿತ್ತರು. ಇದರೊಂದಿಗೆ ಟೆಸ್ಟ್ ಕ್ರಿಕೆಟ್‌ನಲ್ಲಿ ಅತೀ ಕಡಿಮೆ ಎಸೆತಗಳ ಮೂಲಕ 5 ವಿಕೆಟ್ ಕಬಳಿಸಿದ ವಿಶ್ವದಾಖಲೆ ಸ್ಟಾರ್ಕ್ ಪಾಲಾಯಿತು. ಇದಕ್ಕೂ ಮುನ್ನ ಈ ಭರ್ಜರಿ ದಾಖಲೆ ಆಸ್ಟ್ರೇಲಿಯಾದ ಎರ್ನೀ ಟೋಶ್ಯಾಕ್, ಇಂಗ್ಲೆಂಡ್‌ನ ಸ್ಟುವರ್ಟ್ ಬ್ರಾಡ್ ಹಾಗೂ ಆಸ್ಟ್ರೇಲಿಯಾದ ಸ್ಕಾಟ್ ಬೋಲ್ಯಾಂಡ್ ಹೆಸರಿನಲ್ಲಿತ್ತು. ಎರ್ನೀ ಟೋಶ್ಯಾಕ್ 1947 ರಲ್ಲಿ ಟೀಮ್ ಇಂಡಿಯಾ ವಿರುದ್ಧ 19 ಎಸೆತಗಳಲ್ಲಿ 5 ವಿಕೆಟ್ ಕಬಳಿಸಿದ್ದರು. ಇನ್ನು ಸ್ಟುವರ್ಟ್ ಬ್ರಾಡ್ 2015 ರಲ್ಲಿ ಆಸ್ಟ್ರೇಲಿಯಾ ವಿರುದ್ಧ 19 ಎಸೆತಗಳಲ್ಲಿ 5 ವಿಕೆಟ್‌ಗಳನ್ನು ಉರುಳಿಸಿದ್ದರು. ಇನ್ನು 2021 ರಲ್ಲಿ ಸ್ಕಾಟ್ ಬೋಲ್ಯಾಂಡ್ ಇಂಗ್ಲೆಂಡ್ ವಿರುದ್ಧ 19 ಎಸೆತಗಳಲ್ಲಿ 5 ವಿಕೆಟ್ ಪಡೆದಿದ್ದರು. ಇದೀಗ ಈ ಮೂವರ ವಿಶ್ವದಾಖಲೆಯನ್ನು ಅಳಿಸಿ ಹಾಕಿ ಹೊಸ ಇತಿಹಾಸ ನಿರ್ಮಿಸುವಲ್ಲಿ ಮಿಚೆಲ್ ಸ್ಟಾರ್ಕ್ ಯಶಸ್ವಿಯಾಗಿದ್ದಾರೆ. ವೆಸ್ಟ್ ಇಂಡೀಸ್ ವಿರುದ್ಧದ ಪಂದ್ಯದಲ್ಲಿ 2.3 ಓವರ್‌ಗಳಲ್ಲಿ 5 ವಿಕೆಟ್ ಕಬಳಿಸುವ ಮೂಲಕ, ಟೆಸ್ಟ್ ಇತಿಹಾಸದಲ್ಲೇ ಅತೀ ಕಡಿಮೆ ಎಸೆತಗಳಲ್ಲಿ ಐದು ವಿಕೆಟ್‌ಗಳನ್ನು ಉರುಳಿಸಿದ ಬೌಲರ್ ಎಂಬ ವಿಶ್ವದಾಖಲೆಯನ್ನು ಸ್ಟಾರ್ಕ್ ತನ್ನದಾಗಿಸಿಕೊಂಡಿದ್ದಾರೆ.

# ಒಲಿಂಪಿಕ್ಸ್ ಕ್ರಿಕೆಟ್ ಪಂದ್ಯಾವಳಿಗೆ ದಿನಾಂಕ ನಿಗದಿ

1900ರಲ್ಲಿ ನಡೆದ ಬೇಸಿಗೆ ಒಲಿಂಪಿಕ್ಸ್‌ನಲ್ಲಿ ಒಮ್ಮೆ ಮಾತ್ರ ಕ್ರಿಕೆಟ್ ಪಂದ್ಯವೊಂದನ್ನು ಆಡಲಾಗಿತ್ತು. 128 ವರ್ಷಗಳ ಹಿಂದೆ ನಡೆದ ಈ ಪಂದ್ಯದಲ್ಲಿ ಗ್ರೇಟ್ ಬ್ರಿಟನ್ ಮತ್ತು ಫ್ರಾನ್ಸ್ ದೇಶಗಳು ಸೆಣಸಿದ್ದವು. ಈ ಪಂದ್ಯದಲ್ಲಿ ಫ್ರಾನ್ಸ್ ತಂಡವನ್ನು 185 ರನ್‌ಗಳಿಂದ ಸೋಲಿಸಿ ಗ್ರೇಟ್ ಬ್ರಿಟನ್ ಚಿನ್ನದ ಪದಕ ಗೆದ್ದುಕೊಂಡಿತ್ತು. ಇದೀಗ ಮತ್ತೆ ಒಲಿಂಪಿಕ್ಸ್‌ನಲ್ಲಿ ಕ್ರಿಕೆಟ್ ಪಂದ್ಯಗಳನ್ನು ಆಯೋಜಿಸಲು ನಿರ್ಧರಿಸಲಾಗಿದೆ. 2028ರ ಒಲಿಂಪಿಕ್ಸ್ ಕ್ರೀಡಾಕೂಟದಲ್ಲಿ ಕ್ರಿಕೆಟ್ ಅನ್ನು ಸೇರ್ಪಡೆಗೊಳಿಸಲಾಗಿದೆ. ಅದರಂತೆ ಲಾಸ್ ಏಂಜಲೀಸ್‌ನಲ್ಲಿ ನಡೆಯಲಿರುವ 2028 ರ ಒಲಿಂಪಿಕ್ಸ್‌ನಲ್ಲಿ ಕ್ರಿಕೆಟ್ ಪಂದ್ಯಾಟಗಳು ಇರಲಿದೆ.



ಈ ಪಂದ್ಯಾವಳಿಯು ಜುಲೈ 12ರಿಂದ ಶುರು ಆಗಲಿದ್ದು, ಫೈನಲ್ ಪಂದ್ಯವು ಜುಲೈ 29 ರಂದು ನಡೆಯಲಿದೆ. ಕ್ಯಾಲಿಫೋರ್ನಿಯಾದ ಪೊಮೊನಾದಲ್ಲಿರುವ ಫೇರ್‌ಗ್ರೌಂಡ್ಸ್ ಕ್ರಿಕೆಟ್ ಕ್ರೀಡಾಂಗಣವು ಪಂದ್ಯಾವಳಿಯನ್ನು ಆಯೋಜಿಸಲು ನಿರ್ಧರಿಸಲಾಗಿದೆ.

ಮೊದಲ ಹಂತದ ಕ್ರಿಕೆಟ್ ಪಂದ್ಯಗಳು ಜುಲೈ 12 ರಿಂದ 18 ರವರೆಗೆ ನಡೆಯಲಿದ್ದು, ಇದಾದ ನಂತರ ಜುಲೈ 22 ರಿಂದ 28 ರವರೆಗೆ ಎರಡನೇ ಹಂತದ ಮ್ಯಾಚ್‌ಗಳು ನಡೆಯಲಿದೆ. ಇನ್ನು ಅಂತಿಮ ಪಂದ್ಯವು ಜುಲೈ 29 ರಂದು ಫೇರ್‌ಗ್ರೌಂಡ್ಸ್ ಕ್ರಿಕೆಟ್ ಕ್ರೀಡಾಂಗಣವು ಜರುಗಲಿದೆ. ಒಲಿಂಪಿಕ್ಸ್ ಕ್ರೀಡಾಕೂಟದಲ್ಲಿ ಕ್ರಿಕೆಟ್ ಅನ್ನು ಟಿ20 ಮಾದರಿಯಲ್ಲಿ ಆಯೋಜಿಸಲಾಗುತ್ತದೆ. ಹೀಗಾಗಿ ಐಸಿಸಿ ಟಿ20 ತಂಡಗಳ ಶ್ರೇಯಾಂಕಗಳ ಆಧಾರದ ಮೇಲೆ ತಂಡಗಳು ಅರ್ಹತೆ ಪಡೆಯಲಿವೆ. ಅಂದರೆ ಒಲಿಂಪಿಕ್ಸ್ ಅರ್ಹತೆಗೆ ನಿಗದಿ ಮಾಡಲಾದ ಸಮಯದ ವೇಳೆ ಐಸಿಸಿ ತಂಡಗಳ ಶ್ರೇಯಾಂಕವನ್ನು ಪರಿಗಣಿಸಿ 6 ತಂಡಗಳನ್ನು ಆಯ್ಕೆ ಮಾಡಲಾಗುತ್ತದೆ ಎಂದು ತಿಳಿದು ಬಂದಿದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966